ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ಮೇ 21 ಭಾನುವಾರ 2023

₹4

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ: Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ/ಜಾಹೀರಾತಿಗಾಗಿ – ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸಂಪುಟ: 44 | ಸಂಚಿಕೆ: 35 | ಪುಟಗಳು: 12

ಸುದ್ದಿ ಮತ್ತು ಫೋಟೋಗೆ: news@mysurumithra.com ಜಾಹೀರಾತು: ad@mysurumithra.com

ಸಿಇಟಿಗೆ ಮೈಸೂರಲ್ಲಿ 12,492 ವಿದ್ಯಾರ್ಥಿಗಳು ಹಾಜರು



ಮೈಸೂರು, ಮೇ 20(ಆರ್‌ಕೆ)– ವೃತ್ತಿಪರ ಪದವಿ ಕೋರ್ಸ್‌ಗಳ ಪ್ರವೇಶಾತಿಗಾಗಿ ಇಂದಿನಿಂದ ಎರಡು ದಿನಗಳ ಸಿಇಟಿ (ಸಾಮಾನ್ಯ ಪ್ರವೇಶ ಪರೀಕ್ಷೆ) ಆರಂಭವಾಯಿತು.

ಮೈಸೂರಿನ ಶಾರದಾ ವಿಲಾಸ, ಸೆಂಟ್ ಫಿಲೋಮಿನಾ, ಡಿ.ಬನುಮಯ್ಯ, ಟೆರೇಷಿಯನ್, ಜೆಎಸ್‌ಎಸ್, ಮಹಾರಾಜ, ಮರಿಮಲ್ಲಪ್ಪ, ಎಸ್‌ಬಿಆರ್‌ಆರ್, ಮಾತೃಮಂಡಳಿ, ವಿದ್ಯಾವರ್ಧಕ, ಮಹಾರಾಣಿ, ಎಸ್‌ಡಿಎಂ, ನಟರಾಜ, ಗೋಪಾಲಸ್ವಾಮಿ, ಸದ್ವಿದ್ಯಾ, ಕಾವೇರಿ ಸೇರಿದಂತೆ 29 ಕೇಂದ್ರಗಳಲ್ಲಿ ಪರೀಕ್ಷೆಗಳು ನಡೆಯುತ್ತಿವೆ.

ಮೈಸೂರು ಜಿಲ್ಲೆಯ 12,492 ವಿದ್ಯಾರ್ಥಿಗಳು ಸಿಇಟಿಗೆ ಹಾಜರಾಗಿದ್ದರು. ಕರ್ನಾಟಕ ಪರೀಕ್ಷಾ ಪ್ರಾಧಿಕಾರ (ಕೆಇಎ)ವು ಇಂಜಿನಿಯರಿಂಗ್, ಟೆಕ್ನಾಲಜಿ, ಬಿ–ಫಾರ್ಮ, ಡಿ–ಫಾರ್ಮ, ಕೃಷಿ ಕೋರ್ಸ್ (Farm Science) ಮತ್ತು ವೆಟರ್ನರಿ ಸೈನ್ಸಸ್ ಕೋರ್ಸುಗಳಿಗೆ ಕರ್ನಾಟಕದ ಕಾಲೇಜುಗಳಲ್ಲಿ ಪ್ರವೇಶಾತಿ ಪಡೆಯಲು ಇಂದು ಮತ್ತು ನಾಳೆ (ಮೇ 21) ಪ್ರವೇಶ ಪರೀಕ್ಷೆಗಳಿಗೆ ಹಾಜರಾಗುತ್ತಿದ್ದಾರೆ.

ಮೊದಲ ದಿನವಾದ ಇಂದು ಬೆಳಗ್ಗೆ 10.30ರಿಂದ 11.50 ಗಂಟೆವರೆಗೆ ಬಯಾಲಜಿ, ಮಧ್ಯಾಹ್ನ 2.30ರಿಂದ 3.50 ಗಂಟೆವರೆಗೆ ಗಣಿತಶಾಸ್ತ್ರ ನಾಳೆ (ಮೇ 21) ಬೆಳಗ್ಗೆ ಭೌತಶಾಸ್ತ್ರ ಮತ್ತು ಮಧ್ಯಾಹ್ನ ರಸಾಯನಶಾಸ್ತ್ರ ವಿಷಯದ ಪರೀಕ್ಷೆಗಳು ನಡೆಯಲಿವೆ. ಪ್ರತೀ ಪರೀಕ್ಷಾ ಕೇಂದ್ರಗಳಲ್ಲಿ ಕುಡಿಯುವ ನೀರು, ಮಾಹಿತಿ ಫಲಕಗಳು ಸೇರಿದಂತೆ ವಿದ್ಯಾರ್ಥಿಗಳಿಗೆ ಅಗತ್ಯ ಮೂಲಸೌಕರ್ಯ ಕಲ್ಪಿಸಲಾಗಿದ್ದು, ಪದವಿ ಪೂರ್ವ ಮತ್ತು ವೃತ್ತಿ ಶಿಕ್ಷಣ ಇಲಾಖೆ ಉಪ ನಿರ್ದೇಶಕಿ ನಾಗಮ್ಮ ಅವರು ಶನಿವಾರ ಕೆಲ ಕೇಂದ್ರಗಳಿಗೆ ಭೇಟಿ ನೀಡಿ ಪರೀಕ್ಷೆಗಳನ್ನು ಪರಿಶೀಲಿಸಿದರು. ಪೋಷಕರು ತಮ್ಮ ಮಕ್ಕಳನ್ನು ಕರೆತಂದು ಪರೀಕ್ಷಾ ಕೇಂದ್ರಕ್ಕೆ ಬಿಟ್ಟು ಹೊರಗೆ ಕಾಯುತ್ತಿದ್ದು, ಪರೀಕ್ಷೆ ಬರೆದು ಬಂದ ಮೇಲೆ ಅವರನ್ನು ವಿಚಾರಿಸಿ ಮುಂದಿನ ವಿಷಯದ ಬಗ್ಗೆ ಸಿದ್ಧತೆ ಮಾಡಿಸುತ್ತಿದ್ದುದು ಸಾಮಾನ್ಯವಾಗಿತ್ತು.

ಗೃಹಶೋಭೆ ಮೇಳಕ್ಕೆ ಶಾಸಕ ಶ್ರೀವತ್ಸ ಚಾಲನೆ



ಮೈಸೂರು, ಮೇ 20(ಸಿಎನ್)–ನಗರದ ಮಹಾರಾಜ ಕಾಲೇಜು ಮೈದಾನದಲ್ಲಿ ಆಯೋಜಿಸಿರುವ ಗೃಹಶೋಭೆ ಅಂತಾರಾಷ್ಟ್ರೀಯ ವಾಣಿಜ್ಯ ಮೇಳ ಹಾಗೂ ಪ್ರದರ್ಶನಕ್ಕೆ ಕೆ.ಆರ್.ಕ್ಷೇತ್ರದ ಶಾಸಕ ಶ್ರೀವತ್ಸ ಚಾಲನೆ ನೀಡಿದರು.

ಬಳಿಕ ಮಾತನಾಡಿದ ಅವರು, ಪ್ರತಿದಿನ ಬಳಸುವಂತಹ ವಸ್ತುಗಳು, ಸೌರಶಕ್ತಿ, ವಿದ್ಯುತ್ ಉಪಕರಣಗಳು, ಜಲಸಂರಕ್ಷಣಾ ವಿಧಾನಗಳು, ನವೀನ ಮಾದರಿಯ ನೆಲಹಾಸುಗಳು, ಅಡುಗೆ ಮನೆ ಮತ್ತು ಸ್ನಾನದ ಮನೆಯ ಅಲಂಕಾರಿಕ ಸಾಮಗ್ರಿಗಳು, ಗ್ರಾಹಕರಿಗೆ ಒಂದೇ ಸೂರಿನಡಿ ದೊರೆಯುತ್ತಿದೆ. ಗೃಹಶೋಭೆ ವಸ್ತುಪ್ರದರ್ಶನ ನಿಜಕ್ಕೂ ಜನೋಪಯೋಗಿಯಾಗಿದೆ. ನಮ್ಮ ಮೈಸೂರಿನ ಜನತೆ ಇಲ್ಲಿಗೆ ಭೇಟಿ ನೀಡಿ ತಮಗೆ ಬೇಕಾದ ಉಪಯುಕ್ತ ವಸ್ತುಗಳನ್ನು ಕೊಂಡೊಯ್ಯಲು ಸಹಕಾರಿಯಾಗಿದೆ ಎಂದರು.

ಕಾರ್ಯಕ್ರಮದ ಆಯೋಜಕ ನಾಗಸುಂದರ ಮಾತನಾಡಿ, ಹೊರಾಂಗಣ ನೆಲಹಾಸುಗಳು, ನವೀನ ರೀತಿಯ ಬಣ್ಣ ಮತ್ತು ಸಾಮಗ್ರಿಗಳು, ಉತ್ಪಾದನೆಗೊಂಡ ಮರಳು ಮುಂತಾದ ದೇಶ ಮತ್ತು ವಿದೇಶಗಳ ಕಟ್ಟಡ ಸಾಮಗ್ರಿಗಳು ಲಭ್ಯವಿರಲಿದೆ ಎಂದು ಹೇಳಿದರು.

10 ದಿನಗಳ ಕಾಲ ನಡೆಯುವ ವಸ್ತುಪ್ರದರ್ಶನ ಬೆಳಗ್ಗೆ 10ರಿಂದ ರಾತ್ರಿ 9ರವರೆಗೆ ಜರುಗಲಿದೆ. ಈ ಬಾರಿಯೂ ಪ್ರದರ್ಶನಕ್ಕೆ 30 ರೂ. ಶುಲ್ಕ ನಿಗದಿಪಡಿಸಲಾಗಿದೆ. ಜೊತೆಗೆ ಗ್ರಾಹಕರ ಆಕರ್ಷಣೆಗಾಗಿ ವಿಂಟೇಜ್‌ಕಾರ್ಸ್ ಹಾಗೂ ರೆಟ್ರೋ ಶೈಲಿ ದ್ವಿಚಕ್ರವಾಹನಗಳ ಪ್ರದರ್ಶನ ಏರ್ಪಡಿಸಲಾಗಿದೆ. 10 ದಿನಗಳ ಕಾಲ ಬೈಕ್ ಸಾಹಸ ಪ್ರದರ್ಶನ ನಡೆಯಲಿದೆ ಎಂದು ಮಾಹಿತಿ ನೀಡಿದರು. ಕಾರ್ಯಕ್ರಮದಲ್ಲಿ ಗೃಹಶೋಭೆ ವ್ಯವಸ್ಥಾಪಕ ನಿರ್ದೇಶಕ ಎಂ.ಎಸ್.ನಾಗಚಂದ್ರ, ವ್ಯವಸ್ಥಾಪಕರಾದ ಎಸ್.ಕೃಷ್ಣ, ಮುರುಳಿ ಚಂದ್ರ, ವಿಶ್ವಾಸ್, ನವೀನ್ ಮತ್ತಿತರರು ಉಪಸ್ಥಿತರಿದ್ದರು.

ಜೂ.9ರಿಂದ ಶ್ರೀರಂಗಪಟ್ಟಣದಲ್ಲಿ ಸುದರ್ಶನ ಮಹಾಯಾಗ




ಮೈಸೂರು,ಮೇ 20 (ಎಂಟಿವೈ)– ಲೋಕಕಲ್ಯಾಣಕ್ಕಾಗಿ ಶ್ರೀರಂಗಪಟ್ಟಣದ ರಂಗನಾಥ ದೇವಾಲಯದ ಮುಂಭಾಗದ ಮೈದಾನದಲ್ಲಿ ಜೂ.9ರಿಂದ 11ರವರೆಗೆ ಓಂ ವಿಶ್ವ ಮಹಾಗುರು ಭಗವಾನ್ ಕ್ಷೇತ್ರ ಚಾರಿಟಬಲ್ ಟ್ರಸ್ಟ್ ವತಿ ಯಿಂದ ಸುದರ್ಶನ ಮಹಾಯಾಗ ಆಯೋಜಿಸಲಾಗಿದೆ ಎಂದು ವೇದ ಬ್ರಹ್ಮ ಭಾನುಪ್ರಕಾಶ್ ಶರ್ಮ ತಿಳಿಸಿದ್ದಾರೆ.

ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಈ ಮಹಾಯಾಗದಲ್ಲಿ ರಾಜ್ಯದ ಜನತೆಗೆ, ಲೋಕಕಲ್ಯಾಣಕ್ಕಾಗಿ ಹೋಮ, ಮಹಾ ಸುದರ್ಶನ ಹೋಮ, ಕಳಸ ಸೇವೆ, ಸಹಸ್ರ ಮೋದಕ ಗಣಪತಿ ಸೇವೆ, ಶ್ರೀನಿವಾಸ ಕಲ್ಯಾಣ, ರುದ್ರ ಹೋಮ ಸಂಕಲ್ಪ, ದಂಪತಿ ಪೂಜೆ, ಕುಮಾರಿ ಪೂಜೆ, ಸುವಾಸಿನಿ ಪೂಜೆ, ಸಹಸ್ರನಾಮ ಪಾರಾಯಣ ಸೇರಿದಂತೆ ವಿವಿಧ ಪೂಜಾ ಕಾರ್ಯ ಜರುಗಲಿದೆ ಎಂದರು.

ಮೂರು ದಿನಗಳ ಈ ಪೂಜಾ ಕಾರ್ಯದಲ್ಲಿ ಸುತ್ತೂರು ಮಠದ ಶ್ರೀಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ, ಆದಿಚುಂಚನಗಿರಿಯ ಶ್ರೀ ನಿರ್ಮಲಾನಂದನಾಥ ಸ್ವಾಮಿ, ಧರ್ಮಸ್ಥಳದ ಧರ್ಮಾಧಿಕಾರಿ ಡಾ.ವೀರೇಂದ್ರ ಹೆಗಡೆ, ವಿವಿಧ ಸ್ವಾಮೀಜಿಗಳು, ಬೇಬಿ ಮಠದ ಡಾ.ತ್ರಿನೇತ್ರ ಮಹಂತ ಶಿವಯೋಗಿ ಸ್ವಾಮೀಜಿ ಸೇರಿದಂತೆ ವಿವಿಧ ಮಠಾಧೀಶರು ಪಾಲ್ಗೊಳ್ಳಲಿದ್ದಾರೆ. ಸುಮಾರು 150 ಮಂದಿ ಪ್ರಸಿದ್ಧ ಪುರೋಹಿತರು ಪಾಲ್ಗೊಳ್ಳಲಿದ್ದಾರೆ ಎಂದರು. ಗೋಷ್ಠಿಯಲ್ಲಿ ಓಂ ವಿಶ್ವ ಮಹಾಗುರು ಭಗವಾನ್ ಭಗವಾನ್ ಕ್ಷೇತ್ರ ಚಾರಿಟಬಲ್ ಟ್ರಸ್ಟ್ ಅಧ್ಯಕ್ಷ ಎ.ಶಂಕರ್, ಲಕ್ಷ್ಮೀ, ಮಧುಸೂದನ್, ಮೋಹನ್ ವೇಲು ಇದ್ದರು.

ನಿಧನ



ಮೈಸೂರು ವಿವಿ ವಾಣಿಜ್ಯಶಾಸ್ತ್ರ ವಿಭಾಗದ ನಿವೃತ್ತ ಪ್ರಾಧ್ಯಾಪಕ ಪ್ರೊ.ಕೆ.ನಂಜೇಗೌಡ

ಮೈಸೂರು, ಮೇ 20– ಮೈಸೂರು ವಿವಿ ವಾಣಿಜ್ಯಶಾಸ್ತ್ರ ವಿಭಾಗದ ನಿವೃತ್ತ ಪ್ರಾಧ್ಯಾಪಕ ಪ್ರೊ.ಕೆ.ನಂಜೇಗೌಡ(75) ಅವರು ಶನಿವಾರ ನಿಧನರಾದರು. ಮೂಲತಃ ಚನ್ನರಾಯಪಟ್ಟಣ ತಾಲೂಕು ಗುಡ್ಡಳ್ಳಿಯವರಾದ ಇವರು, ಮೈಸೂರಿನ ಸರಸ್ವತಿಪುರಂ 7ನೇ ಮುಖ್ಯರಸ್ತೆ, 5ನೇ ಕ್ರಾಸ್‌ನಲ್ಲಿ ವಾಸವಿದ್ದರು. ಮೈಸೂರು ವಿವಿ ಸಿಂಡಿಕೇಟ್ ಸದಸ್ಯರಾಗಿ, ಡೀನ್ ಹಾಗೂ ವಿಭಾಗದ ಮುಖ್ಯಸ್ಥರಾಗಿ 35 ವರ್ಷ ಸುದೀರ್ಘ ಸೇವೆ ಸಲ್ಲಿಸಿದ್ದ ಅವರು, ನಿವೃತ್ತಿ ನಂತರ ಡಿ.ಬನುಮಯ್ಯ ಕಾಲೇಜು ಸ್ನಾತಕೋತ್ತರ ಕೇಂದ್ರದ ನಿರ್ದೇಶಕರಾಗಿ ಕಾರ್ಯನಿರ್ವಹಿಸಿದ್ದರು. ಅಲ್ಲದೆ ಬಡ ಹಾಗೂ ಕೂಲಿ ಕಾರ್ಮಿಕರಿಗೆ ಸಾಲ ಸೌಲಭ್ಯ ಕಲ್ಪಿಸುವ ಉದ್ದೇಶವುಳ್ಳ ಎಂಎಸಿಸಿ ಸಹಕಾರಿ ಬ್ಯಾಂಕ್ ಸಂಸ್ಥಾಪಕ ಅಧ್ಯಕ್ಷರಾಗಿದ್ದರು.

ಮೃತರು ಪತ್ನಿ ಯಶೋಧ, ಪುತ್ರರಾದ ಪ್ರಮೋದ್, ಪ್ರಶಾಂತ್ ಸೇರಿದಂತೆ ಅಪಾರ ಬಂಧು–ಬಳಗ, ಸ್ನೇಹಿತರು ಹಾಗೂ ಶಿಷ್ಯ ವೃಂದವನ್ನು ಅಗಲಿದ್ದಾರೆ. ಭಾನುವಾರ ಬೆಳಗ್ಗೆ 10ಕ್ಕೆ ಕೆ.ಜಿ.ಕೊಪ್ಪಲು ರುದ್ರಭೂಮಿಯಲ್ಲಿ ಅಂತ್ಯಕ್ರಿಯೆ ನೆರವೇರಿಸಲಾಗುವುದು ಎಂದು ಕುಟುಂಬದ ಮೂಲಗಳು ತಿಳಿಸಿವೆ.



ಬಷೀರ್ ಅಹಮದ್

ಮೈಸೂರಿನ 2ನೇ ಈದ್ಗಾ, ಬಿ.ಟಿ. ಮಿಲ್ ರಸ್ತೆ ನಿವಾಸಿ ಬಷೀರ್ ಅಹಮದ್ (70) ಶನಿವಾರ ಬೆಳಗ್ಗೆ ನಿಧನರಾದರು. ಸಂಜೆ 6.30ಕ್ಕೆ ನಮಾಜ್–ಎ–ಜನಾಜ ನಡೆದ ಬಳಿಕ ಮೈಸೂರಿನ ಟಿಪ್ಪು ಸರ್ಕಲ್‌ನಲ್ಲಿರುವ ಮುಸ್ಲಿಮರ ರುದ್ರಭೂಮಿಯಲ್ಲಿ ಮೃತರ ಅಂತ್ಯಸಂಸ್ಕಾರ ನೆರವೇರಿಸಲಾಯಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಯುವ ಸಮೂಹ ಜಂಕ್‌ಫುಡ್ ಬಿಟ್ಟು ಸಿರಿಧಾನ್ಯ ಸೇವಿಸಲಿ





ಮೈಸೂರು ಮೇ 20 (ಸಿಎನ್)– ಈಗಿನ ವಿದ್ಯಾರ್ಥಿಗಳು, ಯುವ ಸಮುದಾಯದವರು ಜಂಕ್‌ಫುಡ್ ಪದ್ಧತಿಗೆ ಜೋತುಬಿದ್ದು, ಪಿಜ್ಜಾ, ಬರ್ಗರ್, ಮಂಚೂರಿಯನ್ ಅಂತಹ ವಿದೇಶಿ ಆಹಾರಗಳ ಮೊರೆ ಹೋಗಿ ಆರೋಗ್ಯ ಹಾಳು ಮಾಡಿಕೊಳ್ಳುತ್ತಿದ್ದಾರೆ. ಆದ್ದರಿಂದ ಸಿರಿಧಾನ್ಯಗಳನ್ನು ದೈನಂದಿನ ಆಹಾರ ಪದ್ಧತಿಯಾಗಿ ಅಳವಡಿಸಿಕೊಂಡು ಸೇವನೆ ಮಾಡುವುದರಿಂದ ಭವಿಷ್ಯದಲ್ಲಿ ಉತ್ತಮ ಆರೋಗ್ಯ ಕಾಪಾಡಿಕೊಳ್ಳುವಲ್ಲಿ ಸಹಕಾರಿಯಾಗಲಿದೆ ಎಂದು ಜೆಎಸ್‌ಎಸ್ ಜೀವ ವಿಜ್ಞಾನ ವಿಭಾಗದ ಡೀನ್ ಡಾ.ಕೆ.ಎ. ರವೀಶ್ ಸಲಹೆ ನೀಡಿದರು.

ನಗರದ ಎಂ.ಜಿ.ರಸ್ತೆಯ ಜೆಎಸ್‌ಎಸ್ (ಎಹೆಚ್‌ಇಆರ್) ಸಂಸ್ಥೆಯ ರಾಜೇಂದ್ರ ಶತಮಾನೋತ್ಸವ ಸಭಾಂಗಣದಲ್ಲಿ 'ಅಂತಾರಾಷ್ಟ್ರೀಯ ಸಿರಿಧಾನ್ಯಗಳ ವರ್ಷ 2023' ಅಂಗವಾಗಿ ಡಿಎಸ್‌ಟಿ ಪರ್ಸನಿಂದ ಶನಿವಾರ ಆಯೋಜಿಸಲಾಗಿದ್ದ 'ಸಿರಿಧಾನ್ಯಗಳ ಪ್ರಾಧಾನ್ಯತೆ ಹಾಗೂ ಅಹಾರ ಭದ್ರತೆ' ವಿಷಯ ಕುರಿತು ವಿಚಾರ ಸಂಕಿರಣದಲ್ಲಿ ಅವರು ಮಾತನಾಡಿದರು.

ನಮ್ಮ ಆಹಾರ ಕ್ರಮ ಮೊದಲಿಗೆ ತಾಯಿಯಿಂದ ಆರಂಭವಾಗುತ್ತದೆ. ತಾಯಿ ನಮ್ಮಗಳ ಬೇಕು ಬೇಡಗಳನ್ನು ನಿರ್ಧಾರ ಮಾಡಿ ಉತ್ತಮ ಗುಣಮಟ್ಟದ ಆಹಾರ ನೀಡುವ ಮೂಲಕ ನಮ್ಮನ್ನು ಪೋಷಿಸುತ್ತಾರೆ. ಆದರೆ ನಾವು ವಿದ್ಯಾಭ್ಯಾಸದ ಸಲುವಾಗಿ ಹಾಸ್ಟೆಲ್‌ಗಳಲ್ಲಿ ಉಳಿದುಕೊಳ್ಳುತ್ತೇವೆ. ಇಲ್ಲಿನ ಬೀದಿಬದಿಯ ಜಂಕ್ ಆಹಾರಗಳಿಗೆ ಹೊಂದಿಕೊಂಡು ಆರೋಗ್ಯ ಹಾಳು ಮಾಡಿಕೊಳ್ಳುತ್ತೇವೆ. ನೀವು ಈಗಿನಿಂದಲೇ ಸಿರಿಧಾನ್ಯಗಳ ಸೇವನೆ ಅಭ್ಯಾಸ ಮಾಡಿಕೊಂಡರೆ ಭವಿಷ್ಯದಲ್ಲಿ ಆರೋಗ್ಯ ಸಮತೋಲನ ಕಾಪಾಡಿಕೊಳ್ಳಲು ಸಹಕಾರಿಯಾಗಲಿದೆ ಎಂದು ತಿಳಿ ಹೇಳಿದರು.

ಬಳಿಕ ಜೆಎಸ್‌ಎಸ್ ವೈದ್ಯಕೀಯ ಅಧೀಕ್ಷಕರಾದ ಡಾ.ಮಧು ಮಾತನಾಡಿ, ಸಿರಿಧಾನ್ಯಗಳಲ್ಲಿ ಉತ್ತಮ ಪೌಷ್ಟಿಕಾಂಶಗಳು ಇವೆ. ಇವುಗಳ ಸಮತೋಲಿತ ಬಳಕೆಯಿಂದ ಅಪೌಷ್ಟಿಕ ಮುಕ್ತ ಭಾರತ ನಿರ್ಮಾಣ ಮಾಡುವಲ್ಲಿ ಹಾಗೂ ರೈತರ ಆದಾಯ ದ್ವಿಗುಣಗೊಳಿಸುವಲ್ಲಿ ಅತ್ಯಂತ ಸಹಕಾರಿಯಾಗಿದೆ ಎಂದರು.

ಪೌಷ್ಟಿಕತೆ, ಪರಿಸರ, ಕಡಿಮೆ ದರ ಮತ್ತು ಇತರ ಕಾರಣಗಳಿಗಾಗಿ ಸಿರಿಧಾನ್ಯಗಳ ಕಡೆಗಿನ ಗಮನ ಇತ್ತೀಚಿನ ಕೆಲವು ವರ್ಷಗಳಲ್ಲಿ ಹೆಚ್ಚಿದೆ. ಜಗತ್ತಿನಲ್ಲಿಯೇ ಅತಿ ಹೆಚ್ಚು ಸಿರಿಧಾನ್ಯಗಳನ್ನು ಬೆಳೆಯುವ ದೇಶ ಭಾರತ. ಇಲ್ಲಿ ಜೋಳ, ರಾಗಿ, ಸಜ್ಜೆ ಸೇರಿದಂತೆ ಹತ್ತಾರು ವಿವಿಧ ಸಿರಿಧಾನ್ಯಗಳನ್ನು ದೇಶದಲ್ಲಿ ಬೆಳೆಯಲಾಗುತ್ತಿದೆ. ರಾಜಸ್ಥಾನ, ಕರ್ನಾಟಕ, ಮಹಾರಾಷ್ಟ್ರ ಮತ್ತು ಆಂಧ್ರಪ್ರದೇಶದಲ್ಲಿ ಸಿರಿಧಾನ್ಯಗಳನ್ನು ಹೆಚ್ಚಾಗಿ ಬೆಳೆಯಲಾಗುತ್ತಿದೆ ಎಂದರು. ಈ ವೇಳೆ ಜೆಎಸ್‌ಎಸ್ (ಜೀವ ವಿಜ್ಞಾನ ವಿಭಾಗದ ಡೀನ್ ಡಾ.ಕೆ.ಎ.ರವೀಶ, ಜೆಎಸ್‌ಎಸ್ ವೈದ್ಯಕೀಯ ಅಧೀಕ್ಷಕ ಡಾ.ಮಧು, ಪೋಷಣೆ ಮತ್ತು ಪಥ್ಯಶಾಸ್ತ್ರದ ಸಂಯೋಜಕರು ಡಾ.ವನಿತಾ ರೆಡ್ಡಿ.ಪಿ ಮತ್ತಿತರರಿದ್ದರು.

ವಿವಿಧ ಬಗೆ ಸಿರಿಧಾನ್ಯಗಳ ಪ್ರದರ್ಶನ

ಸಿರಿಧಾನ್ಯಗಳಾದ ಆರ್ಕ, ಊದಲು, ಸಾಮೆ, ಬಿಳಿ ಜೋಳ, ಕೂರಲು, ಸಜ್ಜೆ, ರಾಗಿ, ಬರಗು, ನವಣೆಗಳಿಂದ ತಯಾರಿಸಲ್ಪಟ್ಟ, ನವಣೆ ರವೆ, ಹಾರಕ ರವೆ, ಬರಗು ರವೆ, ಪಂಚರತ್ನ ಧಾನ್ಯ ಮಿಶ್ರಿತ, ಪೊಂಗಲ್ ಮಿಶ್ರಣ, ಸಾಮೆ, ನವಣೆ, ಬರಗು, ಸಜ್ಜೆ, ಸಾಮೆ ರವೆ ಉತ್ಪನ್ನ ಪ್ರದರ್ಶಿಸಿ, ವಿದ್ಯಾರ್ಥಿಗಳು ಸಿರಿಧಾನ್ಯಗಳನ್ನು ಬಳಸುವಂತೆ ಉತ್ತೇಜಿಸಲಾಯಿತು.

ಮುಖ್ಯಮಂತ್ರಿಯಾಗಿ ಸಿದ್ದರಾಮಯ್ಯ, ಡಿಸಿಎಂ ಆಗಿ ಡಿ.ಕೆ.ಶಿವಕುಮಾರ್ ಪ್ರಮಾಣ ವಚನ ಸ್ವೀಕಾರ

ಮೈಸೂರು ಪಾಕ್, ಬಾದಾಮಿ ಹಾಲು ವಿತರಿಸಿ ಅಭಿಮಾನಿಗಳ ಸಂಭ್ರಮ



ಮೈಸೂರು, ಮೇ 20–ಮುಖ್ಯಮಂತ್ರಿಯಾಗಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿಯಾಗಿ ಡಿ.ಕೆ.ಶಿವಕುಮಾರ್ ಪ್ರಮಾಣ ವಚನ ಸ್ವೀಕಾರ ಸಮಾರಂಭ ವೀಕ್ಷಣೆಗೆ ಸಿದ್ದರಾಮಯ್ಯ ಅಭಿಮಾನಿ ಬಳಗ ಹಾಗೂ ಕೃಷ್ಣರಾಜ ಯುವ ಬಳಗ, ಸಿದ್ದರಾಮಯ್ಯ ಅಭಿಮಾನಿ ಬಸವರಾಜ್ ಬಸಪ್ಪ ನೇತೃತ್ವದಲ್ಲಿ ಶನಿವಾರ ಮೈಸೂರಿನ ನಂಜುಮಳಿಗೆ ವೃತ್ತದಲ್ಲಿ ಬೃಹತ್ ಎಲ್‌ಇಡಿ ವ್ಯವಸ್ಥೆ ಮಾಡಲಾಗಿತ್ತು.

ಇದೇ ವೇಳೆ ಪಟಾಕಿ ಸಿಡಿಸಿ, ಮೈಸೂರು ಪಾಕ್, ಬಾದಾಮಿ ಹಾಲು ವಿತರಿಸುವ ಮೂಲಕ ಸಿದ್ದರಾಮಯ್ಯರವರಿಗೆ ಜೈಕಾರ ಕೂಗಿ ಸಂಭ್ರಮಿಸಿದರು.

ಬಳಿಕ ಮಾತನಾಡಿದ ಸಿದ್ದರಾಮಯ್ಯ ಅಭಿಮಾನಿ ಬಸವರಾಜ್ ಬಸಪ್ಪ, ಮುಖ್ಯಮಂತ್ರಿಯಾಗಿ ಪ್ರಮಾಣವಚನ ಸ್ವೀಕರಿಸಿದ ಸಿದ್ದರಾಮಯ್ಯ ಈ ಹಿಂದೆ ಸಿಎಂ ಆಗಿದ್ದಾಗ ಭಾಗ್ಯಗಳನ್ನು ಕಲ್ಪಿಸುವ ಮೂಲಕ ಹೊಸ ಇತಿಹಾಸ ಸೃಷ್ಟಿಗೆ ಕಾರಣರಾಗಿದ್ದರು. ಈಗ ಜನರ ನಿರೀಕ್ಷೆ, ನಂಬಿಕೆ ಹುಸಿಗೊಳಿಸದೆ ಸಮರ್ಥ ಆಡಳಿತ ನೀಡುವ ವಿಶ್ವಾಸ ನಮ್ಮಲ್ಲಿದೆ, ಸ್ಪಷ್ಟ ಜನಾದೇಶ ಪಡೆದು ಅಧಿಕಾರಕ್ಕೆ ಬಂದಿರುವ ಕಾಂಗ್ರೆಸ್ ಸರ್ಕಾರ ಜನಪ್ರಿಯ ಐದು ವರ್ಷಗಳ ಸುಸ್ಥಿರ ಆಡಳಿತ ನೀಡುವಲ್ಲಿ ಯಶಸ್ವಿಯಾಗುತ್ತದೆ ಎಂದರು.

ಈ ವೇಳೆ ತೀರ್ಥಕುಮಾರ್, ಮಂಜುನಾಥ್, ಮಂಜಪ್ಪ, ನವೀನ್ ಕೆಂಪಿ, ಶಿವಕುಮಾರ್, ಪ್ರೇಮ್‌ಕುಮಾರ್, ಶ್ರೀನಿವಾಸ್, ಎಸ್.ಎನ್.ರಾಜೇಶ್, ರಾಕೇಶ್, ಪಾಂಡು ಇನ್ನಿತರರು ಉಪಸ್ಥಿತರಿದ್ದರು.

ಬ್ಯಾಂಕಿಂಗ್ ಹುದ್ದೆಗಳ ಪರೀಕ್ಷೆಗೆ ತರಬೇತಿ

ಮೈಸೂರು, ಮೇ 20– ಕರ್ನಾಟಕ ರಾಜ್ಯ ಮುಕ್ತ ವಿವಿ ಸ್ಪರ್ಧಾತ್ಮಕ ಪರೀಕ್ಷಾ ತರಬೇತಿ ಕೇಂದ್ರವು ಬ್ಯಾಂಕ್ ಅಧಿಕಾರಿಗಳ ಮತ್ತು ಗುಮಾಸ್ತರ ಹುದ್ದೆಗಳಿಗೆ ನೇಮಕಾತಿ ಮಾಡಿಕೊಳ್ಳಲು ನಡೆಸುವ ಸ್ಪರ್ಧಾತ್ಮಕ ಪರೀಕ್ಷೆಗೆ 45 ದಿನಗಳ ತರಬೇತಿ ನೀಡುತ್ತಿದೆ. ಆಸಕ್ತರು ಮೇ 24 ರೊಳಗೆ ತಮ್ಮ ಹೆಸರು ನೋಂದಾಯಿಸಿಕೊಳ್ಳಲು ದೂ.ಸಂ.0821–2515944 ಸಂಪರ್ಕಿಸಬಹುದು ಎಂದು ಮುಕ್ತ ವಿವಿ ಕುಲಸಚಿವ ಪ್ರೊ.ಕೆ.ಎಲ್.ಎನ್.ಮೂರ್ತಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಪ್ರೋತ್ಸಾಹ ಧನಕ್ಕೆ ಅರ್ಜಿ ಆಹ್ವಾನ

ಮೈಸೂರು, ಮೇ 20– ಮೈಸೂರು ಮರ್ಚೆಂಟ್ಸ್ ಕೋ ಆಪರೇಟಿವ್ ಬ್ಯಾಂಕಿನ ವತಿಯಿಂದ 10ನೇ ತರಗತಿಯಲ್ಲಿ (ಸ್ಟೇಟ್, ಸಿಬಿಎಸ್‌ಇ ಮತ್ತು ಐಸಿಎಸ್‌ಇ ಸಿಲಬಸ್) ಹೆಚ್ಚಿನ ಅಂಕ ಪಡೆದ 20 ವಿದ್ಯಾರ್ಥಿಗಳು ಹಾಗೂ ದ್ವಿತೀಯ ಪಿಯುಸಿಯಲ್ಲಿ ಹೆಚ್ಚಿನ ಅಂಕಗಳನ್ನು ಪಡೆದ 20 ವಿದ್ಯಾರ್ಥಿಗಳನ್ನು ಆಯ್ಕೆ ಮಾಡಿ ತಲಾ 3000 ರೂ.ಗಳ ಪ್ರೋತ್ಸಾಹ ಧನ ನೀಡಲಾಗುವುದು. ಮತ್ತು ಜಿಲ್ಲಾ, ರಾಜ್ಯ ಮತ್ತು ಅಂತರರಾಜ್ಯ ಮಟ್ಟದ ಕ್ರೀಡೆಯಲ್ಲಿ ಭಾಗವಹಿಸಿದ ಬ್ಯಾಂಕಿನ ಸದಸ್ಯರ ಮಕ್ಕಳಲ್ಲಿ ಮೂವರಿಗೆ ತಲಾ 3000 ರೂ. ಕ್ರೀಡಾ ಪ್ರೋತ್ಸಾಹ ಧನ ನೀಡಲಾಗುವುದು. ಆಸಕ್ತ ವಿದ್ಯಾರ್ಥಿಗಳು 2 ಪಾಸ್‌ಪೋರ್ಟ್ ಅಳತೆಯ ಭಾವಚಿತ್ರದೊಂದಿಗೆ ಮೇ 30ರೊಳಗೆ ಬ್ಯಾಂಕಿನ ಜನರಲ್ ಮ್ಯಾನೇಜರ್ ಅವರಿಗೆ ತಲುಪಿಸಲು ಕೋರಲಾಗಿದೆ.

ಸಿರಿಗೆ ಸೆರೆ ನಾಟಕ ಪ್ರದರ್ಶನಕ್ಕೆ ಚಾಲನೆ





ಮೈಸೂರು, ಮೇ 20(ಸಿಎನ್)– ಕಲೆಗೆ ಡಾ.ರಾಜ್‌ಕುಮಾರ್ ಕೊಡುತ್ತಿದ್ದ ಗೌರವ ಇಂದಿನ ಕಲಾವಿದರಲ್ಲಿ ನೋಡಲು ಸಾಧ್ಯವಿಲ್ಲ. ಕಲಾ ಪ್ರಪಂಚಕ್ಕೆ ಅವರು ರಾಯಭಾರಿಯಾಗಿದ್ದವರು. ಅವರು ಕಾಲವಾದ ನಂತರ ನಾಯಕತ್ವದ ಕೊರತೆ ಎದ್ದು ಕಾಣುತ್ತಿದೆ ಎಂದು ನೈಪುಣ್ಯ ಸ್ಕೂಲ್ ಆಫ್ ಎಕ್ಸಲೆನ್ಸ್ ಅಧ್ಯಕ್ಷ ರಘು ಕೌಟಿಲ್ಯ ಬೇಸರ ವ್ಯಕ್ತಪಡಿಸಿದರು.

ನಗರದ ರಮಾಗೋವಿಂದ ರಂಗ ಮಂದಿರದಲ್ಲಿ ರಂಗ ವಸಂತ ಶೀರ್ಷಿಕೆಯಡಿ, ನಿರಂತರ ಫೌಂಡೇಷನ್ ಹಾಗೂ ನೈಪುಣ್ಯ ಸ್ಕೂಲ್ ಆಫ್ ಎಕ್ಸಲೆನ್ಸ್ ಸಹಯೋಗದಲ್ಲಿ ಆಯೋಜಿಸಲಾಗಿದ್ದ ಸಿರಿಗೆ ಸೆರೆ ನಾಟಕ ಪ್ರದರ್ಶನಕ್ಕೆ ಚಾಲನೆ ನೀಡಿ ಮಾತನಾಡಿದರು.


ಮೂರು ದಶಕಗಳಿಂದ ನಿರಂತರ ಸಂಸ್ಥೆ ನಮ್ಮ ಮೈಸೂರಿನ ಸಾಂಸ್ಕೃತಿಕ ಹಿರಿಮೆಯನ್ನು ಹೆಚ್ಚಿಸಿದೆ. ಪ್ರತಿಯೊಬ್ಬರು ಸಹ ಕಲೆಗೆ ಪ್ರೋತ್ಸಾಹಿಸಬೇಕು. ಹೆಚ್ಚುಹೆಚ್ಚು ಬೆಂಬಲ, ಪ್ರೋತ್ಸಾಹ ದೊರೆತಷ್ಟು ಒಂದೊಳ್ಳೆ ಸದಭಿರುಚಿಯ, ಸಂದೇಶಾತ್ಮಕ ನಾಟಕಗಳು ಮೂಡಿ ಬರುತ್ತವೆ. ಈ ನಿಟ್ಟಿನಲ್ಲಿ ರಂಗವಸಂತದಡಿ ಮೂರು ದಿನಗಳ ಕಾಲ ನಾಟಕ ಪ್ರದರ್ಶನ ಆಯೋಜಿಸಿದ್ದು, ವಿವಿಧ ನಾಟಕಗಳು ಪ್ರದರ್ಶನಗೊಳ್ಳಲಿವೆ. ಕಲಾಭಿಮಾನಿಗಳು ಹೆಚ್ಚಾಗಿ ಆಗಮಿಸಿ ನಾಟಕವನ್ನು ಯಶಸ್ವಿಗೊಳಿಸಬೇಕೆಂದು ಮನವಿ ಮಾಡಿದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಡಾ.ಸುದರ್ಶನ್ ಮಾತನಾಡಿ, ನಿರಂತರ ಸಂಸ್ಥೆ ಪ್ರಾಮಾಣಿಕವಾಗಿ ರಂಗಸೇವೆ ಸಲ್ಲಿಸುತ್ತಾ ಬಂದಿದ್ದು, ಅದ್ಭುತ ನಾಟಕ ರಚನೆಯಿಂದ ಜನರ ಗಮನ ಸೆಳೆದಿದೆ. ನಾನು ಸಹ ಚಿಕ್ಕಂದಿನಿಂದಲೂ ನಾಟಕಗಳ ಕಡೆ ಬಹಳ ಆಸಕ್ತಿ ಹೊಂದಿದ್ದೆ. ಕೆಲವು ಪಾತ್ರಗಳನ್ನು ಸಹ ಮಾಡಿದ್ದೆ. ಬಳಿಕ ವಿದ್ಯಾಭ್ಯಾಸದೆಡೆಗೆ ಗಮನಹರಿಸಿ ರಂಗಭೂಮಿಯಿಂದ ಸ್ವಲ್ಪ ದೂರವಿದ್ದೆ ಎಂದರು.

ಮೈಸೂರಿಗೆ ನಾನು ಅಧಿಕಾರಿಯಾಗಿ ಬಂದಾಗ ಅನೇಕ ರಂಗ ಸಂಸ್ಥೆಗಳ ಒಡನಾಟ ಬೆಳೆಸಿಕೊಂಡು, ಅವರ ಸಮಸ್ಯೆಗಳನ್ನು ಕಣ್ಣಾರೆ ಕಂಡಿದ್ದೇನೆ. ಹಾಗಾಗಿ ರಂಗಭೂಮಿಯಲ್ಲಿ ತೊಡಗಿಸಿ ಕೊಂಡವರಿಗೆ ಸರ್ಕಾರದಿಂದ ಇನ್ನಷ್ಟು ಸಹಾಯ ದೊರೆಯಬೇಕು. ನಮ್ಮ ಇಲಾಖೆ ವತಿಯಿಂದ ವಿಶೇಷ ಧನಸಹಾಯ ಕೊಡಿಸುವಲ್ಲಿ ಪ್ರಾಮಾಣಿಕ ಪ್ರಯತ್ನ ಮಾಡುತ್ತೇನೆ ಎಂದು ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಡಾ.ಸುದರ್ಶನ್, ನಿರಂತರ ಸಂಸ್ಥೆ ಪ್ರಸಾದ್ ಕುಂದೂರು ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

21.5.2023 ಭಾನುವಾರ, ಮಳೆ ನಕ್ಷತ್ರ: ಕೃತ್ತಿಕ, 11.05.2023ರಿಂದ 24.05.2023
ಶ್ರೀ ಶೋಭಕೃತ್ ನಾಮ ಸಂವತ್ಸರ, ಉತ್ತರಾಯಣ, ಗ್ರೀಷ್ಮ ಋತು, ಜ್ಯೇಷ್ಠ ಮಾಸ,
ಶುಕ್ಲ ಪಕ್ಷ, ತಿಥಿ: ಬಿದಿಗೆ, ನಕ್ಷತ್ರ: ರೋಹಿಣಿ, ರಾಹುಕಾಲ: ಸಂಜೆ 4.30ರಿಂದ 6ರವರೆಗೆ

■ **ಸ್ಪರ್ಶ ಆರೋಗ್ಯ ಮತ್ತು ಕಣ್ಣಿನ ಆಸ್ಪತ್ರೆ :** ನೇತ್ರ, ಮಧುಮೇಹ, ರಕ್ತದೊತ್ತಡ ತಪಾಸಣಾ ಶಿಬಿರ, ಸ್ಥಳ: ಸ್ಪರ್ಶ ಆರೋಗ್ಯ ಮತ್ತು ಕಣ್ಣಿನ ಆಸ್ಪತ್ರೆ, ಬಂಬೂ ಬಜಾರ್, ಬೆಳಗ್ಗೆ 10ರಿಂದ.

■ **ಚೈತ್ರ ಫೌಂಡೇಷನ್:** ಹತ್ತನೇ ಸಂಸ್ಥಾಪನಾ ದಿನಾಚರಣೆ, ಉಪಸ್ಥಿತರು: ಭ್ರಮರ ಟ್ರಸ್ಟ್ ಅಧ್ಯಕ್ಷೆ ಮಾಧುರಿ ತಾತಾಚಾರಿ, ಆದರ್ಶ ಸೇವಾ ಸಂಘ ಅಧ್ಯಕ್ಷ ಜಿ.ಆರ್.ನಾಗರಾಜ, ಕಾವೇರಿ ಬಳಗದ ಅಧ್ಯಕ್ಷೆ ಕಾವೇರಿಯಮ್ಮ, ಸ್ಥಳ: ಗಾನಭಾರತೀ ರಮಾಗೋವಿಂದ ಕಲಾವೇದಿಕೆ, ಕುವೆಂಪುನಗರ, ಬೆಳಗ್ಗೆ 10.30ಕ್ಕೆ

■ **ಮೈಸೂರು ಜಿಲ್ಲಾ ಲಾರಿ ಮತ್ತು ಟಿಪ್ಪರ್ ಚಾಲಕರ ಕ್ಷೇಮಾಭಿವೃದ್ಧಿ ಸಂಘ:** ಡಾ.ಬಿ.ಆರ್.ಅಂಬೇಡ್ಕರ್ ಮತ್ತು ಶ್ರೀ ಬಸವೇಶ್ವರರ ಜಯಂತ್ಯೋತ್ಸವ, ಮುಖ್ಯ ಅತಿಥಿಗಳು: ಉರಿಲಿಂಗಪೆದ್ದಿ ಮಠದ ಶ್ರೀ ಜ್ಞಾನಪ್ರಕಾಶ ಸ್ವಾಮೀಜಿ, ಅತಿಥಿಗಳು: ಹಿರಿಯ ಭೂ ವಿಜ್ಞಾನಿ ಬಿ.ರಶ್ಮಿ, ಆರಕ್ಷಕ ನಿರೀಕ್ಷಕರಾದ ಶೇಖರ್, ಚಿಕ್ಕರಾಜಶೆಟ್ಟಿ, ಹಿರಿಯ ಮೋಟಾರು ವಾಹನ ನಿರೀಕ್ಷಕ ಶಿವಸ್ವಾಮಿ, ವಿಭಾಗೀಯ ಪ್ರಬಂಧಕ ಶಿವಕುಮಾರ್, ಸಂಚಾರ ಪೊಲೀಸ್ ಠಾಣೆ ನಿರೀಕ್ಷಕ ಯೋಗೇಶ್, ಆರಕ್ಷಕ ನಿರೀಕ್ಷಕ ಶಿವನಂಜಶೆಟ್ಟಿ, ಮಹೇಶ್, ಸಂಘದ ಆವರಣ, ಬೆಳಗ್ಗೆ 10.30ಕ್ಕೆ

■ **ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್, ಕನ್ನಡ ಸಾಹಿತ್ಯ ಕಲಾಕೂಟ, ಹೊಯ್ಸಳ ಕನ್ನಡ ಸಂಘ :** ಎಸ್. ರಾಮಪ್ರಸಾದ್ ಅವರಿಗೆ ಅಭಿನಂದನಾ ಸಮಾರಂಭ ಮತ್ತು ನಾಲ್ಕು ಕೃತಿಗಳ ಲೋಕಾರ್ಪಣೆ ಕಾರ್ಯಕ್ರಮ, ಸಾನ್ನಿಧ್ಯ: ಸುತ್ತೂರು ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ, ಅಧ್ಯಕ್ಷತೆ: ಕಸಾಪ ಜಿಲ್ಲಾಧ್ಯಕ್ಷ ಮಡ್ಡೀಕೆರೆ ಗೋಪಾಲ್, ಪ್ರಾಸ್ತಾವಿಕ ನುಡಿ : ಕನ್ನಡ ಸಾಹಿತ್ಯ ಕಲಾಕೂಟ ಅಧ್ಯಕ್ಷ ಎಂ. ಚಂದ್ರಶೇಖರ್, ಕೃತಿಗಳ ಲೋಕಾರ್ಪಣೆ ಮತ್ತು ಅಭಿನಂದನೆಯ ಮಾತು : ಕೆಎಸ್‌ಐಐಡಿಸಿ ವ್ಯವಸ್ಥಾಪಕ ನಿರ್ದೇಶಕ ಡಾ. ಎಂ.ಆರ್. ರವಿ, ಕೃತಿಗಳ ಪರಿಚಯ : ಸಾಹಿತಿ ಡಾ. ಕಬ್ಬಿನಾಲೆ ವಸಂತ ಭಾರದ್ವಾಜ್, ಕರಾಮುವಿವಿ ಪ್ರಾಧ್ಯಾಪಕ ಡಾ. ಜ್ಯೋತಿಶಂಕರ್, ಅಭಿನಂದಿತರ ನುಡಿ : ವಿಜ್ಞಾನ ಸಾಹಿತಿ ಎಸ್. ರಾಮಪ್ರಸಾದ್, ಸ್ಥಳ: ರೋಟರಿ ಮೈಸೂರು ಪಶ್ಚಿಮ ಸಭಾಂಗಣ, ಕಾಮಾಕ್ಷಿ ಆಸ್ಪತ್ರೆ, ಸರಸ್ವತಿಪುರಂ, ಬೆಳಗ್ಗೆ 11ಕ್ಕೆ.

■ **ಅಂತರ್‌ದೃಷ್ಟಿ ಬ್ರೈನ್ ಅಕಾಡೆಮಿ:** 12ನೇ ತಂಡದ ಅಂತರ್‌ದೃಷ್ಟಿ ಬ್ರೈನ್ ಜಾಗೃತಿ ಯೋಗಿಕ್ ಶಿಬಿರದ ಸಮಾರೋಪ ಮತ್ತು 13ನೇ ತಂಡದ ಉದ್ಘಾಟನಾ ಸಮಾರಂಭ, ಅಧ್ಯಕ್ಷತೆ: ಅಕಾಡೆಮಿ ಸಂಸ್ಥಾಪಕ ಶಿವಪ್ರಕಾಶ್ ಗುರೂಜಿ, ಉದ್ಘಾಟನೆ: ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಸಮನ್ವಯಾಧಿಕಾರಿ ಶ್ರೀಕಂಠಸ್ವಾಮಿ, ಮುಖ್ಯ ಅತಿಥಿಗಳು: ಆಕಾಶವಾಣಿ ನಿರ್ದೇಶಕ ಉಮೇಶ್, ಅರ್ಹತಾ ಪತ್ರಗಳ ವಿತರಣೆ: ಮುರಳಿ ಮೋಹನ್, ಸ್ಥಳ: ಪರಮಹಂಸ ಯೋಗ ಮಹಾವಿದ್ಯಾಲಯ, ರಾಮಕೃಷ್ಣನಗರ, ಸಂಜೆ 4ಕ್ಕೆ

■ **ಶ್ರೀರಾಘವೇಂದ್ರಸ್ವಾಮಿ ಸೇವಾ ಸಮಿತಿ :** ವಿದ್ವಾಂಸರಾದ ಪಂಡಿತ್ ಅನಿರುದ್ಧಾಚಾರ್ ಪಾಂಡುರಂಗಿ ಅವರಿಂದ ಪದ್ಮಪುರಾಣ ಕುರಿತು ಪ್ರವಚನ, ಸ್ಥಳ: ಶ್ರೀರಾಯರ ಮಠ, ಜಯಲಕ್ಷ್ಮಿಪುರಂ, ಸಂಜೆ 5ಕ್ಕೆ

■ **ಪ್ರಣವ ಸೌಹಾರ್ದ ಸಹಕಾರಿ ಅಕಾಡೆಮಿ:** ಮೈಸೂರು ಶಾಖೆಯ ಉದ್ಘಾಟನಾ ಸಮಾರಂಭ, ಉದ್ಘಾಟನೆ: ಒಡಿಯೂರು ಶ್ರೀ ಗುರುದೇವತ್ತ ಸಂಸ್ಥಾನಂನ ಶ್ರೀ ಗುರುದೇವಾನಂದ ಸ್ವಾಮೀಜಿ, ಅಧ್ಯಕ್ಷತೆ : ಸಂಘದ ಸಂಸ್ಥಾಪಕ ಅಧ್ಯಕ್ಷ ಜಿ.ಆರ್. ಪ್ರಸಾದ್, ಮುಖ್ಯ ಅತಿಥಿಗಳು: ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ ಸಂಘದ ನಿರ್ದೇಶಕ ಮಂಜುನಾಥ್, ಭಾರತಿ ಭಟ್, ಹೆಚ್.ವಿ.ರಾಜೀವ್, ಎಸ್.ಆರ್. ನಾರಾಯಣರಾವ್, ಶಿವಕುಮಾರ್ ಬಿರಾದರ್, ಸ್ಥಳ: ಶ್ರೀರಾಮಪುರ, ಚಾಮರಾಜ ಮೊಹಲ್ಲಾ, ಸಂಜೆ 5ಕ್ಕೆ

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ–ಎಸ್. ದಿವಾಕರ್, 6.15 ಗೀತಾರಾಧನ, 6.35 ಬದುಕು ಮಣ್ಣಿನೊಂದಿಗೆ–ಬಾನುಲಿ ಸರಣಿ, ಲೇಖನ ಮತ್ತು ಪ್ರಸ್ತುತಿ–ಎ.ಪಿ. ಚಂದ್ರಶೇಖರ್, 6.40 ಪದಸಂಸ್ಕೃತಿ–ಕನ್ನಡ ಪದಗಳ ಬಳಕೆ–ಕಲಿಕೆಯ ವಿಶಿಷ್ಟ ಬಾನುಲಿ ಸರಣಿ, ಪ್ರಸ್ತುತಿ– ಡಾ.ಜ್ಯೋತಿ ಶಂಕರ್, 7.15 ಭಾವಗೀತೆಗಳು–ನಂದಿತಾ, 9.45 ನಮ್ಮ ಆರೋಗ್ಯ–ಉತ್ತಮ ಆರೋಗ್ಯಕ್ಕಾಗಿ ಜೀವನ ಶೈಲಿಯ ಬದಲಾವಣೆ ಕುರಿತು ಡಾ.ಕೆ.ನಾಗೇಂದ್ರಪ್ರಸಾದ್ ಅವರೊಂದಿಗೆ ಮಾತುಕತೆ, 10.00 ಕೇಳಿಗಿಳಿಗಳೇ –ಅರಿವು ಶಾಲೆಯ ಮಕ್ಕಳಿಂದ ಕಾರ್ಯಕ್ರಮ ವೈವಿಧ್ಯ, 10.30 ಮಕ್ಕಳ ಮಂಟಪ–ನಂದಗೋಕುಲ, ಪ್ರಸ್ತುತಿ–ಕೆ.ಬಿ.ಮೀನಾ, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ **ಮಧ್ಯಾಹ್ನ:** 12.30 ದೇವರನಾಮ, 12.45 ಜನಪದ ಸಂಗೀತ–ಸಿ.ಆರ್.ರುಕ್ಮಿಣಿ ಮತ್ತು ಸಂಗಡಿಗರು, 1.30 ಸಂದೇಶ ಆಧಾರಿತ ಶ್ರೋತೃಗಳ ಮೆಚ್ಚಿನ ಚಿತ್ರಗೀತೆಗಳ ಕಾರ್ಯಕ್ರಮ, 1.20 ಭಾವಗೀತೆಗಳು–ಸುನೀತಾ, 3.45 ಯಕ್ಷಗಾನ ತಾಳ ಮದ್ದಲೆ, ಪ್ರಸಂಗ–ರೇಣುಕಾ ಮಹಾತ್ಮೆ, ಪ್ರಸ್ತುತಿ–ನೀಲಾವರ ಲಕ್ಷ್ಮೀನಾರಾಯಣ ರಾವ್ ಮತ್ತು ಬಳಗದವರು, 4.45 ಚಟ್ ಪಟ್ ಚುರುಮುರಿ, ಪ್ರಸ್ತುತಿ–ಪ್ರಭುಸ್ವಾಮಿ ಮಳೀಮಠ್ ಮತ್ತು ಕೆ.ಬಿ.ಮೀನಾ, 5.05 ಸಂದೇಶ ಆಧಾರಿತ ಶ್ರೋತೃಗಳ ಮೆಚ್ಚಿನ ಚಿತ್ರಗೀತೆಗಳ ಕಾರ್ಯಕ್ರಮ, 6.50 ಕೃಷಿರಂಗ–ಪಶುಪಾಲನೆ ಹಾಗೂ ಪಶು ವೈದ್ಯಕೀಯ ಸೇವೆಗಳ ಇಲಾಖೆ ಪ್ರಾಯೋಜಿತ ಕಾರ್ಯಕ್ರಮ–ನಾಟಿ ಕೋಳಿ ಸಾಕಾಣಿಕೆ ಕುರಿತು ಡಾ.ಗೋಪೀನಾಥ್ ಅವರೊಂದಿಗೆ ಸಂದರ್ಶನ, 8.00 ವಿಶಿಷ್ಟ ವ್ಯಕ್ತಿ ವಿಶೇಷ ಯತ್ನ–ಕೃಷಿ ದಾರ್ಶನಿಕ ಡಾ.ಎ.ಪಿ.ಚಂದ್ರಶೇಖರ್ ಅವರೊಂದಿಗೆ ಸಂವಾದ ನಡೆಸಿಕೊಡುತ್ತಾರೆ ದಿವಾಕರ ಹೆಗಡೆ, 9.15 ರಂಗಗೀತೆಗಳು–ಎಂ.ಎಸ್.ವೆಂಕರಾಮ್, 9.30 ರಾಷ್ಟ್ರೀಯ ನಾಟಕ, 10.00 ರವಿವಾಸರೀಯ ಅಖಿಲ ಭಾರತೀಯ ಸಂಗೀತ ಸಭಾ– ಸೋನಿಯಾ ರಾಯ್–ಗಾಯನ

■ **ಇಂ.ಹೆಚ್.ಎಲ್.ಪ್ರಸನ್ನ ಅವರ ಸ್ನೇಹ ಬಳಗ:** ದೊಡ್ಡ ಕರುಳಿನ ಕ್ಯಾನ್ಸರ್ ಬಗ್ಗೆ ಅರಿವು ಮೂಡಿಸುವ ಕಾರ್ಯಕ್ರಮ, ಉಪಸ್ಥಿತರು: ಮಾತಾ ಅಮೃತಾನಂದಮಯಿ ಮಠದ ಪ್ರಸಾದ ಅಮೃತ ಚೈತನ್ಯ ಸ್ವಾಮೀಜಿ, ನಿವೃತ್ತ ಸರ್ಕಾರದ ಕಾರ್ಯದರ್ಶಿ ಕೆ.ಜೈಪ್ರಕಾಶ್, ಡಾ.ವಿಕಾಶ್ ಎನ್. ಮೋದಿ, ಎಂ.ವಿ.ಚೆನ್ನಕೇಶವರೆಡ್ಡಿ, ಹಿರಿಯ ನ್ಯಾಯವಾದಿ ಓ.ಶ್ಯಾಮ್‌ಭಟ್, ಕೆ.ಬೋರಯ್ಯ, ಸುನಂದ ಜಯರಾಂ, ಪ್ರೊ.ಗುಬ್ಬಯ್ಯ, ವಸಂತ ಕುಮಾರ್, ಸ್ಥಳ: ನೇಗಿಲಯೋಗಿ ಮರುಳೇಶ್ವರ ಸೇವಾ ಭವನ, ಕೆ.ಜಿ.ಕೊಪ್ಪಲು, ಜಯನಗರ, ಸಂಜೆ 5ಕ್ಕೆ.

■ **ನಾದಬ್ರಹ್ಮ ಸಂಗೀತ ಸಭಾ:** ಗಾನಕಲಾಭೂಷಣ ವೈಣಿಕ ವಿದ್ವಾನ್ ಎಂ.ಜೆ.ಶ್ರೀನಿವಾಸ ಅಯ್ಯಂಗಾರ್ ಶತಮಾನೋತ್ಸವ ಸಮಾರಂಭ, ವಿದುಷಿ ಭಾಗ್ಯಲಕ್ಷ್ಮಿ ಚಂದ್ರಶೇಖರ್ ಅವರಿಂದ ವೀಣಾವಾದನ, ವಿದ್ವಾನ್ ಶ್ರೀಧರ್–ಮೃದಂಗ, ವಿದ್ವಾನ್ ಶರತ್ ಕೌಶಿಕ್–ಘಟ, ಸ್ಥಳ: ನಾದಬ್ರಹ್ಮ ಸಂಗೀತ ಸಭಾ, ಸಂಜೆ 5.30ಕ್ಕೆ

■ **ಶ್ರೀರಾಮಕೃಷ್ಣ ಆಶ್ರಮ:** ಸ್ವಾಮಿ ಅಘಹರಾನಂದ ಅವರಿಂದ ಸೋದರ, ಸಂನ್ಯಾಸಿಗಳೊಂದಿಗೆ ಉಪನ್ಯಾಸ, ಸ್ಥಳ: ಆಶ್ರಮದ ಸ್ವಾಮಿ ಶಾಂಭವಾನಂದಜಿ ಸಭಾಂಗಣ, ಯಾದವಗಿರಿ, ಸಂಜೆ 6ಕ್ಕೆ.

■ **ಶ್ರೀರಾಘವೇಂದ್ರಸ್ವಾಮಿಗಳವರ ಬೃಂದಾವನ ಸನ್ನಿಧಾನ, ಕೃಷ್ಣಮೂರ್ತಿಪುರಂ :** ಶ್ರೀ ರಾಘವೇಂದ್ರ ಸ್ವಾಮಿಗಳ 76ನೇ ಬೃಂದಾವನ ಪ್ರತಿಷ್ಠಾಪನಾ ವರ್ಧಂತ್ಯುತ್ಸವ ಜ್ಞಾನಸತ್ರ, ಪಂಡಿತ್ ಕಪಿಲಾಚಾರ್ಯ ಗಲಗಲಿ, ಧಾರವಾಡ ಅವರಿಂದ ಶ್ರೀಮದ್ಭಾಗವತ ಪ್ರವಚನ, ಸ್ಥಳ: ತತ್ವಜ್ಞಾನ ಮಂದಿರ, ಶ್ರೀ ರಾಘವೇಂದ್ರ ಸ್ವಾಮಿಗಳ ಮಠದ ಆವರಣ, ಸಂಜೆ 6ಕ್ಕೆ.

■ **ನಿರಂತರ ಫೌಂಡೇಷನ್ :** ಸಂಜೆ 6.30ಕ್ಕೆ ರಂಗ ವಸಂತ–2023ದ ಸಮಾರೋಪ ಸಮಾರಂಭ, ಉಪಸ್ಥಿತರು : ಬಿಬಿಎಂಪಿ ವಿಶೇಷ ಆಯುಕ್ತ ಜಯರಾಮ ರಾಯಪುರ, ನೃಪತುಂಗ ಕನ್ನಡ ಶಾಲೆ ಕಾರ್ಯದರ್ಶಿ ಸವಿತಾ, ಕರ್ನಾಟಕ ರಾಜ್ಯ ರೈತ ಸಂಘದ ಹೊಸಕೋಟೆ ಬಸವರಾಜು, ನಿರಂತರದ ಪ್ರಸಾದ್ ಕುಂದೂರು, ಸಂಜೆ 7ಕ್ಕೆ ನಿರಂತರ ರಂಗ ತಂಡದಿಂದ ವಾರಸುದಾರಾ ನಾಟಕ ಪ್ರದರ್ಶನ, ನಿರ್ದೇಶನ : ಪ್ರಸಾದ್ ಕುಂದೂರು, ಸ್ಥಳ: ರಮಾಗೋವಿಂದ ರಂಗ ಮಂದಿರ, ರಾಮಕೃಷ್ಣನಗರ,

■ **ನಟನ ರಂಗಶಾಲೆ :** ನಟನ ಪಯಣ ರೆಪರ್ಟರಿ ತಂಡದಿಂದ 'ಕಣಿವೆಯ ಹಾಡು' ನಾಟಕ ಪ್ರದರ್ಶನ, ನಿರ್ದೇಶನ : ಡಾ. ಶ್ರೀಪಾದ ಭಟ್, ಸಂಗೀತ : ಅನುಷ್ ಶೆಟ್ಟಿ ಮತ್ತು ಮುನ್ನ, ರಚನೆ : ಅತೊಲ್ ಫ್ಯೂಗಾರ್ಡ್, ಸ್ಥಳ: ನಟನ ರಂಗಶಾಲೆ, ರಾಮಕೃಷ್ಣನಗರ, ಸಂಜೆ 6.30ಕ್ಕೆ.

■ **ರಂಗಾಯಣ :** ಭಾರತೀಯ ರಂಗ ಶಿಕ್ಷಣ ಕೇಂದ್ರದ ಪ್ರಶಿಕ್ಷಣಾರ್ಥಿಗಳಿಂದ 'ಹಾನೂಶ್' ನಾಟಕ ಪ್ರದರ್ಶನ, ನಿರ್ದೇಶನ : ಚಿತ್ತರಂಜನ್ ಗಿರಿ, ಸಂಗೀತ : ಸುಬ್ರಹ್ಮಣ್ಯ ಮೈಸೂರು, ಸ್ಥಳ: ಭೂಮಿಗೀತ ರಂಗಮಂದಿರ, ಸಂಜೆ 6.30ಕ್ಕೆ

ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ಮೇ 21 ಭಾನುವಾರ 2023

ಸಂಪುಟ: 44 | ಸಂಚಿಕೆ: 35 | ಪುಟಗಳು: 12

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ: Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ/ಜಾಹೀರಾತಿಗಾಗಿ – ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

₹4

ಬಿಚ್ಚು ನುಡಿ
ವಿಕ್ರಂ ಮುತ್ತಣ್ಣ
ಕಾಂಗ್ರೆಸ್ ಅಧಿಪತಿ
■ಪುಟ–4

ಮುಖ್ಯಮಂತ್ರಿ ಸಿದ್ದರಾಮಯ್ಯ

ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಎಂಟು ಮಂದಿ ನೂತನ ಸಂಪುಟ ಸದಸ್ಯರು

ಪ್ರಮಾಣ ವಚನ ಸ್ವೀಕಾರ



ಪ್ರಮಾಣ ವಚನ ಸ್ವೀಕರಿಸಿದ ನಂತರ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಅವರೊಂದಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಸಚಿವರಾದ (ಎಡದಿಂದ) ಜಮೀರ್ ಅಹಮದ್‌ಖಾನ್, ಸತೀಶ್ ಜಾರಕಿಹೊಳಿ, ಎಂ.ಬಿ.ಪಾಟೀಲ್, ಕೆ.ಜೆ.ಜಾರ್ಜ್, ಡಾ.ಜಿ. ಪರಮೇಶ್ವರ್, ಕೆ.ಹೆಚ್.ಮುನಿಯಪ್ಪ, ರಾಮಲಿಂಗಾರೆಡ್ಡಿ, ಪ್ರಿಯಾಂಕ ಖರ್ಗೆ ಅವರನ್ನು ಕಾಣಬಹುದು.

ಬೆಂಗಳೂರು, ಮೇ 20(ಕೆಎಂಶಿ)–ಸಿದ್ದರಾಮಯ್ಯ ಮುಖ್ಯಮಂತ್ರಿಯಾಗಿ, ಡಿ.ಕೆ.ಶಿವಕುಮಾರ್ ಉಪ ಮುಖ್ಯಮಂತ್ರಿಯಾಗಿ ಇಂದಿಲ್ಲಿ ಪ್ರಮಾಣ ವಚನ ಸ್ವೀಕರಿಸಿದರು. ನೂತನ ಸರ್ಕಾರದಲ್ಲಿ ಡಾ.ಜಿ.ಪರಮೇಶ್ವರ್, ಕೆ.ಎಚ್. ಮುನಿಯಪ್ಪ, ಕೆ.ಜೆ.ಜಾರ್ಜ್, ಎಂ.ಬಿ.ಪಾಟೀಲ್, ಸತೀಶ್ ಜಾರಕಿಹೊಳಿ, ಪ್ರಿಯಾಂಕ ಖರ್ಗೆ, ರಾಮಲಿಂಗಾರೆಡ್ಡಿ ಹಾಗೂ ಜಮೀರ್ ಅಹ್ಮದ್ ಖಾನ್ ಸಹ ಸಂಪುಟ ದರ್ಜೆ ಸಚಿವರಾಗಿ ಅಧಿಕಾರ ಗೌಪ್ಯತೆಯ ಪ್ರಮಾಣ ವಚನ ಸ್ವೀಕರಿಸಿದರು.

ನಗರದ ಕಂಠೀರವ ಹೊರಾಂಗಣ ಕ್ರೀಡಾಂಗಣದಲ್ಲಿ ಸೇರಿದ್ದ ಜನಸ್ತೋಮದ ನಡುವೆ ರಾಜ್ಯದ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಅವರು ಮುಖ್ಯಮಂತ್ರಿ, ಉಪ ಮುಖ್ಯಮಂತ್ರಿ ಹಾಗೂ ಸಚಿವರುಗಳಿಗೆ ಪ್ರಮಾಣ ವಚನ ಬೋಧಿಸಿದರು.

ಸಿದ್ದರಾಮಯ್ಯ ದೇವರ ಹೆಸರಿನಲ್ಲೂ, ಶಿವಕುಮಾರ್ ನೊಣವಿನಕೆರೆಯ ಗಂಗಾಧರ ಅಜ್ಜಯ್ಯನ ಹೆಸರಿನಲ್ಲೂ ಉಳಿದವರು ದೇವರು, ಬುದ್ಧ, ಬಸವ, ಅಂಬೇಡ್ಕರ್ ಹೆಸರಿನಲ್ಲಿ ಪ್ರಮಾಣವಚನ ಸ್ವೀಕಾರ ಮಾಡಿದರು. ರಾಜ್ಯದ 30ನೇ ಹಾಗೂ ವ್ಯಕ್ತಿಗತವಾಗಿ 24ನೇ ಮುಖ್ಯಮಂತ್ರಿಯಾಗಿ ಸಿದ್ದರಾಮಯ್ಯ ಅಧಿಕಾರ ಸ್ವೀಕರಿಸಿದರು. ಅವರು ಎರಡನೇ ಬಾರಿಗೆ ಮುಖ್ಯಮಂತ್ರಿಯಾದರೆ, ಶಿವಕುಮಾರ್ ಸಂಪುಟ ದರ್ಜೆ ಸಚಿವರಾಗಿ ಈ ಹಿಂದೆ ನಾಲ್ವರು ಮುಖ್ಯಮಂತ್ರಿ ಕೆಳಗೆ ವಿವಿಧ ●10ನೇ ಪುಟಕ್ಕೆ



ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್‌ರೊಂದಿಗೆ ಕಾಂಗ್ರೆಸ್ ನಾಯಕ ರಾಹುಲ್‌ಗಾಂಧಿ ಸಂಭ್ರಮ

ಐದು ಗ್ಯಾರಂಟಿಗಳಿಗೆ ಸಂಪುಟ ಗ್ಯಾರಂಟಿ

ಪ್ರತಿ ಮನೆಗೆ 200 ಯುನಿಟ್ ವಿದ್ಯುತ್
ಮನೆ ಒಡತಿಗೆ ಮಾಸಿಕ 2000 ರೂ. ನೆರವು
ನಿರುದ್ಯೋಗಿ ಪದವೀಧರರಿಗೆ 3000 ರೂ.
ಡಿಪ್ಲೊಮಾದಾರರಿಗೆ 1500 ರೂ. ಭತ್ಯೆ
ರಾಜ್ಯದ ಮಹಿಳೆಯರಿಗೆ ಉಚಿತ ಬಸ್ ಪ್ರಯಾಣ

ಮೊದಲ ಸಂಪುಟ ಸಭೆ ನಂತರ ಮುಖ್ಯಮಂತ್ರಿ ಸಿದ್ದರಾಮಯ್ಯ ಘೋಷಣೆ



ಬೆಂಗಳೂರು, ಮೇ 20(ಕೆಎಂಶಿ)–ರಾಜ್ಯದ ಪ್ರತಿಮನೆಗೂ 200 ಯುನಿಟ್ ವಿದ್ಯುತ್ ಉಚಿತ, ಮನೆಂಯೊಡತಿಗೆ ಮಾಸಿಕ 2000 ರೂ., ನಿರುದ್ಯೋಗಿ ಪದವೀಧರರಿಗೆ 3000 ರೂ. ಮಾಸಿಕ ಭತ್ಯೆ, ಬಡತನ ರೇಖೆಗಿಂತ ಕೆಳಗಿನ ಕುಟುಂಬಗಳಿಗೆ 10 ಕೆ.ಜಿ.ಅಕ್ಕಿ ಉಚಿತ ಹಾಗೂ ಸರ್ಕಾರಿ ಸಾಮಾನ್ಯ ಬಸ್‌ಗಳಲ್ಲಿ ಕರ್ನಾಟಕದ ಮಹಿಳೆಯರಿಗೆ ಉಚಿತ ಪ್ರಯಾಣದ ಪಾಸ್ ನೀಡುವ ಮಹತ್ವ ತೀರ್ಮಾನವನ್ನು ನೂತನ ಸರ್ಕಾರ ಇಂದಿಲ್ಲಿ ಕೈಗೊಂಡಿದೆ.


ಸಂಪುಟ ಸಭೆಯ ನಂತರ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹಾಗೂ ಅವರ ಸಂಪುಟದ ಸಹೋದ್ಯೋಗಿಗಳು ಜಂಟಿ ಪತ್ರಿಕಾಗೋಷ್ಠಿಯಲ್ಲಿ ನಿರ್ಧಾರ ಪ್ರಕಟಿಸಿದ್ದಲ್ಲದೆ, ಈ ಎಲ್ಲಾ ಗ್ಯಾರಂಟಿಗಳು ಮುಂದಿನ ವಾರದಿಂದ ಜಾರಿಗೊಳ್ಳಲಿವೆ ಎಂದು ಹೇಳಿದರು.

ವಿಧಾನಸಭಾ ಚುನಾವಣೆಗೂ ಮುನ್ನ ರಾಜ್ಯದ ಜನತೆಗೆ ಕಾಂಗ್ರೆಸ್ ನೀಡಿದ್ದ ಐದು ಗ್ಯಾರಂಟಿ ಭರವಸೆಗಳನ್ನು ಸಿದ್ದರಾಮಯ್ಯ ಅವರು ಅಧಿಕಾರ ವಹಿಸಿಕೊಂಡ ಬೆನ್ನಲ್ಲೇ ಸಂಪುಟ ಸಭೆ ನಡೆಸಿ ಅನುಷ್ಠಾನಗೊಳಿಸುವ ತೀರ್ಮಾನ ಪ್ರಕಟಿಸಿದರು. ಈ ಎಲ್ಲಾ ಯೋಜನೆಗಳನ್ನು ಅನುಷ್ಠಾನಗೊಳಿಸಲು ಬೊಕ್ಕಸಕ್ಕೆ ವಾರ್ಷಿಕ 50 ಸಾವಿರ ಕೋಟಿ ರೂ. ಹೊರೆಯಾಗಲಿದೆ. ಬೊಕ್ಕಸವನ್ನು ದಿವಾಳಿಗೊಳಿಸದೇ ●9ನೇ ಪುಟಕ್ಕೆ

ನಾಳೆಯಿಂದ ಮೂರು ದಿನ ವಿಧಾನಸಭೆ ಅಧಿವೇಶನ

ವಿಧಾನಸಭಾ ಸದಸ್ಯರ ಪ್ರಮಾಣ ವಚನ ಸ್ವೀಕಾರಕ್ಕೆ ಅವಕಾಶ

ಬೆಂಗಳೂರು, ಮೇ 20(ಕೆಎಂಶಿ)–ನೂತನ ಶಾಸಕರು ವಿಧಾನಸಭಾ ಸದಸ್ಯರಾಗಿ ಪ್ರಮಾಣ ವಚನ ಸ್ವೀಕರಿಸುವ ಉದ್ದೇಶದಿಂದ ಮೇ 22ರಿಂದ 24ರವರೆಗೆ ವಿಧಾನಸಭೆ ಅಧಿವೇಶನ ಕರೆಯಲು ಇಂದಿನ ಸಂಪುಟ ಸಭೆ ತೀರ್ಮಾನಿಸಿದೆ. ಸಭೆಯ ನಂತರ ಸುದ್ದಿಗೋಷ್ಠಿಯಲ್ಲಿ ಈ ವಿಷಯ ತಿಳಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ, ಅಧಿವೇಶನ ಕರೆಯಲು ಅನುಮತಿ ನೀಡುವಂತೆ ರಾಜ್ಯಪಾಲರನ್ನು ಕೋರುತ್ತೇವೆ ಎಂದರು. ಸದನದ ಹಿರಿಯ ಸದಸ್ಯ ಆರ್.ವಿ.ದೇಶಪಾಂಡೆ ಪ್ರೋಟರ್ಮ್ ಸ್ಪೀಕರಾಗಿ ಕಾರ್ಯ ನಿರ್ವಹಿಸುವಂತೆ ಕೋರಲಾಗುವುದು. ನಂತರ ನೂತನ ಸಭಾಧ್ಯಕ್ಷರ ಆಯ್ಕೆ ಪ್ರಕ್ರಿಯೆ ನಡೆಯಲಿದೆ. ಜುಲೈ ತಿಂಗಳಲ್ಲಿ ಅಧಿವೇಶನ ಕರೆದು ನಮ್ಮ ಸರ್ಕಾರದ ಬಜೆಟ್ ಅನ್ನು ಮಂಡಿಸಲಾಗುವುದು ಎಂದು ಅವರು ಹೇಳಿದರು.



ನಕ್ಕರೆ ಅದೇ ಸ್ವರ್ಗ

ಡಾಕ್ಟರ್ : "ನಾನು ಕೊಟ್ಟ ಔಷಧಿ ಮುಗಿಯಿತಾ?"
ಗುಂಡ : "ಇಲ್ಲ ಡಾಕ್ಟ್ರೇ."
ಡಾಕ್ಟರ್ : "ಯಾಕೆ?"
ಗುಂಡ : "ಔಷಧಿ ಬಾಟಲಿಯ ಮೇಲೆ ಯಾವಾಗಲೂ ಮುಚ್ಚಿಡಿ ಎಂದು ಬರೆದಿತ್ತು. ಅದಕ್ಕೆ ನಾನು ಔಷಧಿ ಬಾಟಲಿಯ ಮುಚ್ಚಳ ತೆಗಿಯಲೇ ಇಲ್ಲ!"

ಮೈಸೂರು ಮಿತ್ರ
ಭಾನುವಾರ, 21 ಮೇ 2023
ಸತ್ಯೇನೋತ್ತಭಿತಾ ಭೂಮಿಃ!! ನಹಿ ಸತ್ಯಾತ್ಪರೋ ಧರ್ಮಃ!
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)
ಸಂಪಾದಕ: ಎಂ.ಗೋವಿಂದೇಗೌಡ M.A.

ಅಮೃತವಾಹಿನಿ..........
ಕೊಂಬೆ ಮೇಲೆ ಕುಳಿತ ಹಕ್ಕಿ ಅಲುಗಾಡುವ ಆ ಕೊಂಬೆಯನ್ನು ನೋಡಿ ಭಯ ಪಡುವುದಿಲ್ಲ. ಕಾರಣ ಅದು ನಂಬಿದ್ದು ಕೊಂಬೆಯನ್ನಲ್ಲ, ತನ್ನ ರಕ್ಕೆಗಳನ್ನು. –ನುಡಿಮುತ್ತು

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ಬಾಯಿ ಬಿಟ್ಟರೆ ಬಣ್ಣಗೇಡು.

ನಿಮ್ಮ ಪತ್ರಗಳು

ಕಾಂಗ್ರೆಸ್ ಮುಕ್ತ ಭಾರತ ಎನ್ನುತ್ತಿದ್ದವರಿಗೆ ಬಿದ್ದ ಛಾಟಿ ಏಟು!

ಮಾನ್ಯರೆ,

ಒಂದೆರಡು ವರ್ಷಗಳ ಹಿಂದೆ ದೇಶವನ್ನು ಕಾಂಗ್ರೆಸ್ ಮುಕ್ತ ಭಾರತವನ್ನಾಗಿ ಮಾಡುತ್ತೇವೆ ಎಂದು ಶೂರಾವೇಶದಿಂದ ಮಾತನಾಡುತ್ತಿದ್ದ ವ್ಯಕ್ತಿಗಳ ಪಕ್ಷವೇ ಈಗ ದಕ್ಷಿಣ ಭಾರತದಿಂದಲೇ ಕಣ್ಮರೆಯಾಗಿದೆ. ಇದಕ್ಕೆ ಪ್ರತಿಯಾಗಿ, ಕಾಂಗ್ರೆಸ್ ಪಕ್ಷ ಪುಟಿದೆದ್ದ ಚೆಂಡಿನಂತೆ ಮೇಲೆರಗಿ, ರಾಜ್ಯದಲ್ಲಿ ಅಭೂತಪೂರ್ವ ವಿಜಯ ದಾಖಲಿಸಿದೆ. ಹೌದು ರಾಜಕೀಯದಲ್ಲಿ ಯಾವಾಗ ಏನಾಗುತ್ತದೇ ಎಂಬುದನ್ನು ಹೇಳಲಾಗುವುದಿಲ್ಲ. ಉದಾಹರಣೆಗಾಗಿ, ಕೇಂದ್ರದಲ್ಲಿ ಸ್ವಾತಂತ್ರ್ಯ ಬಂದಾಗಿನಿಂದಲೂ ಅಧಿಕಾರದಲ್ಲಿದ್ದ ಕಾಂಗ್ರೆಸ್ ಪಕ್ಷ, 1977ರ ಲೋಕಸಭಾ ಚುನಾವಣೆಯಲ್ಲಿ ಆಗ ತಾನೇ ಜನಿಸಿದ್ದ ಜನತಾ ಪಕ್ಷ ಎಂಬ ಶಿಶುವಿನ ಮುಂದೆ ಸೋತು ಶರಣಾಯಿತು. ಆದರೆ 1980ರಲ್ಲಿ ನಡೆದ ಲೋಕ ಸಭಾ ಚುನಾವಣೆಯಲ್ಲಿ ಮತ್ತೆ ಅಧಿಕಾರಕ್ಕೆ ಬಂದಿತು. ಸುಮಾರು 25 ವರ್ಷಗಳಷ್ಟು ದೀರ್ಘ ಕಾಲ ಪಶ್ಚಿಮ ಬಂಗಾಳವನ್ನು ಆಳಿದ ಎಡ ಪಕ್ಷಗಳು, ಮುಂದೆ ಮಮತಾ ಬ್ಯಾನರ್ಜಿ ನೇತೃತ್ವದ "ತೃಣಮೂಲ ಕಾಂಗ್ರೆಸ್" ನಿಂದ ಸೋಲಬೇಕಾಯಿತು. ದೆಹಲಿಯನ್ನು ಹೆಚ್ಚು ಕಾಲ ಆಳಿದ ಕಾಂಗ್ರೆಸ್ ಮತ್ತು ಬಿಜೆಪಿ ಮುಂದೆ "ಆಮ್ ಆದ್ಮಿ ಪಕ್ಷ"ಕ್ಕೆ ಶರಣಾಯಿತು. ಈ ರೀತಿ ರಾಜಕೀಯ ಎಂಬುದು ಒಂದು ಹಾವು ಏಣಿ ಆಟವಾಗಿದ್ದು, ಯಾವಾಗ ಏನಾಗುತ್ತದೆ ಎಂಬುದನ್ನು ಊಹಿಸಲು ಕಷ್ಟವಾಗುತ್ತದೆ. ಆದ್ದರಿಂದ ಗೆದ್ದವರು ಹಿಗ್ಗದೇ, ಸೋತವರು ಕುಗ್ಗದೆ ತಮ್ಮ ಪಾಲಿನ ಕರ್ತವ್ಯಗಳನ್ನು ಮಾಡಿ, ಜನ ಬೆಂಬಲ ಗಳಿಸಲು ಪ್ರಯತ್ನಿಸಬೇಕು.

–ಕೆ.ವಿ.ವಾಸು, ವಕೀಲರು ಮತ್ತು ನೋಟರಿ, ಮೈಸೂರು

ಹೆಣ್ಣು ವಸ್ತುವಲ್ಲ ಜೀವನದ ವಿಷಯ

ಮಾನ್ಯರೆ,

ಪ್ರತಿವರ್ಷ ಮಹಿಳೆಯರ ಹಕ್ಕುಗಳನ್ನು ಉತ್ತೇಜಿಸಲು ಪ್ರಪಂಚದಾದ್ಯಂತ ಮಾರ್ಚ್ 8 ಅನ್ನು ಅಂತರರಾಷ್ಟ್ರೀಯ ಮಹಿಳಾ ದಿನವನ್ನಾಗಿ ಆಚರಿಸಲಾಗುತ್ತದೆ. ಇದು ರಾಜಕೀಯ, ಆರ್ಥಿಕ, ಸಾಮಾಜಿಕ ಮತ್ತು ಸಾಂಸ್ಕೃತಿಕ ಕ್ಷೇತ್ರಗಳಲ್ಲಿ ಅವರ ಸಾಧನೆಗಳನ್ನು ಗೌರವಿಸಲು ಪ್ರಯತ್ನಿಸುವುದಾಗಿದೆ.

ಹೆಣ್ಣು ಎಂದರೆ ಭೂಮಿ, ಪ್ರಕೃತಿ, ಜೀವ ಜಲ, ಉಸಿರಾಡುವ ಗಾಳಿ, ಪವಿತ್ರ ಅಗ್ನಿ, ಸಂಪತ್ತು, ಧೈರ್ಯ, ವಿದ್ಯೆ ಹೀಗೆ ಜಗತ್ತಿನ ಪ್ರತಿಯೊಂದರಲ್ಲೂ ಹೆಣ್ಣನ್ನು ಕಾಣಬಹುದಾಗಿದೆ. ಹೆಣ್ಣು ಇಲ್ಲದೆ ಜಗತ್ತು ನಶ್ವರ, ಪುರಾಣ ಮತ್ತು ಇತಿಹಾಸಗಳ ಪ್ರಕಾರ ಗಾರ್ಗಿ ಮತ್ತು ಮೈತ್ರೇಯಿ ಜಗತ್ತು ಮೊದಲು ಗುರುತಿಸಿದ ಮೊದಲ ಮಹಿಳಾ ವಿದ್ವಾಂಸರು, ಪುರಾಣಗಳ ಪ್ರಕಾರ ಜಗತ್ತಿನ ಮೊದಲ ಮಹಿಳೆ ಕರ್ತಕಿ.

ರಾಜ್ಯವನ್ನು ಆಳುವುದರಿಂದ ಹಿಡಿದು ದೇಶವನ್ನು ರಕ್ಷಣೆ ಮಾಡವಲ್ಲೂ ಮಹಿಳೆಯ ಪಾತ್ರ ಪ್ರಮುಖವಾಗಿದೆ. ಉದಾಹರಣೆಗೆ ಈಜಿಪ್ಟಿನ ಸುಂದರಿ ಕ್ಲಿಯೋಪಾತ್ರ, ರಾಣಿ ಚೆನ್ನಮ್ಮ, ಅಬ್ಬಕ್ಕದೇವಿ, ಅತ್ತಿಮಬ್ಬೆ, ಸಾಹಸಕ್ಕೆ ಮರಾಠರ ರಾಣಿ ಪಾರ್ವತಿ ಬಾಯಿ, ಓನಕೆ ಓಬವ್ವ, ವಿಜ್ಞಾನ ಕ್ಷೇತ್ರದಲ್ಲಿ ಕಲ್ಪನಾಚಾವ್ಲ, ಸೈಲಾ ರೈಡ್, ಮೇಗನ್ ಮ್ಯಾಕ್ ಅರ್ಥರ್ ಇತ್ಯಾದಿ. ಹೀಗೆ ಜಗತ್ತಿನ ಪ್ರತಿಯೊಂದು ಘಟನೆಗಳಲ್ಲಿ ಮಹಿಳೆಯರ ಪಾತ್ರವಿಲ್ಲದೆ ಪರಿಪೂರ್ಣವಾಗಲಾರದು.

ಪ್ರಸ್ತುತ ಮಹಿಳೆಯರ ಮೇಲಿನ ಮಾನಸಿಕ ದೌರ್ಜನ್ಯ ಹೆಚ್ಚಾಗಿದ್ದು ಶಿಕ್ಷಣ, ಉದ್ಯೋಗ, ಕ್ರೀಡೆ, ಚಲನಚಿತ್ರ ರಂಗ, ರಾಜಕೀಯ ಮುಂತಾದ ಕ್ಷೇತ್ರಗಳಲ್ಲಿ ಮಹಿಳೆಯರನ್ನು ದ್ವಿತೀಯ ದರ್ಜೆಯ ಪ್ರಜೆಗಳಂತೆ ನಡೆಸಿಕೊಳ್ಳಲಾಗುತ್ತದೆ. ಹೆಣ್ಣು ಮಕ್ಕಳ ಭ್ರೂಣ ಹತ್ಯೆ, ಅತ್ಯಾಚಾರ, ಕೊಲೆ, ಕಡಿಮೆ ಸಂಬಳಕ್ಕೆ ದುಡಿಸಿಕೊಳ್ಳುವುದು ಇತ್ಯಾದಿ ಪ್ರಕರಣಗಳು ಇತ್ತೀಚಿನ ದಿನಗಳಲ್ಲಿ ಹೆಚ್ಚಾಗುತ್ತಿದೆ.

ಮಹಿಳೆಯರ ರಕ್ಷಣೆ ನಮ್ಮೆಲ್ಲರ ಹೊಣೆಯಾಗಿದೆ. ಹೆಣ್ಣು ಕೇವಲ ಭೋಗದ ವಸ್ತುವಲ್ಲ, ಜಗತ್ತನ್ನು ಹೊತ್ತಿರುವ ವಿಷಯವಾಗಿದ್ದಾಳೆ. ಇನ್ನೊಬ್ಬ ಮಹಿಳೆಗೆ ಕಿರುಕುಳ ಕೊಡುವ ಮುನ್ನ ನಮ್ಮ ಮನೆಯ ಹೆಣ್ಣುಮಕ್ಕಳನ್ನು ನೆನಪಿಸಿಕೊಳ್ಳಬೇಕು. ಹೆಣ್ಣು ಮಕ್ಕಳ ಸುರಕ್ಷತೆ ಬಗ್ಗೆ ಸಂಬಂಧಪಟ್ಟ ಅಧಿಕಾರಿಗಳು ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಈ ಮೂಲಕ ಮನವಿ.

–ರಾಸುಮ ಭಟ್, ಚಿಕ್ಕಮಗಳೂರು.

ಸಾತಗಳ್ಳಿ ಬಡಾವಣೆಯಲ್ಲಿ ಹೈಟೆಕ್ ಬಸ್ ತಂಗುದಾಣ ನಿರ್ಮಿಸುವಂತೆ ಮನವಿ

ಮಾನ್ಯರೆ,

ಸಾಂಸ್ಕೃತಿಕ ನಗರಿ ಮೈಸೂರಿನಲ್ಲಿ ಹೈಟೆಕ್ ಬಸ್ ತಂಗುದಾಣಗಳನ್ನು ನಿರ್ಮಾಣ ಮಾಡುತ್ತಿರುವುದು ಸಂತೋಷದ ವಿಷಯ.

ಆದರೆ ಸಾತಗಳ್ಳಿ ಬಸ್ ನಿಲ್ದಾಣದಿಂದ ದೇವೇಗೌಡ ಸರ್ಕಲ್‌ವರೆಗೆ ಅಂದರೆ ರಿಂಗ್ ರಸ್ತೆಯ ಎರಡೂ ಬದಿಯಲ್ಲಿ ಹಲವಾರು ಬಡಾವಣೆಗಳು ನಿರ್ಮಾಣವಾಗುತ್ತಿದ್ದು, ಯಾವುದೇ ಬಸ್ ನಿಲ್ದಾಣಗಳಿಲ್ಲ. ಅಲ್ಲದೆ ರಿಂಗ್ ರಸ್ತೆಯಲ್ಲಿ ಕೇವಲ 9 ಸಿಟಿ ಬಸ್‌ಗಳು ಕಾರ್ಯಾಚರಣೆಯಾಗುತ್ತಿದ್ದು, ಒಂದು ಬಸ್ ಸಿಟಿ ಬಸ್ ನಿಲ್ದಾಣದಿಂದ ಮಾನಸೀನಗರಕ್ಕೆ ಸಂಚರಿಸುತ್ತಿದೆ. ಇಂತಹ ಬಿರು ಬೇಸಿಗೆಯಲ್ಲಿ ರಿಂಗ್ ರಸ್ತೆ ಎರಡು ಬದಿಯಲ್ಲಿ ಯಾವುದೇ ಬಸ್ ಷೆಲ್ಟರ್ ಸೌಲಭ್ಯವಿಲ್ಲದೆ ಪ್ರಯಾಣಿಕರು ಹೈರಾಣಾಗಿದ್ದಾರೆ. ಇದರ ಬಗ್ಗೆ ಸಂಬಂಧಪಟ್ಟ ಅಧಿಕಾರಿಗಳಿಗೆ ಮನವಿ ಸಲ್ಲಿಸಿದರೂ ಯಾವುದೇ ಪ್ರಯೋಜನವಾಗಿಲ್ಲ. ಕೂಡಲೇ ಸಂಬಂಧಪಟ್ಟವರು ಹೈಟೆಕ್ ಬಸ್ ಷೆಲ್ಟರ್ ನಿರ್ಮಿಸಿ ಪ್ರಯಾಣಿಕರಿಗೆ ಅನುಕೂಲ ಮಾಡಿಕೊಡಬೇಕೆಂದು ಮನವಿ.

–ಎನ್.ಆರ್. ವಿಜಯಕುಮಾರ್, ಮಾನಸೀನಗರ, ಮೈಸೂರು.

2000 ರೂ. ಮುಖಬೆಲೆ ನೋಟು ಹಿಂಪಡೆವ ಆದೇಶದಿಂದ ಕಪ್ಪು ಹಣವಾಗಿ ಕಪ್ಪು ಹಣವಾಗಿಯೇ ಉಳಿಯುತ್ತದೆ

ಮಾನ್ಯರೆ,

2000 ರೂ. ಮುಖಬೆಲೆಯ ನೋಟುಗಳನ್ನು ಚಲಾವಣೆಯಿಂದ ಹಿಂದೆ ಪಡೆದ ರಿಸರ್ವ್ ಬ್ಯಾಂಕ್ ನೋಟುಗಳನ್ನು ದಿನಕ್ಕೆ 20,000 ರೂ. ಮೀರದಂತೆ ಬ್ಯಾಂಕುಗಳಲ್ಲಿ ವಿನಿಮಯ ಮಾಡಿಕೊಳ್ಳಲು ಅವಕಾಶ ಮಾಡಿಕೊಟ್ಟಿದೆ. ಇದರಿಂದ ಕಪ್ಪು ಹಣ ಕಪ್ಪು ಹಣವಾಗಿಯೇ ಉಳಿಯುತ್ತದೆ. ಅದರ ಬದಲು ಜನರ ಬಳಿ ಇರುವ 2000 ರೂ. ಮುಖಬೆಲೆಯ ನೋಟುಗಳನ್ನು ಅವರವರ ಬ್ಯಾಂಕ್ ಖಾತೆಗಳಿಗೆ ಜಮಾ ಮಾಡುವಂತೆ ಅವಕಾಶ ನೀಡಿದ್ದರೆ ಕಪ್ಪು ಹಣವನ್ನು ಗುರುತಿಸುವುದು ಸಾಧ್ಯವಾಗುತ್ತಿತ್ತು. ಈಗಲೂ ಕಾಲ ಮಿಂಚಿಲ್ಲ. ತನ್ನ ಹಿಂದಿನ ಆದೇಶವನ್ನು ರಿಸರ್ವ್ ಬ್ಯಾಂಕ್ ಮಾರ್ಪಡಿಸಲಿ.

–ಕೊ.ಸು. ನರಸಿಂಹಮೂರ್ತಿ, ಚಾಮರಾಜಪುರಂ, ಮೈಸೂರು.



ಬಿಚ್ಚು ನುಡಿ

ವಿಕ್ರಂ ಮುತ್ತಣ್ಣ

ಕಾಂಗ್ರೆಸ್ ಅಧಿಪತಿ

ಕಾಂಗ್ರೆಸ್ ಪಕ್ಷಕ್ಕೆ ರಾಜ್ಯದಲ್ಲಿ ಅಭೂತಪೂರ್ವ ಜನಾದೇಶ ದೊರೆತ ಕೂಡಲೇ, ಕಠೋರ ಸ್ವಭಾವದವರಾದರೂ, ಭಾವೋದ್ವೇಗಕ್ಕೊಳಗಾದ ಡಿ.ಕೆ.ಶಿವಕುಮಾರ್ ಅತೀವ ಸಂತೋಷದಿಂದ ಮಾಧ್ಯಮಗಳ ಮುಂದೆ ಆನಂದ ಭಾಷ್ಪ ಸುರಿಸಿದರು. ಪ್ರಾಯಶಃ ಈಗ ತಮಗೆ ಮುಖ್ಯಮಂತ್ರಿ ಹುದ್ದೆ ಸಿಗಲಿಲ್ಲವೆಂಬ ಕಾರಣಕ್ಕೆ ಒಳಗೊಳಗೆ ಕಣ್ಣೀರು ಸುರಿಸುತ್ತಿರಬಹುದು. ತಮ್ಮ ಬದುಕಿನುದ್ದಕ್ಕೂ, ಕಾಂಗ್ರೆಸ್ ಪಕ್ಷಕ್ಕೆ ನಿಷ್ಠೆಯಿಂದ ದುಡಿಯುವ ಕುದುರೆಯಂತಿರುವ ಡಿ.ಕೆ.ಶಿವಕುಮಾರ್‌ಗೆ ಹೀಗಾದದ್ದು ದುರದೃಷ್ಟಕರ.

ಭ್ರಷ್ಟಾಚಾರದ ಪ್ರಕರಣಗಳು, ಅನುಭವದ ಕೊರತೆ, ಜನ ನಾಯಕನಾಗಲು ಇರುವ ಕೆಲ ಕೊರತೆಯಿಂದಾಗಿ ಡಿ.ಕೆ. ಶಿವಕುಮಾರ್ ಮುಖ್ಯಮಂತ್ರಿ ಹುದ್ದೆಗೆ ಸರಿಯಾದ ಆಯ್ಕೆಯಲ್ಲ ಎಂಬುದು ಹಲವರ ನಂಬಿಕೆಯಾಗಿದ್ದರೂ, ಅದೇ ವೇಳೆ ಅವರ ಬಗ್ಗೆ ಸಹಾನುಭೂತಿಯನ್ನೂ ತೋರಿಸಬೇಕಾಗಿದೆ.

ಡಿಕೆಶಿಯವರು ನಿಜವಾಗಿಯೂ ಕಟ್ಟಾ ಕಾಂಗ್ರೆಸ್ಸಿಗ. ಅಲ್ಲದೇ ಕಾಂಗ್ರೆಸ್ ಪಕ್ಷದ ಓರ್ವ ಅತ್ಯಂತ ನಿಷ್ಠಾವಂತ ಕಾರ್ಯಕರ್ತ ಹಾಗೂ ಆ ಪಕ್ಷದ ರಕ್ಷಕ. ಅವರು ಹಲವಾರು ಮಹತ್ವಪೂರ್ಣ ಸಮಾವೇಶ, ರ್‍ಯಾಲಿಗಳನ್ನು ನಡೆಸಿದ್ದರು. ಹಾಗೂ ಗುಜರಾತ್‌ನಿಂದ ಮಹಾರಾಷ್ಟ್ರದವರೆಗೂ, ಕಾಂಗ್ರೆಸ್ ಸರ್ಕಾರಗಳ ಉಳಿಸಿದ್ದಾರೆ.

ಕೆಲವು ಕಾಂಗ್ರೆಸ್ ನಾಯಕರು ಡಿಕೆಶಿಯವರ ಭ್ರಷ್ಟಾಚಾರ ಪ್ರಕರಣಗಳನ್ನು ಬಿಂಬಿಸಿದರೆ, ಅದೇ ನಾಯಕರು, ಅವರ ಆರ್ಥಿಕ ಸಂಪನ್ಮೂಲವನ್ನು ಸಮಾವೇಶಗಳಿಗಾಗಿ ಬಳಸಿಕೊಂಡು, ಮತಗಳನ್ನು ಗಳಿಸಿ, ಸರ್ಕಾರವನ್ನು ರಕ್ಷಿಸಿಕೊಂಡಿದ್ದಕ್ಕೆ ಮುಜುಗರಪಡಲಿಲ್ಲ. ಅದು ಹಾಗಿರಲಿ. ಅದೆಲ್ಲಾ ಬರೀ ರಾಜಕೀಯ.

ಅನೇಕ ಡಿಕೆಶಿ ಬೆಂಬಲಿಗರು, ಸಿದ್ದರಾಮಯ್ಯನವರು, ಉಪ ಮುಖ್ಯಮಂತ್ರಿ ಹಾಗೂ ನಂತರ ಮುಖ್ಯಮಂತ್ರಿಯಾಗಿ ಯಾವುದೇ ಅಡೆ–ತಡೆ ಇಲ್ಲದೆ ಐದು ವರ್ಷಗಳ ಕಾಲ ಕಾರ್ಯನಿರ್ವಹಿಸಿರುವಾಗ, ಮತ್ತೇ ಅವರೇ ಏಕೆ? ಅಷ್ಟೇ ಅಲ್ಲ, ಅಂದಿನ ಕೆಪಿಸಿಸಿ ಅಧ್ಯಕ್ಷರಾಗಿದ್ದ ಡಾ.ಜಿ.ಪರಮೇಶ್ವರ ಹಾಗೂ ಮಲ್ಲಿಕಾರ್ಜುನ ಖರ್ಗೆಯವರ ಸೋಲಿಗೆ ಕಾರಣ ಮತ್ತು ಅವರು ಮುಖ್ಯಮಂತ್ರಿ ಹುದ್ದೆಯತ್ತ ಸುಳಿಯದಂತೆ ನೋಡಿಕೊಂಡರು ಎಂಬ ಆರೋಪ ಹೊತ್ತ ಸಿದ್ದರಾಮಯ್ಯನವರನ್ನು ಕಾಂಗ್ರೆಸ್ ನಾಯಕತ್ವ ಹೇಗೆ ಮತ್ತೆ ಮುಖ್ಯಮಂತ್ರಿಯನ್ನಾಗಿ ಆಯ್ಕೆ ಮಾಡುತ್ತದೆ ಎಂದು ವಾದಿಸುತ್ತಾರೆ.

ಒಳ್ಳೆಯದು, ಡಿ.ಕೆ.ಶಿವಕುಮಾರ್‌ರವರ ಬೆಂಬಲಿಗರು, ಸಿದ್ದರಾಮಯ್ಯ ಯಾರೆಂಬುದನ್ನು ಮರೆತಿದ್ದಾರೆ. ಸಿದ್ದರಾಮಯ್ಯನವರು ಅದೃಷ್ಟದ ಕೂಸು. ರಾಜಕೀಯ ವಿಷಯಕ್ಕೆ ಬಂದಾಗ, ಸಿದ್ದರಾಮಯ್ಯ ಅದೃಷ್ಟದ ಮನುಷ್ಯ. ಶಾಸಕರಾದ ನಂತರ ಕೇವಲ 7 ವರ್ಷಗಳಲ್ಲಿ ಅವರು ಉಪ ಮುಖ್ಯಮಂತ್ರಿಯಾದರು. ಹಾಗೂ ಮತ್ತೊಂದು ಪಕ್ಷಕ್ಕೆ ಸೇರಿದ ಏಳೇ ವರ್ಷದಲ್ಲಿ ಅವರು ಮುಖ್ಯಮಂತ್ರಿಯಾದರು. ಈಗ ಅದೇ ಪಕ್ಷದಲ್ಲಿ ಮತ್ತೆ ಅವರೇ ಮುಖ್ಯಮಂತ್ರಿ. ಕಾಂಗ್ರೆಸ್ ಪಕ್ಷದಲ್ಲಿ ಎರಡು ದಶಕಗಳಿಗೂ ಅಧಿಕ ಕಾಲದಿಂದ ಕಾದಿದ್ದ ಅನೇಕ ಸಮರ್ಥ ನಾಯಕರು ಈ ಹುದ್ದೆಯಿಂದ ವಂಚಿತರಾಗಿದ್ದಾರೆ.

ಮಲ್ಲಿಕಾರ್ಜುನ ಖರ್ಗೆಯವರು ಕಾಂಗ್ರೆಸ್ ಅಧ್ಯಕ್ಷರಾಗಿ ದೆಹಲಿಯಲ್ಲೇ ಕುಳಿತಿರಬೇಕಾಗಿದೆ. ಡಾ.ಪರಮೇಶ್ವರ್ ಅವರೀಗ ಅಪ್ರಸ್ತುತ. ಡಿ.ಕೆ.ಶಿವಕುಮಾರ್ ಅವರು ಉಪ ಮುಖ್ಯಮಂತ್ರಿ ಹುದ್ದೆಯನ್ನು ಒಪ್ಪಿಕೊಳ್ಳುವಂತೆ ಬಲವಂತಪಡಿಸಲಾಗಿದೆ. ಈ ಹುದ್ದೆ ಶಕ್ತಿಶಾಲಿಯಾಗಿರುವುದಿರಲಿ, ಕಡೆಯ ಪಕ್ಷ ಸಾಂವಿಧಾನಿಕ ಮಾನ್ಯತೆ ಕೂಡ ಹೊಂದಿಲ್ಲ. ಪರಿಸ್ಥಿತಿ ಹೀಗಿರುವಾಗ ಆ **'ಲಕ್ಕಿ ಸಿದ್ದು'** ಎಂಬ ರೇಖೆ ಮುಂದುವರೆದಿದೆ.

ಈಗ ಸ್ಪಷ್ಟವಾಯ್ತು ಸಿದ್ದರಾಮಯ್ಯ ಕರ್ನಾಟಕದಲ್ಲಿ ಕಾಂಗ್ರೆಸ್‌ನ ಅಧಿಪತಿ.

ಡಿಕೆಶಿ ಬಗ್ಗೆ ಅನುಕಂಪ ಹೊಂದಬಹುದಾದರೂ, ಓರ್ವ ಮೈಸೂರಿಗರಾದ ಸಿದ್ದರಾಮಯ್ಯನವರು ಮುಖ್ಯಮಂತ್ರಿಯಾಗಿರುವುದಕ್ಕೆ ನಾವು ಸಂತೋಷಪಡಬೇಕಿದೆ. ಅದಕ್ಕಿಂತ ಮುಖ್ಯವಾಗಿ, ಸಿದ್ದರಾಮಯ್ಯನವರಿಂದ ಅಭಿವೃದ್ಧಿಯ ಬಗ್ಗೆ ನಾವು ಆಶಾವಾದಿಗಳಾಗಬಹುದು. ಕೋವಿಡ್ ಸೋಂಕಿನ ಸಂದರ್ಭದಲ್ಲಿ ನಮ್ಮ ನೆರವಿಗೆ ಬಂದ, ಹೊಸ ಸರ್ಕಾರಿ ಆಸ್ಪತ್ರೆಗಳು, ವಿಶಾಲವಾದ ರಸ್ತೆಗಳು, ಹಾಗೆಯೇ ಮಹಾರಾಣಿ ಕಾಲೇಜು, ಜಿಲ್ಲಾ ಕಚೇರಿಗಳ ಸಮುಚ್ಚಯ ಇವುಗಳೆಲ್ಲಾ ಸಿದ್ದರಾಮಯ್ಯನವರ ಕೊಡುಗೆಗಳೇ ಆಗಿವೆ.

ಕರ್ನಾಟಕದ ಮುಖ್ಯಮಂತ್ರಿ ಹುದ್ದೆ 'ಕ್ಲಬ್ ಮಹೀಂದ್ರ' ಇದ್ದ ಹಾಗೆ ಎಂದು ಹೇಳುವವರು ಉಂಟು. ಅಂದರೆ, ಸಮಯಕ್ಕೆ ತಕ್ಕ ಹಾಗೆ ಹಂಚಿಕೆಯಾಗುವ ಆಸ್ತಿ ಇದ್ದ ಹಾಗೆ. ಮುಖ್ಯಮಂತ್ರಿ ಹುದ್ದೆಯನ್ನು ಸಿದ್ದರಾಮಯ್ಯನವರು ಎರಡೂವರೆ ವರ್ಷಗಳ ಕಾಲ, ಡಿಕೆಶಿಯವರು ಉಳಿದ ಎರಡೂ ವರ್ಷಗಳ ಕಾಲ ಹಂಚಿಕೊಳ್ಳಲಿದ್ದಾರೆ.

ಆದರೆ, ಸಿದ್ದರಾಮಯ್ಯನವರ ಅದೃಷ್ಟವನ್ನು ನೋಡಿದರೆ, ಒಂದು ವೇಳೆ ಡಿಕೆಶಿಯವರು, ಜಾರಿ ನಿರ್ದೇಶನಾಲಯದ ಮುಂದೆ ಈಗಲೂ ಇರುವ ಭ್ರಷ್ಟಾಚಾರ ಪ್ರಕರಣಗಳಲ್ಲಿ ಶಿಕ್ಷೆಗೆ ಗುರಿಯಾದರೆ, ಇವರೇ ಮುಖ್ಯಮಂತ್ರಿಯಾಗಿ ಐದು ವರ್ಷಗಳ ಕಾಲವೂ ಮುಂದುವರೆಯುತ್ತಾರೆ.

ಈಗ ಮೊದಲ ಅವಧಿಗೆ ಸಿದ್ದರಾಮಯ್ಯ ಮುಖ್ಯಮಂತ್ರಿಯಾಗಿದ್ದಾರೆ. ಒಳ್ಳೆಯ ಆಯ್ಕೆ. ಅವರಿಗೆ ಅನುಭವವಿದ್ದು ಸಾಮಾಜಿಕ ಹೊಣೆಗಾರಿಕೆಯ ಕೆಲವು ಹೋಲಿಕೆಗಳಿವೆ. ಹಾಗೂ ಅರ್ಥ ಕೌಶಲ್ಯವಿದೆ. ಅದು ಈಗ ಅವಶ್ಯವೂ ಆಗಿದೆ. ಹಾಗಿಲ್ಲವಾದಲ್ಲಿ ಕರ್ನಾಟಕವು ಕಾಂಗ್ರೆಸ್ ಘೋಷಿಸಿರುವ ಐದು ಮಹಾ ಉದ್ದೇಶಿತ ಭರವಸೆಗಳನ್ನು ಜಾರಿಗೊಳಿಸುವ ಉಮೇದಿನಲ್ಲಿ ದಿವಾಳಿಯಾಗಬಹುದು. ಅದಾಗ್ಯೂ, ಸಿದ್ದರಾಮಯ್ಯನವರ ಪಟ್ಟಾಭಿಷೇಕ ನಮಗೆ ಅಂದರೆ ಕರ್ನಾಟಕದ ಜನತೆಗೆ ಏನೆಂದು ಅರ್ಥವಾಗುತ್ತದೆ?

ಮೊದಲನೆಯದಾಗಿ, ಸರ್ಕಾರಿ ಅಧಿಕಾರಿ ವರ್ಗಕ್ಕೆ ಅದರ ಸ್ಥಾನವನ್ನು ನಿರ್ಧರಿಸುವ ಅವರ ಸಾಮರ್ಥ್ಯ. ರಾಜಕೀಯ ನಾಯಕರು ಬಲಹೀನರಾದಾಗ ಇಲ್ಲವೇ ಅವರು ಹೊಂದಿಕೊಳ್ಳುವ ಸ್ವಭಾವದವರಾದಾಗ ಉನ್ನತ ಅಧಿಕಾರಿಗಳು, ರಾಜಕಾರಣಿಗಳನ್ನು ಉಪೇಕ್ಷಿಸಿ, ಜನರ ಮೇಲೆ ಸವಾರಿ ಮಾಡುತ್ತಾರೆ. ವ್ಯವಹಾರ ಕುದುರಿಸುತ್ತಾರೆ. ರಾಜಕಾರಣಿಗಳನ್ನು ಒಬ್ಬರ ವಿರುದ್ಧ ಮತ್ತೊಬ್ಬರನ್ನು ಎತ್ತಿ ಕಟ್ಟಲಾಗುತ್ತದೆ. ಜನರ ಕೆಲಸ ಕಾರ್ಯಗಳು ವಿಳಂಬವಾಗುತ್ತವೆ. ಆದರೆ ನೇರ ಹಾಗೂ ನಿಷ್ಠುರವಾದಿ ಸಿದ್ದರಾಮಯ್ಯ ಇರುವು ದರಿಂದ, ಅವರ ಕೆಂಗಣ್ಣಿಗೆ ಗುರಿಯಾಗದಂತೆ ಅಧಿಕಾರಿಗಳು ಕೆಲಸ ಮಾಡಬಹುದು.

ಕೆಲವು ಸರ್ಕಾರಿ ಅಧಿಕಾರಿಗಳು, ಸಿದ್ದರಾಮಯ್ಯರೆಂದರೆ ಭಯಪಡುತ್ತಾರೆ. ಎಷ್ಟರ ಮಟ್ಟಿಗೆ ಅಂದರೆ, 2018ರ ವಿಧಾನ ಸಭಾ ಚುನಾವಣೆಯಲ್ಲಿ, ಅನೇಕ ಅಧಿಕಾರಿಗಳು ಸಿದ್ದರಾಮಯ್ಯನವರನ್ನು ಸೋಲಿಸಲು ವಿರೋಧ ಪಕ್ಷಕ್ಕೆ ಹೇರಳವಾಗಿ ಹಣ ನೀಡಿದ್ದರು ಎಂಬ ವರದಿಯೂ ಇದೆ. ಸಿದ್ದರಾಮಯ್ಯನವರು ಅಧಿಕಾರದಲ್ಲಿ ಇರುವುದರಿಂದ, ಕಡೆಯ ಪಕ್ಷ ಒಳ್ಳೆಯ ಅಧಿಕಾರಿಗಳು ಬೆಳಕಿಗೆ ಬರಲು ಒಂದು ಅವಕಾಶವಿದೆ.

ಎರಡನೆಯದಾಗಿ, ಅವರು ವ್ಯವಹಾರ ಕುದುರಿಸುವ ಮನುಷ್ಯನಲ್ಲ. ನಿಜ, ಎಲ್ಲಾ ರಾಜಕಾರಣಿಗಳು ನಾನಾ ವ್ಯವಹಾರ ಹಾಗೂ ಸಂಧಾನಗಳನ್ನು ಮಾಡಿಕೊಳ್ಳುವಂತೆ ಬಲವಂತಪಡಿಸಲಾಗುತ್ತದೆ. ಆದರೆ ಎಲ್ಲಿ ರೇಖೆ ಎಳೆಯಬೇಕೆಂಬುದು ಕೆಲವರಿಗೆ ಗೊತ್ತಿರುತ್ತದೆ. ಹಾಗೂ, ಸಿದ್ದರಾಮಯ್ಯನವರಿಗೆ ಲಾಭಗಾರಿಕೆ ಮತ್ತು ಸಾರ್ವಜನಿಕ ಸೇವೆಯ ನಡುವೆ ಎಲ್ಲಿ ರೇಖೆ ಹಾಕಬೇಕೆಂದು ಗೊತ್ತಿದೆ. ಏನಾದರೂ ಅವರು ಒಂದು ಕಾಲದಲ್ಲಿ ಸಮಾಜವಾದಿಯಾಗಿದ್ದವರು. ಈಗಲೂ ಅವರು ತಮ್ಮಲ್ಲಿ ಕೆಲವು ಸಮಾಜವಾದಿ ಚಿಂತನೆಗಳನ್ನು ಉಳಿಸಿಕೊಂಡಿದ್ದಾರೆ.

ಮೂರನೆಯದಾಗಿ, ಹಾಗೂ ಪ್ರಾಯಶಃ ಪ್ರಮುಖ ವಿಚಾರವೆಂದರೆ, ಅವರು ನಾಸ್ತಿಕರಾಗಿದ್ದಾರೆ. ಧರ್ಮದಲ್ಲಿ ಅವರಿಗೆ ನಂಬಿಕೆ ಇಲ್ಲವಾದರೂ ದೇವರನ್ನು ನಂಬುತ್ತಾರೆ. ಕಳೆದ ಹಾಗೂ ಇತ್ತೀಚಿನ ಚುನಾವಣೆಯ ಸಂದರ್ಭದಲ್ಲಿ, ಅವರು ಪೂಜಾ ಸ್ಥಳಗಳಿಗೆ ಭೇಟಿ ನೀಡಿದ್ದರು, ಆದರೆ ಅದು ಹೆಚ್ಚಾಗಿ ರಾಜಕೀಯ ದೃಷ್ಟಿಕೋನ ಹೊಂದಿತ್ತು.

ಸರ್ಕಾರವು ನಮ್ಮ ಹಣವನ್ನು ಧಾರ್ಮಿಕ ಕೇಂದ್ರಗಳ ಮೇಲೆ ಖರ್ಚು ಮಾಡುವ ಬದಲು, ಅದೇ ಹಣವನ್ನು ಅಗತ್ಯ ಹಾಗೂ ಪ್ರಮುಖವಾದ ಮೂಲ ಸೌಕರ್ಯ ಯೋಜನೆಗಳು, ಶಿಕ್ಷಣ, ಆರೋಗ್ಯ ಕ್ಷೇತ್ರಗಳ ಮೇಲೆ ಖರ್ಚು ಮಾಡಬೇಕು.

ಬಿಜೆಪಿ ಸರ್ಕಾರವು, ಮಠ ಮಾನ್ಯಗಳಿಗೆ, ಹೆಚ್ಚು ಹಣ ನೀಡಲು ಮುಂದಾದಾಗ, ಧಾರ್ಮಿಕ ಕೇಂದ್ರಗಳಿಗೆ ಹಣ ನೀಡುವುದರ ವಿರುದ್ಧ ಪ್ರಾಸಂಗಿಕವಾಗಿ, ಸಿದ್ದರಾಮಯ್ಯನವರು ವಿಧಾನಸಭೆಯಲ್ಲಿ ಸುದೀರ್ಘವಾಗಿ ಮಾತನಾಡಿದ್ದರು.

ಇದರ ಜೊತೆಗೆ, ಅವರು ಜಾತಿಗೆ ಮಹತ್ವ ನೀಡುವುದಿಲ್ಲ. ಹೌದು ಅವರು ಕುರುಬ ಸಮುದಾಯದ ಮುಖಂಡರೆಂದು ಗುರ್ತಿಸಿಕೊಂಡಿದ್ದಾರೆ. ಆದರೆ, ತಮ್ಮ ಸುತ್ತಮುತ್ತಲೂ, ಎಲ್ಲಾ ಜಾತಿಗೆ ಸೇರಿದ ಸಲಹೆಗಾರರು ಮತ್ತು ಸಹಾಯಕರನ್ನು ಹೊಂದಿದ್ದಾರೆ. ಆದ್ದರಿಂದಲೇ ರಾಜಕೀಯ ವಲಯದಲ್ಲಿ ಅವರನ್ನು 'ಜಾತ್ಯಾತೀತ ರಾಜಕಾರಣಿ' ಎಂದೇ ನೋಡಲಾಗುತ್ತದೆ. ಅನೇಕರು ಜಾತ್ಯಾತೀತ ಜನತಾ ದಳದಲ್ಲಿ ಅವರು ಮತ್ತು ದೇವೇಗೌಡರು 'ಜಾತ್ಯಾತೀತರು' [Many say he and H.D.Deve Gowda were the 'S' in JD(S)] ಎಂದು ಹೇಳುತ್ತಾರೆ.

ನಾನು ಮೇಲೆ ಹೇಳಿರುವಂತಹ ಅವರ ಎಲ್ಲಾ ಗುಣ ಲಕ್ಷಣಗಳು ಓರ್ವ ಕಾಂಗ್ರೆಸ್ಸಿಗನಾಗುವ ಮುನ್ನ ಮೂಲ ಸಿದ್ದರಾಮಯ್ಯ (original Siddharamaiah)ನವರದ್ದಾಗಿವೆ.

ಕಾಂಗ್ರೆಸ್ ಪಕ್ಷ ಸೇರಿದ ನಂತರ ಅವರು ದೊಡ್ಡ ಗಣ್ಯ ಪಕ್ಷಕ್ಕೆ ಅನುಗುಣವಾಗುವ ರೀತಿಯಲ್ಲಿ ಕಾಂಗ್ರೆಸ್ ನಾಯಕರಿಂದ ಪ್ರಭಾವಿತರಾಗಿ, ಬದಲಾಗಿದ್ದಾರೆ.



ಕಾಂಗ್ರೆಸ್ ಸೇರಿದ ನಂತರವೇ, ಸಮಾಜವಾದಿಯಾಗಿದ್ದ ಸಿದ್ದರಾಮಯ್ಯ, ದುಬಾರಿ ಕೈ ಗಡಿಯಾರಗಳನ್ನು ಧರಿಸಲು ಪ್ರಾರಂಭಿಸಿದರು, ದುಬಾರಿ ಕಾರುಗಳನ್ನು ಬಳಸುವುದನ್ನು ಆರಂಭಿಸಿದರು. ನವ ನವೀನ ಮಾದರಿ ಶೂಗಳನ್ನು (designer shoes) ಧರಿಸಲು ಶುರು ಮಾಡಿದರು ಹಾಗೂ ಕೊನೆಗೆ ತಮ್ಮ ಸಹೋದ್ಯೋಗಿಗಳು ಭ್ರಷ್ಟಾಚಾರದಲ್ಲಿ ನಿರತರಾದಾಗ, ಅದನ್ನು ನಿಯಂತ್ರಿಸದೇ ವಿಮುಖರಾದರು.

ಅವರ ಹೊಸ ಕಾಂಗ್ರೆಸ್ ಅವತಾರ, ಲೋಕಾಯುಕ್ತವನ್ನು ಬಲಗೊಳಿಸುವ ಬದಲು ಅದನ್ನು ಕೊಂದಿತು. ಟಿಪ್ಪು ಜಯಂತಿ ವಿಷಯವನ್ನು ಕೆದಕಿ, ಲಿಂಗಾಯತರನ್ನು ಒಡೆಯುವ ಹುನ್ನಾರವೂ ನಡೆಯಿತು. ಇವೆಲ್ಲವೂ ರಾಜಕೀಯ ಜಯಕ್ಕೆ ಮಾತ್ರ. ಅವರು ಹಿಂದೊಮ್ಮೆ ಆಗಬೇಕೆಂದುಕೊಂಡಿದ್ದ ಸುಧಾರಕನಾಗಲು ಅಲ್ಲ.

ಆದರೆ, ಈಗ, ಐದು ಭರವಸೆಗಳೊಂದಿಗೆ ಸಿದ್ದರಾಮಯ್ಯನವರು ತಮ್ಮ ಮೂಲ ನೆಲೆಗೆ ಮರಳುತ್ತಿದ್ದಾರೆ.

ಇದು ತಮ್ಮ ಕಡೆಯ ಚುನಾವಣೆ ಎಂದು ಹೇಳುವ ಸಿದ್ದರಾಮಯ್ಯನವರ ಮಾತುಗಳು ನಿಜವಾದರೆ, ಹಳೆಯ ಸಿದ್ದರಾಮಯ್ಯನವರಾಗಲು ಅವರಿಗೆ ಇದು ಸಕಾಲ. ಇಂತಹ ಹಳೆಯ ಸಿದ್ದರಾಮಯ್ಯನವರನ್ನು ನಾವು ಯುವ ಪತ್ರಕರ್ತರು ವರ್ಷಗಳ ಹಿಂದೆ ಅಭಿಮಾನದಿಂದ ನೋಡಿ ಹೆಮ್ಮೆಪಡುತ್ತಿದ್ದೆವು.

ಸಿದ್ದರಾಮಯ್ಯನವರು ತಮ್ಮ ಕಡೆಯ ಛಾಪನ್ನು ಮೂಡಿಸಬೇಕೆಂದಿದ್ದರೆ, ಅವರು ಹಿಂದೆ ಹೇಗಿದ್ದರೋ ಅಲ್ಲಿಗೆ ಮರಳಬೇಕು. ಕೇವಲ ಕುರುಬ ಮುಖಂಡ ಅಥವಾ ಅಹಿಂದ ಮುಖಂಡನಾಗಿ ಅಲ್ಲ. ಆದರೆ ಸಾಮಾಜಿಕ ಬದ್ಧತೆಯುಳ್ಳ ಓರ್ವ ನೈಜ ಜಾತ್ಯಾತೀತ ನಾಯಕನಾಗಿ. ಕೈಗಾರಿಕೆಗಳನ್ನು ಪ್ರೋತ್ಸಾಹಿಸುತ್ತಲೇ, ಉದ್ಯೋಗಗಳನ್ನು ಸೃಷ್ಟಿಸುವ ಹಾಗೂ ಸಂಪತ್ತನ್ನು ವೃದ್ಧಿಸುವ, ಸಾಮಾಜಿಕ ಭದ್ರತಾ ಯೋಜನೆಗಳನ್ನು ಜಾರಿಗೆ ತರಬಲ್ಲ ನಾಯಕನಾಗಬೇಕು.

ಎಲ್ಲಾ ಕನ್ನಡಿಗರಿಂದ ಸಿದ್ದರಾಮಯ್ಯ ಅತ್ಯುತ್ತಮ ಕರ್ನಾಟಕವನ್ನು ಬಿಟ್ಟು ಹೋದ ಮುತ್ಸದ್ದಿ ಎಂದು ಸ್ಮರಿಸಿಕೊಳ್ಳುವುದನ್ನು ಸಿದ್ದರಾಮಯ್ಯನವರು ಬಯಸಿದರೆ, ಅವರು ಹಳೆಯ ಸಿದ್ದರಾಮಯ್ಯನವರಾಗಬೇಕು.

ಹಾಗಾದರೆ, ನಮ್ಮ ಹಳೆಯ ಸಿದ್ದರಾಮಯ್ಯನವರನ್ನು ಕಾಣುವುದು ಸಾಧ್ಯವಿದೆಯೇ? ಕಾದು ನೋಡೋಣ.

(ಮೂಲ ಇಂಗ್ಲಿಷ್ ಲೇಖನದ ಕನ್ನಡ ಅನುವಾದ)

E mail : Vikram @ starofmysore

ರಿಂಕು ಹೋರಾಟ ವ್ಯರ್ಥ; ಕೋಲ್ಕತಾ ವಿರುದ್ಧ ಲಕ್ನೋಗೆ 1 ರನ್ ಜಯ

ಕೊಲ್ಕತ್ತಾಮೇ 20(ಸಿಎನ್)– ನಿಕೋಲಸ್ ಪೂರನ್ ಬ್ಯಾಟಿಂಗ್ ಹಾಗೂ ಅಂತಿಮ ಓವರ್‌ನಲ್ಲಿ ಯಶ್‌ಧುಲ್ ಕೈಚಳಕದ ನೆರವಿನಿಂದ ಕೊಲ್ಕತ್ತಾ ನೈಟ್ ರೈಡರ್ಸ್ ವಿರುದ್ ವಿರುದ್ಧ ಲಕ್ನೋ ಸೂಪರ್ ಜೈಂಟ್ಸ್ 1 ರನ್ ರೋಚಕ ಜಯ ಸಾಧಿಸಿತು.

ಇಲ್ಲಿನ ಈಡನ್‌ಗಾರ್ಡನ್ಸ್ ಕ್ರೀಡಾಂಗಣದಲ್ಲಿ ನಡೆದ ಪಂದ್ಯದಲ್ಲಿ ಟಾಸ್ ಸೋತು ಬ್ಯಾಟಿಂಗ್ ಮಾಡಿದ ಲಕ್ನೋ ನಿಗದಿತ 20 ಓವರ್‌ಗಳಿಗೆ 8 ವಿಕೆಟ್ ನಷ್ಟಕ್ಕೆ 176 ರನ್‌ಗಳ ಸವಾಲಿನ ಮೊತ್ತ ಗಳಿಸಿತು. 177 ರನ್‌ಗಳ ಗುರಿ ಬೆನ್ನತ್ತಿದ ಕೆಕೆಆರ್ ಪರ ಏಕಾಂಗಿ ಹೋರಾಟ ನಡೆಸಿದ ರಿಂಕು ಸಿಂಗ್ ಕೇವಲ 33 ಎಸೆತಗಳಲ್ಲಿ 4 ಸಿಕ್ಸರ್ 6 ಬೌಂಡರಿ ಒಳಗೊಂಡ 67 ರನ್ ಸಿಡಿಸಿದರಾದರೂ ಪಂದ್ಯ ಗೆಲ್ಲಿಸಲು ಸಾಧ್ಯವಾಗಲಿಲ್ಲ. ರಿಂಕುಗೆ ತಂಡದ ಯಾವ ಬ್ಯಾಟ್ಸ್‌ಮನ್ ಕೂಡ ಸಾಥ್ ನೀಡಲಿಲ್ಲ ಕೊನೆಯ ಓವರಿನಲ್ಲಿ ಯಶ್‌ಧುಲ್ ಕೈಚಳಕ ಮರುಳಾದ ಕೆಕೆಆರ್ ಬ್ಯಾಟ್ಸ್‌ಮನ್‌ಗಳು 1 ರನ್‌ನಿಂದ ಜಯದಿಂದ ವಂಚಿತರಾದರು. ಲಕ್ನೋ ಪರ ರವಿ ಬಿಷ್ಣೋಯ್, ಯಶ್‌ಧುಲ್ ತಲಾ ಎರಡು ವಿಕೆಟ್ ಪಡೆದರು. ಇದಕ್ಕೂ ಮುನ್ನ ಬ್ಯಾಟ್ ಮಾಡಿದ ಲಕ್ನೋ ನಿಗದಿತ 20 ಓವರ್‌ಗಳಿಗೆ 8 ವಿಕೆಟ್ ನಷ್ಟಕ್ಕೆ 176 ರನ್‌ಗಳ ಸವಾಲಿನ ಮೊತ್ತ ಗಳಿಸಿತು. ಪ್ರೇರಕ್‌ಮಂಕಡ್ 26, ಅಯುಶ್ ಬದಾನಿ 25 ರನ್ ಗಳಿಸಿದರೆ, ನಿಕೋಲಸ್ ಪೂರನ್ 30 ಎಸೆತಗಳಲ್ಲಿ 5 ಸಿಕ್ಸರ್ ಹಾಗೂ 4 ಬೌಂಡರಿ ಒಳಗೊಂಡ 58 ರನ್ ಸಿಡಿಸಿ ತಂಡದ ಮೊತ್ತವನ್ನು 170ರ ಗಡಿ ದಾಟಿ ಸಿದರು. ಕೆಕೆಆರ್ ಪರ ವೈಭವ್‌ಆರೋರ, ಥಾಕೂರ್, ನರೈನ್ ತಲಾ ಎರಡು ವಿಕೆಟ್ ಪಡೆದರು. ನಿಕೋಲಸ್ ಪೂರನ್ ಪಂದ್ಯಶ್ರೇಷ್ಠ ಪ್ರಶಸ್ತಿ ಪಡೆದರು. ಈ ಪಂದ್ಯದಲ್ಲಿ ಗೆದ್ದ ಲಕ್ನೋ ತಂಡ 17 ಅಂಕಗ ಳೊಂದಿಗೆ ಪ್ಲೇಆಫ್‌ಗೆ ಪ್ರವೇಶಿಸಿತು. ಕೊಲ್ಕತ್ತಾ ತಂಡ 7ನೇ ಸ್ಥಾನ ಪಡೆದು ಟೂರ್ನಿಯಿಂದ ಹೊರಬಿದ್ದಿದೆ.



Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: news@mysurumithra.com For advertisements: ad@mysurumithra.com

ಸಹಾಯಕ ನಿರ್ದೇಶಕರು (ಗ್ರೇಡ್-1) ರವರ ಕಛೇರಿ, ಸಮಾಜ ಕಲ್ಯಾಣ ಇಲಾಖೆ

ಮಿನಿವಿಧಾನಸೌಧ, ನಂಜನಗೂಡು ತಾಲ್ಲೂಕು, ಮೈಸೂರು ಜಿಲ್ಲೆ-571301
Email:tswonanjangud@gmail.com Ph: 08221-227876
ಸಂಖ್ಯೆ:ಸ.ನಿ/ಸಕಇ/ಸಿಬ್ಬಂದಿ/ಅಲ್ಪಾವಧಿ ಟೆಂಡರ್/01/2023-24
ದಿನಾಂಕ: 18.05.2023

ಅಲ್ಪಾವಧಿ ಟೆಂಡರ್ ಪ್ರಕಟಣೆ

ಸಹಾಯಕ ನಿರ್ದೇಶಕರು(ಗ್ರೇಡ್-1) ರವರ ಕಛೇರಿ, ಸಮಾಜ ಕಲ್ಯಾಣ ಇಲಾಖೆ, ನಂಜನಗೂಡು ತಾಲ್ಲೂಕುರವರ ಕಛೇರಿಗೆ 2023-24 ನೇ ಸಾಲಿಗೆ ಕರ್ತವ್ಯ ನಿರ್ವಹಣೆಯ ಹಿತದೃಷ್ಟಿಯಿಂದ ಹವಾನಿಯಂತ್ರಿತ Indigo ECS/ swift Dzire tour / Toyota Etios ವಾಹನವನ್ನು ಹೊಂದಿರುವ ಟೂರ್ಸ್ ಅಂಡ್ ಟ್ರಾವೆಲ್ಸ್ ಮಾಲೀಕರು ಅಥವಾ ಟ್ರಾವೆಲ್ಸ್ ಏಜೆನ್ಸಿಗಳಿಂದ ವಾಹನ ಚಾಲಕರ ಸಮೇತ ವಾಹನವನ್ನು ಹೊರಗುತ್ತಿಗೆ ಆಧಾರದ ಮೇಲೆ ನೀಡಲು ದಿ: 01.06.2023 ರಿಂದ ದಿ: 31.03.2024 ರವರೆಗೆ 10 ತಿಂಗಳ ಅವಧಿಗೆ ಅಲ್ಪಾವಧಿ ಟೆಂಡರ್ ಆಹ್ವಾನಿಸಿದ್ದು, ಆಸಕ್ತಿಯುಳ್ಳ ಸರಬರಾಜುದಾರರು ದಿ: 20.05.2023 ರಿಂದ ದಿ: 30.05.2023 ರವರೆಗೆ ಈ ಕಛೇರಿಯಿಂದ ಅರ್ಜಿಗಳನ್ನು ಪಡೆದು ದಾಖಲಾತಿಗಳೊಂದಿಗೆ ದಿನಾಂಕ:30.05.2023 ರಂದು ಮಧ್ಯಾಹ್ನ 2-00 ಗಂಟೆಯೊಳಗೆ ಸಹಾಯಕ ನಿರ್ದೇಶಕರು(ಗ್ರೇಡ್-1) ರವರ ಕಛೇರಿ, ಸ.ಕ.ಇ, ಮಿನಿವಿಧಾನಸೌಧ, ಕೊಠಡಿ ಸಂಖ್ಯೆ:32 ರಲ್ಲಿ ಸಲ್ಲಿಸಬಹುದಾಗಿರುತ್ತದೆ.

1) **ಇಲಾಖೆ ನಿಗಧಿಪಡಿಸಿದ ಕನಿಷ್ಠ ಟೆಂಡರ್ ಮೊತ್ತ:** ರೂ:4,00,000=00 (ರೂ ನಾಲ್ಕು ಲಕ್ಷ ರೂ ಮಾತ್ರ). 2) **ಇ.ಎಂ.ಡಿ ಮೊತ್ತ ರೂ:** ರೂ:8,000=00 (ರೂ ಎಂಟು ಸಾವಿರ ಮಾತ್ರ) ಗಳಿಗೆ ಸಹಾಯಕ ನಿರ್ದೇಶಕರು(ಗ್ರೇಡ್-1), ಸಮಾಜ ಕಲ್ಯಾಣ ಇಲಾಖೆ, ನಂಜನಗೂಡು ರವರ ಹೆಸರಿಗೆ ಡಿ.ಡಿ ತರುವುದು.
3) **ಟೆಂಡರ್ ತೆಗೆಯುವ ದಿನಾಂಕ ಹಾಗೂ ಸಮಯ:** ದಿ:30.05.2023 ರಂದು ಸಂಜೆ 4-00 ಗಂಟೆಗೆ ಸಹಾಯಕ ನಿರ್ದೇಶಕರು(ಗ್ರೇಡ್-1) ರವರ ಕಛೇರಿಯಲ್ಲಿ ಲಕೋಟೆಯನ್ನು ತೆರೆಯಲಾಗುವುದು.

ಷರತ್ತುಗಳು: 1) ಟೆಂಡರ್ ಪೂರ್ಣ ಇಲ್ಲವೇ ಭಾಗಶ: ಅಂಗೀಕರಿಸುವ ಇಲ್ಲವೇ ತಿರಸ್ಕರಿಸುವ ಅಧಿಕಾರವನ್ನು ಇಲಾಖೆಯ ಮುಖ್ಯಸ್ಥರು ಹೊಂದಿರುತ್ತಾರೆ.
2) ಟೆಂಡರ್‌ಗೆ ಸಂಬಂಧಿಸಿದ ಷರತ್ತು ಮತ್ತು ನಿಬಂಧನೆಗಳು ಹಾಗೂ ವಿವರಗಳನ್ನು ಕಚೇರಿಯಿಂದ ಅರ್ಜಿ ನಮೂನೆ ಪಡೆದು ಮಾಹಿತಿಯನ್ನು ತಿಳಿಯಬಹುದಾಗಿದೆ.

ಸಹಿ/- ಸಹಾಯಕ ನಿರ್ದೇಶಕರು(ಗ್ರೇಡ್-1), ಸಮಾಜ ಕಲ್ಯಾಣ ಇಲಾಖೆ, ನಂಜನಗೂಡು ತಾಲ್ಲೂಕು

DIPR/DDMYS/KSMCA/11/2023-24

11ನೇ ವರ್ಷದ ಸವಿನೆನಪು



ವಿ:ಮುನಿವೆಂಕಟಪ್ಪ
ಕ.ಆ.ಸೇವೆ, ನಿವೃತ್ತ ವಿಶೇಷ ಜಿಲ್ಲಾಧಿಕಾರಿ, ಮೈಸೂರು
ಜನನ: 03.02.1938 ಮರಣ: 21.05.2012

ನೀವು ನಮ್ಮನ್ನಗಲಿ 10 ವರ್ಷಗಳು ಕಳೆದರೂ ಸಹ ಜೀವನದಲ್ಲಿ ಸದಾ ನಮಗೆ ದಾರಿದೀಪವಾಗಿ ಮುನ್ನಡೆಸುವ ನಿಮಗೆ ಅನಂತ ಕೋಟಿ ಕೋಟಿ ನಮಸ್ಕಾರಗಳು
ದುಃಖತಪ್ತರು:
ಇಂತಿ ನಿಮ್ಮ ಪತ್ನಿ ಸರಸ.ವಿ.ಎಂ ಮತ್ತು ಮಕ್ಕಳು ಹಾಗೂ ಕುಟುಂಬವರ್ಗ



ಮೈಸೂರು ಮಿತ್ರ ಭಾನುವಾರ 21 ಮೇ 2023

ಕೊಡವ ಸಂಸ್ಕೃತಿ, ಪರಂಪರೆ ಅನಾವರಣ

●ಮಡಿಕೇರಿ ಕೊಡವ ಯುವ ಮೇಳದಲ್ಲಿ ಅದ್ದೂರಿ ಮೆರವಣಿಗೆ ● ಸಾಧಕರಿಗೆ ಸನ್ಮಾನ





ಮಡಿಕೇರಿ, ಮೇ 20– ವೈಶಿಷ್ಟ್ಯಪೂರ್ಣವಾದ ಕೊಡವ ಜನಾಂಗದ ಸಂಸ್ಕೃತಿ, ಆಚಾರ–ವಿಚಾರ, ಹಬ್ಬ ಹರಿದಿನಗಳ ಮಹತ್ವ, ಪರಂಪರೆಯೊಂದಿಗೆ ಕೊಡಗು ಜಿಲ್ಲೆಯ ಅವಿನಾಭಾವ ಸಂಬಂಧದ ಬಗ್ಗೆ ಯುವ ಪೀಳಿಗೆಯಲ್ಲಿ ಜಾಗೃತಿ ಮೂಡಿಸುವ ಪರಿಕಲ್ಪನೆಯೊಂದಿಗೆ ಜಬ್ಬೂಮಿ ಚಾರಿಟೆಬಲ್ ಟ್ರಸ್ಟ್‌ನ ನೇತೃತ್ವದಲ್ಲಿ ಇದೇ ಪ್ರಥಮ ಬಾರಿಗೆ ಮಡಿಕೇರಿಯಲ್ಲಿ ಆಯೋಜಿತ ಕೊಡವ ಯುವ ಮೇಳ ಅಭೂತಪೂರ್ವವಾಗಿ ಜರುಗಿತು.

ತಾಯಿ ಬೇರನ್ನು ಮರೆಯದಿರಿ: ಕೊಡವರ ಸಾಂಪ್ರದಾಯಿಕ ಗೆಜ್ಜೆತಂಡ್ ಮತ್ತು ಕಾವೇರಿ ಮಾತೆಗೆ ಪೂಜೆ ಸಲ್ಲಿಸುವ ಮೂಲಕ ಮೇಳಕ್ಕೆ ಚಾಲನೆ ನೀಡಲಾಯಿತು. ಜಬ್ಬೂಮಿ ಚಾರಿಟೆಬಲ್ ಟ್ರಸ್ಟ್ ಸಂಚಾಲಕ ಚೊಟ್ಟೆಕ್‌ಮಾಡ ರಾಜೀವ್ ಬೋಪಯ್ಯ ಮಾತನಾಡಿ, ಕೊಡಗಿನ ಸಂಸ್ಕೃತಿ, ಪರಂಪರೆಗಳನ್ನು ಯುವ ಸಮೂಹ ಎಂದಿಗೂ ಮರೆಯಕೂಡದು. ಅದೇ ಕೊಡವ ಸಮುದಾಯದ ತಾಯಿಬೇರು ಎಂದು ಈ ನೆಲದ ಸಂಸ್ಕೃತಿಯ ಮಹತ್ವವನ್ನು ತಿಳಿಸಿದರು. ಪ್ರಸ್ತುತ ಕಾರಣಾಂತರಗಳಿಂದ ವಿವಿಧೆಡೆಗಳಲ್ಲಿ ಚದುರಿ ಹೋದಂತಿರುವ ಯುವ ಜನಾಂಗವನ್ನು ಕೊಡಗಿನತ್ತ ಆಕರ್ಷಿಸುವುದು, ಇಲ್ಲಿನ ವಿಶಿಷ್ಟ ಪರಂಪರೆಯ ಮಹತ್ವವನ್ನು ಪರಿಚಯಿಸಿ ಪರಸ್ಪರ ಒಗ್ಗೂಡಿಸಿ ಸಾಮರಸ್ಯ ಮೂಡಿಸುವ ಪರಿಕಲ್ಪನೆಯೊಂದಿಗೆ ಈ ಯುವಮೇಳ ಆಯೋಜಿಸಲಾಗಿದೆ ಎಂದು ತಿಳಿಸಿದರು.

ಸಾಧಕರಿಗೆ ಸನ್ಮಾನ: ಕಾರ್ಯಕ್ರಮದಲ್ಲಿ ವಿವಿಧ ಕ್ಷೇತ್ರಗಳ ಸಾಧಕರಾದ ಕಾರ್ಪೋರೇಟ್ ಕಂಪೆನಿ ಒಂದರ ಉಪಾಧ್ಯಕ್ಷ ಅಜ್ಜಮಾಡ ಗೌತಮ್ ಚಂಗಪ್ಪ, ಖ್ಯಾತ ಶೆಫ್ ಬಾರಿಯಂಡ ನರೇನ್ ತಿಮ್ಮಯ್ಯ, ಗಾಯಕ ಮಚ್ಚಂಡ ಶರಣ್ ಅಯ್ಯಪ್ಪ, ಚಲನಚಿತ್ರ ತಾರೆಯರಾದ ಉಳ್ಳಿಯಡ ಭುವನ್ ಪೊನ್ನಣ್ಣ, ಉದ್ದಪಂಡ ಹರ್ಷಿಕಾ ಪೂಣಚ್ಚ, ಕೂತಂಡ ತಾರಕ್ ಪೊನ್ನಪ್ಪ, ಐ.ಆರ್.ಎಸ್. ಅಧಿಕಾರಿ ಡಾ.ಕೊಟ್ಟಂಗಡ ಪೆಮ್ಮಯ್ಯ, ಭರತನಾಟ್ಯ ಸಾಧಕಿ ಮುಕ್ಕಾಟಿರ ಶಿಲ್ಪ ನಂಜಪ್ಪ ಬರಹಗಾರ್ತಿ ಮೇವಡ ಆಲಿಯಾ ಚೋಂದಮ್ಮ, ಟಾಲಿವುಡ್ ಮೇಕಪ್ ಪ್ರತಿಭೆ ಬಡುವಂಡ ಮಧುಶ್ರೀ ಗಣಪತಿ, ಡಾ.ಮುಕ್ಕಾಟಿರ ಅಮೃತ್ ನಾಣಯ್ಯ, ಉದ್ಯಮಿ ಮಚ್ಚಾರಂಡ ದೀಪಿಕಾ ಅಪ್ಪಯ್ಯ, ಬೆಳೆಗಾರ ಕಳ್ಳಿಚಂಡ ಚಂಗಪ್ಪ ಅರಣ್ಯ ಅಧಿಕಾರಿ ನಾಗಂಡ ಪಾರ್ವತಿ ಸೇರಿದಂತೆ ಮತ್ತಿತರ ಸಾಧಕರನ್ನು ಸನ್ಮಾನಿಸಿ ಗೌರವಿಸಲಾಯಿತು.

ಅದ್ದೂರಿ ಮೆರವಣಿಗೆ: ಸಭಾ ಕಾರ್ಯಕ್ರಮಕ್ಕೂ ಮುನ್ನ ಯುವ ಮೇಳದ ಅಂಗವಾಗಿ ನಗರದ ನೂತನ ಖಾಸಗಿ ಬಸ್ ನಿಲ್ದಾಣದ ಆರಂಭಗೊಂಡ ಅದ್ದೂರಿ ಮೆರವಣಿಗೆಗೆ ಪಟಾಕಿ ಸಿಡಿಸುವ ಮೂಲಕ ಚಾಲನೆ ದೊರೆಯಿತು. ಕೊಡವ ಜನಾಂಗದ ಸಾಧಕರ ಭಾವಚಿತ್ರಗಳೊಂದಿಗೆ ಕೊಡವ ಸಾಂಪ್ರದಾಯಿಕ ಉಡುಗೆ ಧರಿಸಿದ ಯುವಕರು, ಯುವತಿಯರು ಮೆರವಣಿಗೆಯಲ್ಲಿ ಹೆಜ್ಜೆ ಹಾಕಿದರು. ಆಕರ್ಷಕ ಸಾಂಸ್ಕೃತಿಕ ಮೆರವಣಿಗೆಗೆ ಬೈಕ್ ತಂಡದ ಬೈಕ್ ಜಾಥ ಮೆರುಗು ನೀಡಿತು. ದುಡಿಕೊಟ್ಟ್ ಪಾಟ್, ಒಡೋಲಗ ಸೇರಿದಂತೆ ಕೋವಿ, ದುಡಿ, ತಾಳ, ಒಡಿಕತ್ತಿ, ತಳಿಯತಕ್ಕಿ ಸೇರಿದಂತೆ ವಿವಿಧ ಮೂಲ ಪರಿಕರಗಳು ಮೆರವಣಿಗೆಯಲ್ಲಿ ಪ್ರತಿಬಿಂಬಿಸಿದವು.

ತೆರೆದ ವಾಹನದಲ್ಲಿ ಗಣ್ಯರು ಮತ್ತು ವಿವಿಧ ಕ್ಷೇತ್ರಗಳ ಸಾಧಕರು ಮೆರವಣಿಗೆಯಲ್ಲಿ ಪಾಲ್ಗೊಂಡಿದ್ದರು. ಮೆರವಣಿಗೆ ಉದ್ದಕ್ಕೂ ಕೊಡವ ವಾಲಗಕ್ಕೆ ಯುವ ಸಮುದಾಯ ಕುಣಿದು ಕುಪ್ಪಳಿಸಿತು. ಮೆರವಣಿಗೆ ಸಂದರ್ಭ ನಗರದ ವೀರ ಸೇನಾನಿಗಳ ಪ್ರತಿಮೆಗಳಿಗೆ ಮಾಲಾರ್ಪಣೆ ಮಾಡಲಾಯಿತು. ಬಳಿಕ ಮಂಗೇರಿರ ಮುತ್ತಣ್ಣ ವೃತ್ತಕ್ಕಾಗಿ ಜನರಲ್ ತಿಮ್ಮಯ್ಯ ವೃತ್ತದ ಮೂಲಕ ಕಾರ್ಯಕ್ರಮ ಆಯೋಜಿತ ಕ್ರಿಸ್ಟಲ್ ಕೋರ್ಟ್‌ವರೆಗೆ ಮೆರವಣಿಗೆ ಸಾಗಿಬಂತು. ಜಿಲ್ಲೆಯ ವಿವಿಧೆಡೆಗಳಿಂದ ಅಲ್ಲದೇ ಬೆಂಗಳೂರು, ಮೈಸೂರು, ಮಂಗಳೂರು ಮತ್ತಿತರರ ಕಡೆಗಳಲ್ಲಿ ನೆಲೆಸಿರುವ ಕೊಡವ ಜನಾಂಗದವರು ಕೊಡವ ಯುವ ಮೇಳದಲ್ಲಿ ಪಾಲ್ಗೊಂಡಿದ್ದರು.

ಜಬ್ಬೂಮಿ ಚಾರಿಟೆಬಲ್ ಟ್ರಸ್ಟ್‌ನ ಕಾರ್ಯದರ್ಶಿ ಅಣ್ಣೀರ ಹರೀಶ್ ಮಾದಪ್ಪ, ಪದಾಧಿಕಾರಿಗಳಾದ ಕುಂಡ್ಯೋಳಂಡ ದಿನೇಶ್ ಕಾರ್ಯಪ್ಪ, ಸದಸ್ಯರಾದ ಮಲ್ಲಮಾಡ ಪ್ರಭು ಪೂಣಚ್ಚ, ಪಾಲೇಂಗಡ ಅಮಿತ್ ಭೀಮಯ್ಯ, ಅಪ್ಪಂಡೇರಂಡ ಯಶವಂತ್ ಕಾಳಪ್ಪ ಸೇರಿದಂತೆ ವಿವಿಧ ಸಂಘ ಸಂಸ್ಥೆಗಳ ಪ್ರಮುಖರು ಹಾಜರಿದ್ದರು. ವಿವಿಧ ತಂಡಗಳು ಹಾಡು, ನಾಟಕ ಸೇರಿದಂತೆ ಕೊಡಗಿನ ಸಾಂಸ್ಕೃತಿಕ ಕಾರ್ಯಕ್ರಮ ಪ್ರಸ್ತುತಪಡಿಸಿ ಮೆಚ್ಚುಗೆಗೆ ಪಾತ್ರರಾದರು. ಕೊಡವ ಭಾಷಾ ಸಂಸ್ಕೃತಿಯ ಅತ್ಯಾಕರ್ಷಕ ಕಾರ್ಯಕ್ರಮಗಳು ದಿನಪೂರ್ತಿ ನಡೆದು ಎಲ್ಲರ ಗಮನ ಸೆಳೆಯಿತು.

ಪಾಲಿಬೆಟ್ಟದಲ್ಲಿ ಮತ್ತೆ ಕಾಡಾನೆ ದಾಳಿ

ಓಡಿ ಜೀವ ಉಳಿಸಿಕೊಂಡ ಮಹಿಳಾ ಕಾರ್ಮಿಕರು



ಸಿದ್ದಾಪುರ, ಮೇ 20– ಪಾಲಿಬೆಟ್ಟ ಸುತ್ತಮುತ್ತಲ ವ್ಯಾಪ್ತಿಯಲ್ಲಿ ಕಾಡಾನೆ ದಾಳಿಯಿಂದ ಓರ್ವ ಕಾರ್ಮಿಕ ಮೃತಪಟ್ಟು ಮತ್ತೋರ್ವ ಮೈಸೂರು ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುವ ಘಟನೆ ಬೆನ್ನಲ್ಲೇ ಇದೀಗ ಮತ್ತೆ ಕಾಡಾನೆ ದಾಳಿ ಮುಂದುವರೆದಿದ್ದು ಕಾರ್ಮಿಕ ಮಹಿಳೆಯರು ಓಡಿ ಪ್ರಾಣಾಪಾಯದಿಂದ ಪಾರಾಗಿದ್ದಾರೆ.

ಪಾಲಿಬೆಟ್ಟದ ಚೆನ್ನಂಗಿ ಸಂಪರ್ಕದ ಮುಖ್ಯ ರಸ್ತೆಯಲ್ಲಿ ಕೆಲಸ ನಿರ್ವಹಿಸಿ ಮನೆಗೆ ಹಿಂತಿರುಗುತ್ತಿದ್ದ 5ಕ್ಕೂ ಹೆಚ್ಚು ಕಾರ್ಮಿಕ ಮಹಿಳೆಯರ ಮೇಲೆ ಕಾಡಾನೆ ಏಕಾಏಕಿ ದಾಳಿ ಮಾಡಲು ಯತ್ನಿಸಿದೆ. ಕಾಫಿ ತೋಟದಿಂದ ಬಂದ ಕಾಡಾನೆಯನ್ನು ಕಂಡು ಭಯಭೀತರಾದ ಕಾರ್ಮಿಕ ಮಹಿಳೆಯರು ಓಡಿ ಪ್ರಾಣಾಪಾಯದಿಂದ ಪಾರಾಗಿದ್ದಾರೆ.

ನಿರಂತರ ಕಾಡಾನೆ ಹಾವಳಿಯಿಂದ ನೆಮ್ಮದಿಯ ಜೀವನ ನಡೆಸಲು ಸಾಧ್ಯವಾಗದಂತಹ ಪರಿಸ್ಥಿತಿ ನಿರ್ಮಾಣವಾಗಿದ್ದು, ಕಾಫಿ ತೋಟಗಳಲ್ಲಿ ಕೆಲಸ ನಿರ್ವಹಿಸಲು ಸಾಧ್ಯವಾಗುತ್ತಿಲ್ಲ. ಕಾಡಾನೆ ಹಾವಳಿಯನ್ನು ಶಾಶ್ವತವಾಗಿ ತಡೆಗಟ್ಟಬೇಕೆಂದು ಕಾರ್ಮಿಕ ಮಹಿಳೆಯರಾದ ಮಂಜುಳಾ, ಪುಷ್ಪ, ಕವಿತಾ, ಶೋಭಾ ಸೇರಿದಂತೆ ಸ್ಥಳೀಯರು ಅರಣ್ಯ ಇಲಾಖೆಯನ್ನು ಒತ್ತಾಯಿಸಿದರು. ಸ್ಥಳಕ್ಕೆ ಅರಣ್ಯ ಇಲಾಖೆ ಸಿಬ್ಬಂದಿ ಭೇಟಿ ನೀಡಿ ಕಾಫಿ ತೋಟದಲ್ಲಿ ಬಿಡು ಬಿಟ್ಟಿದ್ದ ಕಾಡಾನೆಯನ್ನು ಕಾಡಿಗಟ್ಟಲು ಮುಂದಾಗಿದ್ದಾರೆ.

ಮೇ 26 ರಿಂದ ಮಾವು, ಹಲಸು ಮೇಳ

ಮಡಿಕೇರಿ, ಮೇ 20– ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಮತ್ತು ತೋಟಗಾರಿಕೆ ಇಲಾಖೆ ಹಾಗೂ ಕೊಡಗು ಜಿಲ್ಲಾ ಹಾಪ್‌ಕಾಮ್ಸ್ ಇವರ ಸಹಯೋಗದಲ್ಲಿ ಮೇ 26 ರಿಂದ 28 ರವರೆಗೆ ಕೊಡಗು ಜಿಲ್ಲಾ ಹಾಪ್‌ಕಾಮ್ಸ್‌ನಲ್ಲಿ ಮಾವು ಮತ್ತು ಹಲಸು ಮೇಳ ನಡೆಯಲಿದೆ. ಮಾವು ಮತ್ತು ಹಲಸು ಮೇಳದ ಉದ್ಘಾಟನಾ ಕಾರ್ಯಕ್ರಮವು ಮೇ 26 ರಂದು ಬೆಳಗ್ಗೆ 10 ಗಂಟೆಗೆ ನಡೆಯಲಿದೆ.

ನಾಳೆ ಕೆಲವೆಡೆ ವಿದ್ಯುತ್ ವ್ಯತ್ಯಯ

ಮಡಿಕೇರಿ, ಮೇ 20– ಕುಶಾಲನಗರದ ಫೀಡರ್‌ನಲ್ಲಿ ತುರ್ತು ನಿರ್ವಹಣೆ ಕಾಮಗಾರಿ ಕೈಗೊಳ್ಳಬೇಕಿರುವುದರಿಂದ ಮೇ 22 ರಂದು ಬೆಳಗ್ಗೆ 10 ರಿಂದ ಸಂಜೆ 5 ಗಂಟೆವರೆಗೆ ಚಿಕ್ಕತ್ತೂರು, ದೊಡ್ಡತ್ತೂರು, ಹಾರಂಗಿ ಸುತ್ತಮುತ್ತಲ ವ್ಯಾಪ್ತಿಯ ಪ್ರದೇಶಗಳಲ್ಲಿ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ.

ಸೋಲನ್ನು ಸವಾಲಾಗಿ ಸ್ವೀಕರಿಸಬೇಕು: ಶ್ರೀನಿವಾಸ್

ಮಂಡ್ಯ, ಮೇ 20– ಸೋಲೇ ಗೆಲುವಿನ ಸೋಪಾನ. ನಾನೂ ಸಹ ಎರಡು ಸಲ ಸೋತಿದ್ದೇನೆ. ಇದನ್ನು ಸವಾಲಾಗಿ ಸ್ವೀಕರಿಸಿ ಮುಂದಿನ ಹೋರಾಟ ಮಾಡಬೇಕಿದೆ ಎಂದು ಮಾಜಿ ಶಾಸಕ ಎಂ. ಶ್ರೀನಿವಾಸ್ ಸಲಹೆ ನೀಡಿದರು.



ಸ್ವಾಭಿಮಾನಿ ಪಡೆ ವತಿಯಿಂದ ನಗರದ ನಾಲ್ವಡಿ ಕೃಷ್ಣರಾಜ ಒಡೆಯರ್ ಕಲಾ ಮಂದಿರದಲ್ಲಿ ಶನಿವಾರ ನಡೆದ ಪಕ್ಷೇತರ ಅಭ್ಯರ್ಥಿ ಕೆ.ಎಸ್.ವಿಜಯಾನಂದ ಅವರ ಆತ್ಮಾವಲೋಕನ ಸಭೆಯಲ್ಲಿ ಮಾತನಾಡಿದ ಅವರು, ನಾನು ರೈತ ಸಂಘದಿಂದ ಚುನಾವಣೆಯಲ್ಲಿ ಸ್ಪರ್ಧಿಸಿದ ವೇಳೆ 15 ಸಾವಿರ ಮತಗಳನ್ನು ಪಡೆದಿದ್ದೆ. ಕಾಂಗ್ರೆಸ್‌ನವರು 25 ಸಾವಿರ ಮತ ಪಡೆದಿದ್ದರು. ಪ್ರಭಾವತಿ 36 ಸಾವಿರ ಮತ ಪಡೆದಿದ್ದರು. ನಾನು ಸೋಲಬೇಕಾಯಿತು. ನಂತರ ನಡೆದ ಚುನಾವಣೆಯಲ್ಲಿ ಲೋಕಜನಶಕ್ತಿ ಪಕ್ಷದಿಂದ ಸೋಲುಂಡಿದ್ದೇನೆ ಎಂದರು.

ರೈತನ ಮಗ ಚುನಾವಣೆ ಎದುರಿಸುವುದು ಸಾಮಾನ್ಯ ಸಂಗತಿಯಾಗಿರಲಿಲ್ಲ. ನಂತರ ನಡೆದ ಚುನಾವಣೆಯಲ್ಲಿ ನಾನು ಗೆದ್ದು ಶಾಸಕನಾದೆ. ಅದೇ ರೀತಿ ವಿಜಯಾನಂದ ಅವರೂ ಸಹ ಸೋಲಿನಿಂದ ಧೃತಿಗೆಡದೆ ಇದನ್ನು ಸವಾಲಾಗಿ ಸ್ವೀಕರಿಸಿ ಮುಂದಿನ ಹಾದಿಯಲ್ಲಿ ಸಾಗಿ ಮತ್ತೊಮ್ಮೆ ಎದ್ದು ನಿಲ್ಲಬೇಕು ಎಂದು ಸಲಹೆ ನೀಡಿದರು.

ಸ್ವಾಭಿಮಾನಿ ಪಡೆ ಅಭ್ಯರ್ಥಿ ಕೆ.ಎಸ್. ವಿಜಯಾನಂದ ಮಾತನಾಡಿ, ನನ್ನ ರಾಜಕೀಯ ಗುರುಗಳಾದ ಎಂ.ಶ್ರೀನಿವಾಸ್ ಅವರು ನನ್ನನ್ನು ಅಭ್ಯರ್ಥಿಯನ್ನಾಗಿ ಮಾಡಿದರು. ಅವರ ನೇತೃತ್ವದಲ್ಲಿ ನಾವೆಲ್ಲರೂ ಚುನಾವಣೆಯನ್ನು ಸಮರ್ಥವಾಗಿ ಎದುರಿಸಿದ್ದೇವೆ. ಸೋಲು–ಗೆಲುವು ಮುಖ್ಯವಲ್ಲ. ನಾವು ಚುನಾವಣೆಯಲ್ಲಿ ಭಾಗವಹಿಸಿದ್ದು, ನಮಗೆ ಜನತೆ ಅತೀವ ಪ್ರೀತಿ ತೋರಿದ್ದು ಮುಖ್ಯ ಎಂದರು.

ಗಂಟಗೌಡನಹಳ್ಳಿಯಲ್ಲಿ ಪ್ರಾರಂಭವಾದ ಚುನಾವಣಾ ಪ್ರಚಾರ ಇಡೀ ಕ್ಷೇತ್ರಾದ್ಯಂತ ಚೆನ್ನಾಗಿ ನಡೆಯಿತು. ಕೆಲವೆಡೆ ಯುವಕರು, ಕಾರ್ಯಕರ್ತರು, ಮುಖಂಡರು ಅದ್ದೂರಿಯಾಗಿ ಸ್ವಾಗತಿಸಿದರು. ತಾಯಂದಿರು, ಅಕ್ಕಂದಿಯರು ಭಾವನಾತ್ಮಕವಾಗಿ ಕಣ್ಣೀರು ಹಾಕಿ ಈತನಿಗೆ ಹಣದ ಕೊರತೆ ಇದೆ. ಅದಕ್ಕೆ ನಾವೂ ಸಹಾಯ ಮಾಡಬೇಕು ಎಂದು ಹೋದಲ್ಲೆಲ್ಲ ಹಣ ಕೊಟ್ಟು ಆಶೀರ್ವದಿಸಿದರು ಎಂದು ಚುನಾವಣಾ ಪ್ರಚಾರವನ್ನು ಮೆಲುಕು ಹಾಕಿದರು.

ಬಸರಾಳು ಸೇರಿದಂತೆ ಕೆಲವೆಡೆ ನನಗೆ ಹೆಚ್ಚಿನ ಪ್ರಚಾರ ನೀಡುವುದಕ್ಕೆ ತಡೆಯೊಡ್ಡಿದರು. ಹಾರ ಹಾಕುವುದಕ್ಕೂ ವಿರೋಧಿಗಳು ತಡೆಯನ್ನುಂಟು ಮಾಡಿದರು. ಆದರೂ ಯುವ ಮಿತ್ರರು ಅದೆಲ್ಲವನ್ನೂ ಬದಿಗೊತ್ತಿ ನನ್ನ ಜೊತೆ ನಿಂತರು. ತಾಲೂಕಿನ ಉಮ್ಮಡಹಳ್ಳಿಯಲ್ಲಿ ಹೆಣ್ಣು ಮಗುವೊಂದು ತನ್ನ ಗೋಲಕದಲ್ಲಿ ಕೂಡಿಟ್ಟ ಹಣ ನನಗೆ ಕೊಟ್ಟಿದ್ದು, ಸೇರಿದಂತೆ ಹಲವಾರು ಘಟನೆಗಳನ್ನು ನಾನು ಎಂದಿಗೂ ಮರೆಯಲಾರೆ. ಸೋಲು ಮುಂದಿನ ಗೆಲುವಿನ ಮೆಟ್ಟಿಲು ಎಂಬಂತೆ ನಮ್ಮ ಪ್ರಯತ್ನ ಮುಂದುವರಿಸೋಣ. ಎಲ್ಲರೊಂದಿಗೆ ಇದೇ ರೀತಿ ಸಂಬಂಧ, ಸಂಪರ್ಕ ಇದ್ದೇ ಇರುತ್ತದೆ ಎಂದರು.

ವೇದಿಕೆಯಲ್ಲಿ ಜಿಪಂ ಮಾಜಿ ಸದಸ್ಯ ಎಚ್.ಎನ್.ಯೋಗೀಶ್, ಮುಖಂಡರಾದ ಎಂ.ಲೋಕೇಶ್, ತಿಮ್ಮೇಗೌಡ, ಜಯಶೀಲ, ಬೋರೇಗೌಡ, ಸಿದ್ದರಾಜು, ಪೂರ್ಣಾನಂದ, ಕೃಷ್ಣೇಗೌಡ ಇತರರಿದ್ದರು.

ಮಂಡ್ಯದಲ್ಲಿ 2.47 ಕೋಟಿ ಮೌಲ್ಯದ ಅಕ್ರಮ ಮದ್ಯ ವಶ

ಮಂಡ್ಯ, ಮೇ 20– ವಿಧಾನಸಭೆ ಚುನಾವಣೆ ವೇಳೆ ಜಿಲ್ಲೆಯಲ್ಲಿ 2,47,14,000 ರೂ. ಮೌಲ್ಯದ ಅಕ್ರಮ ಮದ್ಯ ವಶಪಡಿಸಿಕೊಳ್ಳಲಾಗಿದೆ ಎಂದು ಜಿಲ್ಲಾ ಅಬಕಾರಿ ಉಪ ಆಯುಕ್ತೆ ಡಾ.ಮಹಾದೇವಿಬಾಯಿ ತಿಳಿಸಿದರು.



ಡಾ. ಮಹಾದೇವಿಬಾಯಿ

ಜಿಲ್ಲಾ ಅಬಕಾರಿ ಕಚೇರಿಯಲ್ಲಿ ಶನಿವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಚುನಾವಣೆ ಹಿನ್ನೆಲೆಯಲ್ಲಿ ಅಕ್ರಮ ಮದ್ಯ ಸಾಗಾಣೆ ಹಾಗೂ ಮಾರಾಟದ ಬಗ್ಗೆ ಗಮನ ಹರಿಸುವಂತೆ ರಾಜ್ಯ ಅಬಕಾರಿ ಆಯುಕ್ತರಿಂದ ಸೂಚನೆ ಬಂದ ಹಿನ್ನೆಲೆಯಲ್ಲಿ ಫೆ.18ರಿಂದ ಮೇ 15ರವರೆಗೆ ಜಿಲ್ಲಾದ್ಯಂತ ಅಕ್ರಮ ಮದ್ಯ ಸಾಗಾಣೆ, ಮಾರಾಟದ ಮೇಲೆ ಇಲಾಖೆ ಅಧಿಕಾರಿಗಳು ಕಣ್ಣಿಟ್ಟಿದ್ದರು ಎಂದರು.

ದಾಳಿ ವೇಳೆ ಒಟ್ಟು 21,685 ಲೀಟರ್ ಮದ್ಯ ಹಾಗೂ 88,394 ಲೀಟರ್ ಬಿಯರ್, 2.100 ಕೆಜಿ ಗಾಂಜಾ, 19 ಗ್ರಾಂ ಗಾಂಜಾ ಗಿಡ, 30 ಲೀಟರ್ ಸೇಂದಿ ವಶಕ್ಕೆ ಪಡೆದಿದ್ದು, ಈ ಸಂಬಂಧ 1637 ಪ್ರಕರಣ ದಾಖಲಿಸಲಾಗಿದೆ. ಈ ಪೈಕಿ 210 ಗಂಭೀರ ಪ್ರಕರಣದಲ್ಲಿ ಹಲವರನ್ನು ಬಂಧಿಸಿದ್ದು, 172 ವೈನ್‌ಸ್ಟೋರ್‌ಗಳ, 1284 ಕಿರಾಣಿ ಅಂಗಡಿಗಳ ಮೇಲೆ ಪ್ರಕರಣ ದಾಖಲಿಸಲಾಗಿದೆ. ಜೊತೆಗೆ ಮದ್ಯ ಸಾಗಾಣಿಕೆಗೆ ಬಳಸಿದ್ದ 147 ಬೈಕ್‌ಗಳು, 1 ಆಟೋ ಹಾಗೂ ಐದು ಕಾರುಗಳನ್ನು ಸಹ ವಶಕ್ಕೆ ಪಡೆದಿದ್ದು, ಇದರ ಮೌಲ್ಯ 98,48,000 ಆಗಲಿದೆ ಎಂದು ವಿವರಿಸಿದರು.

ಪ್ರತಿ ತಿಂಗಳು ಜಿಲ್ಲೆಯ ಅಬಕಾರಿ ಇಲಾಖೆಯಿಂದ ಒಟ್ಟು 65 ರಿಂದ 67 ಕೋಟಿ ಆದಾಯ ಬರುತ್ತಿದ್ದು, ಚುನಾವಣೆ ಹಿನ್ನೆಲೆಯಲ್ಲಿ ಮೂರ್‍ನಾಲ್ಕು ದಿನ ಒಣ ದಿನವಾಗಿ ಘೋಷಣೆ ಮಾಡಿದ್ದರಿಂದ ಇಲಾಖೆಗೆ ಐದಾರು ಕೋಟಿ ರೂ. ನಷ್ಟವಾಗಿದೆ ಎಂದರು.

ಜಿಲ್ಲೆಯಲ್ಲಿ ನಕಲಿ ಮದ್ಯದ ಹಾವಳಿ ಇಲ್ಲ. ನಕಲಿ ಮದ್ಯ ತಡೆಗೆ ನಮ್ಮ ತಂಡ ಜಿಲ್ಲಾದ್ಯಂತ ಕಾರ್ಯಾಚರಣೆ ನಡೆಸುತ್ತಿದ್ದು, ಹಾಗೊಂದು ವೇಳೆ ನಕಲಿ ಮದ್ಯ ಕಂಡುಬಂದರೆ, ಬಾರ್ ಅಥವಾ ವೈನ್‌ಸ್ಟೋರ್ ಮಾಲೀಕರ ಮೇಲೆ ನಿರ್ದಾಕ್ಷಿಣ್ಯ ಕ್ರಮ ಕೈಗೊಳ್ಳಲಾಗುವುದು. ಕೆಲವೆಡೆ ದುಬಾರಿ ದರದ ಮದ್ಯಕ್ಕೆ ಕಡಿಮೆ ದರದ ಮದ್ಯ ಮಿಶ್ರಣದ ಬಗ್ಗೆ ಈ ಹಿಂದೆ ಆರೋಪಗಳು ಕೇಳಿ ಬಂದಿದ್ದವು. ಇದೀಗ ಆ ತರಹದ ಘಟನೆ ಯಾವುದು ಇಲ್ಲ. ಹಾಗೊಂದು ವೇಳೆ ನಡೆಯುತ್ತಿದ್ದರೆ ನಮಗೆ ದೂರು ಬಂದಲ್ಲಿ ಆ ಮದ್ಯಗಳನ್ನು ಲ್ಯಾಬ್‌ಗೆ ತಪಾಸಣೆಗೆ ಕಳುಹಿಸಿ, ಮಾರಾಟಗಾರರ ವಿರುದ್ಧ ಕ್ರಮ ಕೈಗೊಳ್ಳಲಾಗುವುದು ಎಂದರು.

ರಂಗ ಶಿಕ್ಷಣ ತರಬೇತಿಗೆ ಅರ್ಜಿ ಆಹ್ವಾನ

ಮಂಡ್ಯ, ಮೇ 20– ಮೈಸೂರಿನ ರಂಗಾಯಣದ ರಂಗ ಶಿಕ್ಷಣದ 10 ತಿಂಗಳ ಡಿಪ್ಲೊಮೊ ಕೋರ್ಸ್‌ಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿ ಸಲ್ಲಿಸಲು ಜೂ.5 ಕೊನೆ ದಿನ. ರಂಗ ತರಬೇತಿ ಕೋರ್ಸ್‌ಗೆ ಸೇರ ಬಯಸುವ ವಿದ್ಯಾರ್ಥಿಗಳು ರಂಗಭೂಮಿಯ ಪ್ರಾಥಮಿಕ ಅನುಭವ ಹೊಂದಿರಬೇಕು. ಕನಿಷ್ಠ ದ್ವಿತೀಯ ಪಿಯುಸಿ ಅಥವಾ ತತ್ಸಮಾನ ಪರೀಕ್ಷೆ ತೇರ್ಗಡೆ ಹೊಂದಿರಬೇಕು. ವಯೋಮಿತಿ ಅರ್ಜಿ ಸಲ್ಲಿಸಲು ನಿಗದಿಗೊಳಿಸಿದ ಕಡೆ ದಿನಾಂಕಕ್ಕೆ 18 ವರ್ಷ ತುಂಬಿದ ಮತ್ತು 28 ವರ್ಷಗಳು ತುಂಬಿರದ ಅಭ್ಯರ್ಥಿಗಳಾಗಿರಬೇಕು. ಆಯ್ಕೆಯಾದ ವಿದ್ಯಾರ್ಥಿಗಳಿಗೆ ನಿಯಮಾನುಸಾರ ರಂಗಾಯಣದಿಂದಲೇ ವಸತಿ ವ್ಯವಸ್ಥೆ ಕಲ್ಪಿಸಲಾಗುವುದು ಮತ್ತು ಮಾಹೆಯಾನ 5,000 ರೂ. ವಿದ್ಯಾರ್ಥಿ ವೇತನ ಪಾವತಿಸಲಾಗುವುದು. ಹೆಚ್ಚಿನ ವಿವರಕ್ಕಾಗಿ ದೂ:0821–2512639, 9448938661/ 9148827720 ಅನ್ನು ಸಂಪರ್ಕಿಸಬಹುದು ಎಂದು ರಂಗಾಯಣದ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಅವಧಿ ವಿಸ್ತರಣೆ

ಮಂಡ್ಯ, ಮೇ 20– ಕೆಆರ್.ಪೇಟೆ ಸರ್ಕಾರಿ ಪಾಲಿಟೆಕ್ನಿಕ್‌ನಲ್ಲಿ ಪ್ರಥಮ ವರ್ಷದ ಪ್ರವೇಶ ಪ್ರಕ್ರಿಯೆ ಆರಂಭಗೊಂಡಿದ್ದು, ಅರ್ಜಿ ಸಲ್ಲಿಕೆ ಅವಧಿಯನ್ನು ಮೇ 22ರ ಸಂಜೆ 5.30 ರವರೆಗೆ ವಿಸ್ತರಿಸಲಾಗಿದೆ. ಎಸ್‌ಎಸ್‌ಎಲ್‌ಸಿ ಪಾಸಾಗಿರುವ ಅರ್ಹ ಅಭ್ಯರ್ಥಿಗಳು ಅಗತ್ಯ ದಾಖಲಾತಿಗಳೊಂದಿಗೆ ಕೆ.ಆರ್.ಪೇಟೆ ಸರ್ಕಾರಿ ಪಾಲಿಟೆಕ್ನಿಕ್‌ಗೆ ಆಗಮಿಸಿ ಅರ್ಜಿ ಸಲ್ಲಿಸಬಹುದು ಎಂದು ಸರ್ಕಾರಿ ಪಾಲಿಟೆಕ್ನಿಕ್ ವಿದ್ಯಾಸಂಸ್ಥೆ ಪ್ರಾಂಶುಪಾಲರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ರವೀಂದ್ರ ಶ್ರೀಕಂಠಯ್ಯರಿಂದ ಆತ್ಮಾವಲೋಕನ ಸಭೆ

ಶ್ರೀರಂಗಪಟ್ಟಣ, ಮೇ 20– ಬಿಜೆಪಿ ದುರಾಡಳಿತ ಹಾಗೂ ಸಿದ್ದರಾಮಯ್ಯ ಮುಖ್ಯಮಂತ್ರಿ ಆಗುತ್ತಾರೆಂಬ ಕಾರಣದಿಂದಾಗಿ ನಾನು ಸೋಲು ಅನುಭವಿಸಬೇಕಾಯಿತು ಎಂದು ಮಾಜಿ ಶಾಸಕ ರವೀಂದ್ರ ಶ್ರೀಕಂಠಯ್ಯ ತಿಳಿಸಿದರು.



ಪಟ್ಟಣದ ಟಿಎಪಿಸಿಎಂಎಸ್ ಕಲ್ಯಾಣ ಮಂಟಪದಲ್ಲಿ ಜೆಡಿಎಸ್ ವತಿಯಿಂದ ಆಯೋಜಿಸಿದ್ದ ಕೃತಜ್ಞತಾ ಮತ್ತು ಆತ್ಮಾವಲೋಕನ ಸಭೆಯಲ್ಲಿ ಮಾತನಾಡಿದ ಅವರು, ಚುನಾವಣೆ ವೇಳೆ ಕ್ಷೇತ್ರದ ಮುಸ್ಲಿಂ ಹಾಗೂ ಕುರುಬ ಸಮುದಾಯ ಒಗ್ಗೂಡಿದ ಪರಿಣಾಮ ಜೆಡಿಎಸ್‌ಗೆ ಹಿನ್ನಡೆಯಾಯಿತು. ಆದರೂ ಶ್ರೀರಂಗಪಟ್ಟಣ ಕ್ಷೇತ್ರದ ಜನತೆ ಪ್ರಾದೇಶಿಕ ಪಕ್ಷ ಜೆಡಿಎಸ್ ಕೈ ಬಿಟ್ಟಿಲ್ಲ ಎಂದರು.

ಚುನಾವಣೆ ಬರುತ್ತದೆ ಹೋಗುತ್ತದೆ. ಆದರೆ ಪಕ್ಷದ ಕಾರ್ಯಕರ್ತರು ಧೃತಿಗೆಡಬಾರದು. ನನ್ನ ಅಧಿಕಾರವಧಿಯಲ್ಲಿ ಕ್ಷೇತ್ರದ ಅಭಿವೃದ್ಧಿಗೆ ಶ್ರಮಿಸಿದ್ದೇನೆ ಎಂದ ಅವರು ನೂತನ ಶಾಸಕರ ಒಳ್ಳೆಯ ಕೆಲಸಕ್ಕೆ ನಾವು ಕೂಡ ಸಾಥ್ ನೀಡುತ್ತೇವೆ. ಕೆಟ್ಟ ಕೆಲಸಕ್ಕೆ ಕೈ ಹಾಕಿದರೇ ನಾವು ಸುಮ್ಮನೆ ಕೂರುವುದಿಲ್ಲ. ಕ್ಷೇತ್ರದ ಜನರ ಪ್ರೀತಿ, ವಿಶ್ವಾಸಕ್ಕೆ ನಾನು ಅಭಾರಿಯಾಗಿದ್ದು, ಅವರ ಕಷ್ಟ ಸುಖಗಳಿಗೆ ಸ್ಪಂದಿಸುವ ಕೆಲಸ ಮಾಡುತ್ತೇನೆ ಎಂದರು.

ಕಾರ್ಯಕ್ರಮದಲ್ಲಿ ಜೆಡಿಎಸ್ ತಾಲೂಕು ಅಧ್ಯಕ್ಷ ಪೈಲ್ವಾನ್ ಮುಕುಂದ, ಯುವ ಘಟಕ ಅಧ್ಯಕ್ಷ ಸಂಜಯ್, ಕಾರ್ಯಾಧ್ಯಕ್ಷ ಶಿವಸ್ವಾಮಿ, ಪುರಸಭೆ ಸದಸ್ಯರಾದ ಎಸ್.ಪ್ರಕಾಶ್, ಶ್ರೀನಿವಾಸ್, ಲಿಂಗರಾಜು, ಕೃಷ್ಣಪ್ಪ, ನರಸಿಂಹೇಗೌಡ, ಎಸ್.ಟಿ ರಾಜು, ಶಿವು, ಮಾಜಿ ಸದಸ್ಯ ಸಾಯಿ ಕುಮಾರ್, ನಳಿನ ಸೇರಿದಂತೆ ಇನ್ನಿತರರಿದ್ದರು.

ಡಾ.ಬಿ.ಆರ್.ಅಂಬೇಡ್ಕರ್ ಅವರಿಗೆ ನಿಂದನೆ ಆರೋಪ

ಸಿಮ್ಸ್‌ನ ಡೀನ್ ಡಾ.ಜಿ.ಎಂ.ಸಂಜೀವ್ ವಜಾಕ್ಕೆ ದಲಿತ ಮುಖಂಡರ ಆಗ್ರಹ

ಚಾಮರಾಜನಗರ, ಮೇ 20– ಡಾ.ಬಿ.ಆರ್. ಅಂಬೇಡ್ಕರ್ ಅವರನ್ನು ನಿಂದನೆ ಮಾಡಿದ ಆರೋಪದಡಿ ಬಂಧನಕ್ಕೊಳಗಾಗಿದ್ದ ಚಾಮರಾಜನಗರ ಸಿಮ್ಸ್‌ನ ಡೀನ್ ಡಾ.ಜಿ.ಎಂ. ಸಂಜೀವ್‌ರನ್ನು ಹುದ್ದೆಯಿಂದ ವಜಾಗೊಳಿಸಬೇಕು ಎಂದು ದಲಿತ ಸಂಘಟನೆಯ ಮುಖಂಡರು ಆಗ್ರಹಿಸಿದರು.

ನಗರದಲ್ಲಿ ಶನಿವಾರ ತುರ್ತಾಗಿ ಸುದ್ದಿಗೋಷ್ಠಿ ನಡೆಸಿದ ದಲಿತ ಸಂಘಟನೆಗಳ ಮುಖಂಡರು ಘಟನೆಯ ಬಗ್ಗೆ ತೀವ್ರ ಖಂಡನೆ ವ್ಯಕ್ತಪಡಿಸಿದರು.

ಈ ವೇಳೆ ಬಿಎಸ್‌ಪಿ ರಾಜ್ಯ ಪ್ರಧಾನ ಕಾರ್ಯದರ್ಶಿ ಹ.ರಾ. ಮಹೇಶ್ ಮಾತನಾಡಿ, ಸಂವಿಧಾನ ಶಿಲ್ಪಿ ಅಂಬೇಡ್ಕರ್ ಅವರು ಬರೆದಿರುವ ಸಂವಿಧಾನದ ಕಾರಣಕ್ಕೆ ಸಂಜೀವ್ ಇಂದು ಡೀನ್ ಆಗಿದ್ದಾರೆ. ಹೀಗಿರುವಾಗ, ಅವರು ಅಂಬೇಡ್ಕರ್ ಅವರ ಭಾವಚಿತ್ರವನ್ನು ತೋರಿಸಿ ಅಶ್ಲೀಲವಾಗಿ ನಿಂದಿಸಿರುವುದು ಸರಿಯಲ್ಲ. ಕೂಡಲೇ ಅವರನ್ನು ಸೇವೆಯಿಂದ ವಜಾ ಮಾಡಬೇಕು ಎಂದು ಆಗ್ರಹಿಸಿದರು.

ಡಾ.ಸಂಜೀವ್ ಅವರು ಆಸ್ಪತ್ರೆಯ ಹೊರಗುತ್ತಿಗೆ ನೌಕರರಿಗೆ ಮೂರು ವರ್ಷಗಳಿಂದ ಮಾನಸಿಕ ಕಿರುಕುಳ ನೀಡುತ್ತಿದ್ದಾರೆ. ನೌಕರರಿಗೆ ಸರಿಯಾಗಿ ವೇತನ ಸಿಗುತ್ತಿಲ್ಲ. ಇದನ್ನು ಕೇಳಿದರೆ, ಅವರ ವಿರುದ್ಧವೇ ಕಿಡಿ ಕಾರುತ್ತಾರೆ. ಹೊರಗುತ್ತಿಗೆಯಲ್ಲಿ ನೇಮಕ ಮಾಡಿರುವ ಏಜೆನ್ಸಿಯೊಂದಿಗೆ ಶಾಮೀಲಾಗಿದ್ದಾರೆ ಎಂದು ಆಪಾದಿಸಿದರು.

ಪೊಲೀಸರ ಅಸಹಕಾರ: ಈ ಪ್ರಕರಣದಲ್ಲಿ ಪೊಲೀಸರು ನಮಗೆ ಅಸಹಕಾರ ನೀಡಿದ್ದಾರೆ. ಅನಗತ್ಯವಾಗಿ ವಿಳಂಬ ಮಾಡಿದ್ದಾರೆ. ಪೊಲೀಸರು ಡೀನ್ ಅವರನ್ನು ಬಿಟ್ಟುಬಿಡುವುದರಲ್ಲೇ ಇದ್ದರು. ಪ್ರಭಾವಿಗಳ ಒತ್ತಡಕ್ಕೆ ಅವರು ಮಣಿದಿದ್ದಾರೆ ಎಂದು ದೂರಿದರು.

ಕೆಳಹಂತದ ನ್ಯಾಯಾಲಯದಲ್ಲಿ ನಮಗೆ ನ್ಯಾಯ ಸಿಕ್ಕಿಲ್ಲ ಹೈಕೋರ್ಟ್, ಸುಪ್ರೀಂ ಕೋರ್ಟ್‌ವರೆಗೂ ನಾವು ಹೋರಾಟ ಮಾಡುತ್ತೇವೆ ಎಂದರು. ಸುದ್ದಿಗೋಷ್ಠಿಯಲ್ಲಿ ಬಿಎಸ್‌ಪಿ ಜಿಲ್ಲಾಧ್ಯಕ್ಷ ಎನ್.ನಾಗಯ್ಯ, ವಕೀಲ ಪ್ರಸನ್ನ ಕುಮಾರ್, ಮುಖಂಡರಾದ ಅಯ್ಯನಪುರ ಶಿವಕುಮಾರ್, ಸಿ.ಎಂ. ಕೃಷ್ಣಮೂರ್ತಿ, ಗೋವಿಂದರಾಜು, ಗಣೇಶ್‌ಪ್ರಸಾದ್, ಬ್ಯಾಡಮೂಡ್ಲು ಬಸವಣ್ಣ ಇದ್ದರು.

ಡಾ.ಜಿ.ಎಂ. ಸಂಜೀವ್‌ಗೆ ಜಾಮೀನು

ಚಾಮರಾಜನಗರ: ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಅವರನ್ನು ಅವಹೇಳನ ಮಾಡಿರುವ ಆರೋಪದಲ್ಲಿ ಬಂಧಿತರಾಗಿದ್ದ ಚಾಮರಾಜನಗರ ವೈದ್ಯಕೀಯ ವಿಜ್ಞಾನ ಸಂಸ್ಥೆಯ (ಸಿಮ್ಸ್) ಡೀನ್ ಡಾ.ಜಿ.ಎಂ. ಸಂಜೀವ್ ಅವರಿಗೆ ಶನಿವಾರ ಜಾಮೀನು ಸಿಕ್ಕಿದೆ. ಶುಕ್ರವಾರ ಸಂಜೆಯೇ ಪೊಲೀಸರು ಅವರನ್ನು ವಶಕ್ಕೆ ಪಡೆದಿದ್ದರು. ತಡರಾತ್ರಿ ಅವರನ್ನು ಬಂಧಿಸಿದ್ದರು. ಶನಿವಾರ ಬೆಳಗ್ಗೆ ವೈದ್ಯಕೀಯ ತಪಾಸಣೆ ಮಾಡಿದ ನಂತರ ಅವರನ್ನು ಜಿಲ್ಲಾ ಪ್ರಧಾನ ಮತ್ತು ಸೆಷನ್ಸ್ ನ್ಯಾಯಾಧೀಶರಾದ ಬಿ.ಎಸ್. ಭಾರತಿ ಅವರ ನಿವಾಸಕ್ಕೆ ಕರೆದೊಯ್ದು ಹಾಜರುಪಡಿಸಿದರು.

ನ್ಯಾಯಾಧೀಶರು ಅವರಿಗೆ ಮಧ್ಯಂತರ ಜಾಮೀನು ಮಂಜೂರು ಮಾಡಿ, ಮಧ್ಯಾಹ್ನ 3 ಗಂಟೆಗೆ ನ್ಯಾಯಾಲಯದಲ್ಲಿ ಜಾಮೀನು ಅರ್ಜಿ ವಿಚಾರಣೆ ಕೈಗೆತ್ತಿಕೊಳ್ಳುವುದಾಗಿ ತಿಳಿಸಿದರು. ಅದರಂತೆ ನ್ಯಾಯಾಲಯದಲ್ಲಿ ವಿಚಾರಣೆ ನಡೆದು, ಒಂದು ಲಕ್ಷ ಭದ್ರತಾ ಠೇವಣಿ ಮತ್ತು ಇಬ್ಬರ ಜಾಮೀನಿನ ಷರತ್ತಿನ ಮೇಲೆ ನ್ಯಾಯಾಧೀಶರು ಜಾಮೀನು ಮಂಜೂರು ಮಾಡಿದರು.

ಇಂದು ವಿವಿಧೆಡೆ ವಿದ್ಯುತ್ ವ್ಯತ್ಯಯ

ಕೊಳ್ಳೇಗಾಲ, ಮೇ 20– ದೊಡ್ಡಿಂದುವಾಡಿ, ಕೊತ್ತನೂರುನಿಂದ ಹೊರಹೊಮ್ಮುವ ಫೀಡರ್‌ಗಳಲ್ಲಿ ತ್ರೈಮಾಸಿಕ ದುರಸ್ತಿ ಕಾರ್ಯವನ್ನು ಇಲಾಖೆ ಹಮ್ಮಿಕೊಂಡಿರುವ ಹಿನ್ನೆಲೆಯಲ್ಲಿ ಭಾನುವಾರ (ಮೇ 21) ಬೆಳಗ್ಗೆ 10 ರಿಂದ ಸಂಜೆ 6 ಗಂಟೆಯವರೆಗೆ ದೊಡ್ಡಿಂದುವಾಡಿ, ತೆಳ್ಳನೂರು, ಕೊತ್ತನೂರು, ಪ್ರಕಾಶಪಾಳ್ಯ, ಚಿಕ್ಕಲ್ಲೂರು, ಸಿಂಗನಲ್ಲೂರು, ಕಾಮಗೆರೆ, ಬೂದಬಾಳು, ಕೊತ್ತನೂರು, ರಾಚಪ್ಪಾಜಿನಗರ ಹಾಗೂ ಸುತ್ತಮುತ್ತಲ ಗ್ರಾಮಗಳಲ್ಲಿ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದ್ದು, ಸಾರ್ವಜನಿಕರು ಎಂದಿನಂತೆ ನಿಗಮದ ಜೊತೆ ಸಹಕರಿಸಬೇಕೆಂದು ಚೆಸ್ಕಾಂ ಸಹಾಯಕ ಎಕ್ಸಿಕ್ಯೂಟಿವ್ ಎಂಜಿನಿಯರ್ ತಮ್ಮ ಪ್ರಕಟಣೆಯಲ್ಲಿ ಕೋರಿದ್ದಾರೆ.

ಸ್ವಚ್ಛತೆ ಬಗ್ಗೆ ಹೆಚ್ಚಿನ ಜಾಗೃತಿ ಅಗತ್ಯ



ಚಾಮರಾಜನಗರ, ಮೇ 20– ಸ್ವಚ್ಛತೆಗೆ ಹೆಚ್ಚು ಒತ್ತು ನೀಡಬೇಕಿದ್ದು, ಸಾರ್ವಜನಿಕರಿಗೆ ಈ ಬಗ್ಗೆ ಹೆಚ್ಚಿನ ಜಾಗೃತಿ ಅಗತ್ಯವಾಗಿದೆ ಎಂದು ಜಿಲ್ಲಾಧಿಕಾರಿ ಡಿ. ಎಸ್. ರಮೇಶ್ ಅವರು ತಿಳಿಸಿದರು.

ಚಾಮರಾಜನಗರ ನಗರಸಭಾ ಕಚೇರಿ ಆವರಣದಲ್ಲಿ ಸ್ವಚ್ಛ ಭಾರತ್ ಮಿಷನ್ 2.0 ಯೋಜನೆಯಡಿ ನನ್ನ ಜೀವನ ನನ್ನ ಸ್ವಚ್ಛ ನಗರ ಯೋಜನೆ ಕಾರ್ಯಕ್ರಮದ ಅಂಗವಾಗಿ ತ್ಯಾಜ್ಯ ವಸ್ತುಗಳ ಸ್ವೀಕಾರ ಹಾಗೂ ಪ್ರೋತ್ಸಾಹ ವಸ್ತುಗಳ ವಿತರಣಾ ಕೇಂದ್ರಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ನಮ್ಮ ಸುತ್ತಮುತ್ತಲ ಪರಿಸರದ ಬಗ್ಗೆ ಕಾಳಜಿ ವಹಿಸಬೇಕು. ಮನೆಯ ಒಳಗೆ ಹಾಗೂ ಸುತ್ತಮುತ್ತ ಸ್ವಚ್ಛತೆಯಿಂದ ಇರುವಂತೆ ನೋಡಿಕೊಳ್ಳಬೇಕು. ಸಾರ್ವಜನಿಕರು ನೈರ್ಮಲ್ಯದ ಕಡೆ ಹೆಚ್ಚು ಒಲವು ತೋರಬೇಕು. ಸ್ವಚ್ಛತೆಗೆ ಸಂಬಂಧಿಸಿದ ಕಾರ್ಯಕ್ರಮಕ್ಕೆ ಹೆಚ್ಚಿನ ಸಂಖ್ಯೆಯಲ್ಲಿ ಸಾರ್ವಜನಿಕರು ಸ್ಪಂದಿಸಿ ಪ್ರೋತ್ಸಾಹಿಸಿ ಯಶಸ್ವಿಗೊಳಿಸಬೇಕು ಎಂದರು.

ನಗರದಲ್ಲಿ ಪುನರ್ ಬಳಕೆಯ ತ್ಯಾಜ್ಯ ವಸ್ತುಗಳನ್ನ ಸ್ವೀಕರಿಸಿ ಅದರ ಬದಲು ಪ್ರೋತ್ಸಾಹದಾಯಕವಾಗಿ ವಿವಿಧ ವಸ್ತುಗಳನ್ನು ನೀಡುವ ಐದು ಆರ್.ಆರ್.ಆರ್ ಕೇಂದ್ರಗಳನ್ನು ತೆರೆಯಲಾಗಿದೆ. ಮನೆಯಲ್ಲಿ ಉಪಯೋಗಕ್ಕೆ ಬಾರದ ಹಳೆಯ ವಸ್ತುಗಳು, ಪ್ಲಾಸ್ಟಿಕ್ ಚೀಲ, ಎಲೆಕ್ಟ್ರಾನಿಕ್ ವಸ್ತುಗಳು, ಮರು ಬಳಕೆ ಮಾಡಬಹುದಾದ ವಸ್ತುಗಳನ್ನು ಆರ್.ಆರ್.ಆರ್ ಕೇಂದ್ರಗಳಲ್ಲಿ ನೀಡಿ ಪ್ರತಿಯಾಗಿ ಪರಿಸರ ಸ್ನೇಹಿ ಲೇಖನ ಸಾಮಗ್ರಿಗಳು, ಪುಸ್ತಕಗಳು ಮತ್ತು ಪರಿಸರ ಸಂಬಂಧಿತ ಇತರೆ ವಸ್ತುಗಳನ್ನು ಪಡೆಯಬಹುದು ಎಂದು ಜಿಲ್ಲಾಧಿಕಾರಿ ರಮೇಶ್ ತಿಳಿಸಿದರು.

ಬಳಿಕ ನನ್ನ ಲೈಫ್, ನನ್ನ ಸ್ವಚ್ಛ ನಗರ ಸಹಿ ಸಂಗ್ರಹಣೆ ಅಭಿಯಾನದಲ್ಲಿ ಸಹಿ ಮಾಡುವ ಮೂಲಕ ಅಭಿಯಾನ ಉದ್ಘಾಟಿಸಿದರು. ಸೆಲ್ಫಿ ಫ್ರೇಮ್‌ನಲ್ಲಿ ಫೋಟೋ ತೆಗೆಸಿಕೊಳ್ಳುವ ಮೂಲಕ ಕಾರ್ಯಕ್ರಮಕ್ಕೆ ಮೆರಗು ನೀಡಿದರು. ನಗರಸಭಾ ಸದಸ್ಯರಾದ ಮಹೇಶ್, ಅಬ್ರಾರ್ ಅಹಮದ್, ಖಲೀಲ್, ಮಮತಾ, ಗಾಯತ್ರಿ, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕಿ ಎಂ.ವಿ. ಸುಧಾ, ನಗರಸಭೆ ಪೌರಾಯುಕ್ತ ಎಸ್.ವಿ. ರಾಮ್‌ದಾಸ್, ಪರಿಸರ ಅಧಿಕಾರಿ ಗಿರಿಜಮ್ಮ, ಕಂದಾಯ ಅಧಿಕಾರಿ ಶರವಣ, ಹಿರಿಯ ಆರೋಗ್ಯ ನಿರೀಕ್ಷಕರಾದ ಪುಷ್ಪಾ, ಕಿರಿಯ ಆರೋಗ್ಯ ನಿರೀಕ್ಷಕರಾದ ಸುಷ್ಮಾ, ಮಂಜು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

ಇಂದು ಚಗ್ಗಿ ಕವನ ಸಂಕಲನ ಲೋಕಾರ್ಪಣೆ

ಕೊಳ್ಳೇಗಾಲ, ಮೇ 20– ಹೊಸ ತಲೆಮಾರಿನ ಯುವ ಬರಹಗಾರರು, ಸಾಹಿತಿಗಳಲ್ಲಿ ಪ್ರಚಾರ ಬಯಸದೆ ಸದ್ದಿಲ್ಲದೆ ಸಾಹಿತ್ಯ ಕೃಷಿಯಲ್ಲಿ ತೊಡಗಿಸಿಕೊಳ್ಳುವುದರ ಜೊತೆಗೆ ಮುಂಚೂಣಿಯಲ್ಲಿ ಕೇಳಿ ಬರುವ ಹಲವು ಹೆಸರುಗಳ ಪೈಕಿ ಡಾ. ದಿಲೀಪ್ ಎನ್ಕೆ ಅವರು ಪ್ರಮುಖ ಸಾಲಿನಲ್ಲಿ ನಿಲ್ಲುತ್ತಾರೆ. ದಿಲೀಪ್ ಅವರು ರಚಿಸಿರುವ ಮೂರನೇ ಕೃತಿ 'ಚಗ್ಗಿ' ಭಾನುವಾರ ಸಂಜೆ ಲೋಕಾರ್ಪಣೆಗೊಳ್ಳಲಿದ್ದು, ಹಿರಿಯ ಸಾಹಿತಿಗಳು, ಚಿಂತಕರೂ ಕೇಂದ್ರ ಸಾಹಿತ್ಯ ಅಕಾಡೆಮಿ ಪುರಸ್ಕೃತರೂ ಆದ ಮುಡ್ನಾಕೂಡು ಚಿನ್ನಸ್ವಾಮಿ ಲೋಕಾರ್ಪಣೆಗೊಳಿಸಲಿದ್ದಾರೆ. ಈಗಾಗಲೇ ಅವರ ಕನ್ನಡ ದಲಿತ ಸಾಹಿತ್ಯ, ಅಕ್ಷರಸ್ಥ ದಲಿತರ ತಲ್ಲಣಗಳು ಮಹಾ ಪ್ರಬಂಧಕ್ಕೆ ಪಿಎಚ್.ಡಿಯ ಗೌರವ ಸಂದಿದೆ. ವೃತ್ತಿಯಲ್ಲಿ ಅತಿಥಿ ಉಪನ್ಯಾಸಕರಾಗಿರುವ ದಿಲೀಪ್ ಅವರು ಪ್ರವೃತ್ತಿಯಲ್ಲಿ ಮುಂಚೂಣಿ ಬರಹಗಾರರ ಸಾಲಿನಲ್ಲಿ ನಿಲ್ಲುತ್ತಾರೆ. ಈಗಾಗಲೇ ಋತುಮಾನಕ್ಕಷ್ಟೆ ಪ್ರೀತಿ (ಕವನ ಸಂಕಲನ), ಬಲಿಷ್ಠ(ಕಥಾ ಸಂಕಲನ) ಹೊರತಂದಿದ್ದು ಭಾನುವಾರ ಮಾರಿ ಕುಣಿತದ ಕಥಾ ಹಂದರವುಳ್ಳ ಮೂರನೇ ಕೃತಿ ಚಗ್ಗಿ ಬಿಡುಗಡೆಗೆ ಸಜ್ಜಾಗಿದ್ದು, ಮುಡ್ನಾಕೂಡು ಚಿನ್ನಸ್ವಾಮಿ ಬಿಡುಗಡೆಗೊಳಿಸುವರು. ಮೈಸೂರು ವಿಶ್ವ ವಿದ್ಯಾನಿಲಯದ ನಿವೃತ್ತ ಪ್ರಾಧ್ಯಾಪಕರಾದ ಪ್ರೊ.ಪ್ರೀತಿ ಶುಭಚಂದ್ರ ಅವರು ಕೃತಿ ಕುರಿತು ವಿಚಾರ ಮಂಡಿಸುವರು.

ನಿಧನ



ಗುರುಮಲ್ಲಪ್ಪ

ಚಾಮರಾಜನಗರ, ಮೇ 20– ಮಲೆಯೂರು ಗ್ರಾಪಂ ಮಾಜಿ ಉಪಾಧ್ಯಕ್ಷ ತಾಲೂಕಿನ ಕೇತಹಳ್ಳಿ ಗ್ರಾಮದ ನಿವಾಸಿ ಗುರುಮಲ್ಲಪ್ಪ(71) ಅನಾರೋಗ್ಯದಿಂದ ನಿಧನರಾದರು. ಮೃತರು ಪತ್ನಿ, ಓರ್ವ ಪುತ್ರ, ಬಂಧು–ಬಳಗವನ್ನು ಅಗಲಿದ್ದಾರೆ. ಮೃತರ ಅಂತ್ಯಕ್ರಿಯೆ ಗ್ರಾಮದ ತೋಟದ ಜಮೀನಿನಲ್ಲಿ ಶನಿವಾರ ಮಧ್ಯಾಹ್ನ ನೆರವೇರಿತು.

ಆಲೂರು ಹೊಮ್ಮ ಗ್ರಾಮದ ತುಳಸಮ್ಮ



ಚಾಮರಾಜನಗರ, ಮೇ 20– ತಾಲೂಕಿನ ಆಲೂರು ಹೊಮ್ಮ ಗ್ರಾಮದ ನಾಯಕ ಜನಾಂಗದ ಮಾಜಿ ಯಜಮಾನರಾದ ಮಹದೇವನಾಯಕರ ಧರ್ಮಪತ್ನಿ ತುಳಸಮ್ಮ(75) ಅವರು ಶುಕ್ರವಾರ ರಾತ್ರಿ ಹೃದಯಾಘಾತದಿಂದ ನಿಧನರಾದರು.

ಮೃತರು ಪುತ್ರರಾದ ರಾಮನಾಯಕ, ಕೃಷ್ಣನಾಯಕ, ಈರ್ವರು ಪುತ್ರಿಯರು, ಮೊಮ್ಮಕ್ಕಳು ಹಾಗೂ ಅಪಾರ ಬಂಧುಬಳಗವನ್ನು ಅಗಲಿದ್ದಾರೆ. ಮೃತರ ತೋಟದಲ್ಲಿ ಶನಿವಾರ ಮಧ್ಯಾಹ್ನ ಅಂತ್ಯಕ್ರಿಯೆ ನೆರವೇರಿತು.


75 ಸ್ವಾತಂತ್ರ್ಯದ ಅಮೃತ ಮಹೋತ್ಸವ
ಕರ್ನಾಟಕ ಸರ್ಕಾರ
G20 भारत 2023 INDIA
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ಗೃಹಲಕ್ಷ್ಮಿ
ಪ್ರತಿ ಮನೆಯೊಡತಿಗೆ ಪ್ರತಿ ತಿಂಗಳು
₹2000
ಗೃಹ ಜ್ಯೋತಿ
ನಿಮ್ಮ ಮನೆಗೆ 200
ಯೂನಿಟ್ ವಿದ್ಯುತ್ ಪ್ರತಿ ತಿಂಗಳು ಉಚಿತ
ಅನ್ನಭಾಗ್ಯ
10kg
ಬಡವರಿಗೆ ಪ್ರತಿ ತಿಂಗಳು ತಲಾ 10kg ಅಕ್ಕಿ ಉಚಿತ
ಯುವ ನಿಧಿ
ಪ್ರತಿ ತಿಂಗಳು ನಿರುದ್ಯೋಗ ಭತ್ಯೆ
₹3000 ಪದವೀಧರರಿಗೆ
₹1500 ಡಿಪ್ಲೋಮಾ ಪದವೀಧರರಿಗೆ
ಉಚಿತ ಪ್ರಯಾಣ ನಮ್ಮ ಪ್ರಮಾಣ
ಮಹಿಳೆಯರಿಗೆ ಬಸ್ ಸಂಚಾರ ಉಚಿತ
ಸನ್ಮಾನ್ಯ ಮುಖ್ಯಮಂತ್ರಿ ಶ್ರೀ ಸಿದ್ದರಾಮಯ್ಯ ಅವರು ಅಧಿಕಾರ ಸ್ವೀಕರಿಸಿ ಮೊದಲ ದಿನವೇ ಘೋಷಿಸಿದ್ದ
'ಪಂಚ' ಖಾತ್ರಿ ಯೋಜನೆಗಳನ್ನು ಶೀಘ್ರವೇ ಜಾರಿಗೆ ತರುವುದಾಗಿ ಪ್ರಕಟಿಸಿದ್ದಾರೆ. ಈ ಮೂಲಕ ಮತ್ತೊಮ್ಮೆ
ತಮ್ಮದು 'ನುಡಿದಂತೆ ನಡೆವ' ಬಹುಮತದ ಜನಪರ ಸರ್ಕಾರ ಎನ್ನುವುದನ್ನು ದೃಢ ಪಡಿಸಿದ್ದಾರೆ.
ನಾಡಿನ ಸರ್ವ ಜನರ ಶ್ರೇಯೋಭಿವೃದ್ಧಿಗಾಗಿ ರೂಪಿಸಿದ್ದ ಗ್ಯಾರಂಟಿ ಯೋಜನೆಗಳನ್ನು ಅನುಷ್ಠಾನಕ್ಕೆ
ತರುತ್ತಿರುವ ಸ್ಥಿರ ಸರ್ಕಾರ ಎಂಬ ಹೆಮ್ಮೆಗೆ ಪಾತ್ರವಾಗಿದೆ.
5 ನುಡಿದಂತೆ ನಡೆದಿದ್ದೇವೆ
ಈಡೇರಿದ ಐದು ಭರವಸೆ
ಸಾರ್ವಜನಿಕ ಆಸ್ತಿ ಪಾಸ್ತಿ ರಕ್ಷಿಸುವುದು ಮತ್ತು ಹಿಂಸೆಯನ್ನು ತ್ಯಜಿಸುವುದು
ಪ್ರತಿಯೊಬ್ಬ ಭಾರತೀಯನ ಸಂವಿಧಾನ ಬದ್ಧ ಮೂಲಭೂತ ಕರ್ತವ್ಯ.
ಕರ್ನಾಟಕ ವಾರ್ತೆ
karnatakainformation.gov.in

ಕಾಂಗ್ರೆಸ್ ಸರ್ಕಾರದ ಮೊದಲ ಸಚಿವ ಸಂಪುಟ ಸಭೆಯಲ್ಲಿ ಜನರ ನಿರೀಕ್ಷೆ ಹುಸಿ

ಬೆಂಗಳೂರು, ಮೇ 20– ಕಾಂಗ್ರೆಸ್ ಸರ್ಕಾರದ ಮೊದಲ ಸಚಿವ ಸಂಪುಟ ಸಭೆಯಲ್ಲಿ ಜನರ ನಿರೀಕ್ಷೆ ಹುಸಿಯಾಗಿದೆ ಎಂದು ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಹೇಳಿದ್ದಾರೆ.




ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಾಂಗ್ರೆಸ್ ನೀಡಿರುವ ಐದು ಗ್ಯಾರಂಟಿಗಳ ಬಗ್ಗೆ ಜನರು ನಿರೀಕ್ಷೆ ಇಟ್ಟುಕೊಂಡಿದ್ದರು. ಇವುಗಳ ಬಗ್ಗೆ ಮುಖ್ಯಮಂತ್ರಿ ಸರಿಯಾಗಿ ಸ್ಪಷ್ಟನೆ ನೀಡಿಲ್ಲ, ಯಾವಾಗ ಜಾರಿಯಾಗುತ್ತದೆ ಎಂಬುದರ ಬಗ್ಗೆ ಹೇಳಿಲ್ಲ.

ನನ್ನ ಅವಧಿಯಲ್ಲಿ ರಾಜ್ಯ ಸರ್ಕಾರದ ಆದಾಯ ಹೆಚ್ಚಾಗಿತ್ತು. ಮನಸ್ಸು ಮಾಡಿದರೆ ನಾಳೆಯೇ ಮನೆಯ ಯಜಮಾನಿಯ ಖಾತೆಗೆ 2 ಸಾವಿರ ರೂ. ಹಾಕಬಹುದು. ಗ್ಯಾರಂಟಿಗಳನ್ನು ಜಾರಿ ಮಾಡೇ ಮಾಡ್ತೀವಿ ಅಂತಾ ಹೇಳುತ್ತಿದ್ದಾರೆ. ಸುಳ್ಳು ಹೇಳಿ ಜನರನ್ನು ಯಾಮಾರಿಸಲು ಆಗದು, ಇನ್ನೊಂದು ಸಂಪುಟ ಸಭೆಯವರೆಗೂ ಕಾಯೋಣ, ಕಾಂಗ್ರೆಸ್ ಜನರಿಗೆ ನೀಡಿರುವ ಎಲ್ಲಾ ಭರವಸೆ ಈಡೇರಿಸಲಿ. ಗ್ಯಾರಂಟಿ ಘೋಷಣೆಯಾಗಿಯೇ ಉಳಿಯಲಿದೆ. ಬಿಜೆಪಿ ಸರ್ಕಾರದ ಅವಧಿಯಲ್ಲಿ 3 ಲಕ್ಷ ಕೋಟಿ ರೂ. ಸಾಲ ಮಾಡಲಾಗಿದೆ ಎಂಬ ಸಿದ್ದರಾಮಯ್ಯ ಅವರ ಆರೋಪ ಕುರಿತು ಪ್ರತಿಕ್ರಿಯಿಸಿದ ಬೊಮ್ಮಾಯಿ, ಇದಕ್ಕೆ ಅಧಿವೇಶನದಲ್ಲಿ ಉತ್ತರ ನೀಡುತ್ತೇವೆ. ಕೋವಿಡ್‌ನಿಂದಾಗಿ ರಾಜ್ಯದಲ್ಲಿ ಈ ವರ್ಷ ಸಾಲ ಹೆಚ್ಚಾಗಿದೆ ಎಂದು ತಿಳಿಸಿದರು.

ಸರ್ಕಾರ ಕೈಗೊಳ್ಳುವ ಪ್ರತಿಯೊಂದು ಕ್ರಮಕ್ಕೂ ಜೆಡಿಎಸ್ ಪರಿಪೂರ್ಣ ಬೆಂಬಲ


ಬೆಂಗಳೂರು, ಮೇ 20– ರಾಜ್ಯದಲ್ಲಿ ಹೊಸದಾಗಿ ಅಸ್ತಿತ್ವಕ್ಕೆ ಬಂದಿರುವ ಸರ್ಕಾರಕ್ಕೆ ಜೆಡಿಎಸ್ ನಾಯಕ ಹೆಚ್.ಡಿ.ಕುಮಾರಸ್ವಾಮಿ ಶುಭಾಶಯ ಕೋರಿದ್ದಾರೆ.



ಈ ಕುರಿತು ಟ್ವೀಟ್ ಮಾಡಿರುವ ಕುಮಾರಸ್ವಾಮಿ, ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಹಾಗೂ ಅವರ ಸಂಪುಟ ಸಹೋದ್ಯೋಗಿಗಳಿಗೆ ಶುಭ ಹಾರೈಸಿದ್ದಾರೆ. ರಾಜ್ಯದ ಜನತೆಗೆ ಅರ್ಪಣಾ ಮನೋಭಾವದಿಂದ ಅವರೆಲ್ಲರೂ ಸೇವೆ ಮಾಡಲಿ. ಕನ್ನಡನಾಡಿನ ಜನಹಿತಕ್ಕಾಗಿ ಕಾಂಗ್ರೆಸ್ ಸರಕಾರ ಕೈಗೊಳ್ಳುವ ಪ್ರತಿಯೊಂದು ಕ್ರಮಕ್ಕೂ ಜೆಡಿಎಸ್ ಪಕ್ಷ ಪರಿಪೂರ್ಣ ಬೆಂಬಲ ನೀಡಲಿದೆ ಎಂದು ತಿಳಿಸಿದ್ದಾರೆ.

ಹಳೆ ದ್ವೇಷಕ್ಕಾಗಿ ಒಂಟಿಕೊಪ್ಪಲು ರೌಡಿಶೀಟರ್ ಚಂದ್ರು ಹತ್ಯೆ

ಏಳು ಮಂದಿ ಸೆರೆ; ಇನ್ನು ನಾಲ್ವರಿಗಾಗಿ ಶೋಧ



ಮೈಸೂರು, ಮೇ 20(ಆರ್‌ಕೆ)–ಮೈಸೂರಿನ ಒಂಟಿಕೊಪ್ಪಲಿನಲ್ಲಿ ಗುರುವಾರ ಸಂಜೆ ರೌಡಿ ಶೀಟರ್ ಚಂದ್ರು ಮೇಲೆ ಮಾರಕಾಸ್ತ್ರಗಳಿಂದ ದಾಳಿ ನಡೆಸಿ, ಹತ್ಯೆಗೈದು ತಲೆಮರೆಸಿಕೊಂಡಿದ್ದವರಲ್ಲಿ ಏಳು ಮಂದಿಯನ್ನು ಇಂದು ಮುಂಜಾನೆ ಬಂಧಿಸಲಾಗಿದೆ.

ಮೈಸೂರಿನ ಕುವೆಂಪುನಗರದ ನಿಮಿಷಾಂಬ ಬಡಾವಣೆ 7ನೇ ಕ್ರಾಸ್ ನಿವಾಸಿ ಎಸ್.ರಮೇಶ್ ಅಲಿಯಾಸ್ ಕಳಿಂಗ ಅವರ ಮಗ ಆರ್.ಯಶವಂತ್ ಅಲಿಯಾಸ್ ಖರ್ಜೂರ(26), ಚಾಮರಾಜನಗರ ತಾಲೂಕು ಕಡುವಿನ ಕಟ್ಟೆ ಹುಂಡಿ ಗ್ರಾಮದ ನಾಗನಾಥ ಅವರ ಮಗ ಎನ್.ಮಹೇಶ್(23), ಮೈಸೂರಿನ ವಿನಾಯಕನಗರ 5ನೇ ಮೇನ್, 5ನೇ ಕ್ರಾಸ್ ನಿವಾಸಿ ರಮೇಶ್ ಅವರ ಮಗ ಆರ್.ಪ್ರೀತಂ ಗೌಡ ಅಲಿಯಾಸ್ ಹಾಲಪ್ಪ(25), ಕೆ.ಜಿ.ಕೊಪ್ಪಲು 7ನೇ ಕ್ರಾಸ್ ನಿವಾಸಿ ನಾಗರಾಜು ಅವರ ಮಗ ಎನ್.ಸುದೀಪ್(22), 3ನೇ ಕ್ರಾಸ್ ನಿವಾಸಿ ಸ್ವಾಮೀಗೌಡರ ಮಗ ರಾಘವೇಂದ್ರ(21), ವಿನಾಯಕನಗರ 7ನೇ ಮೇನ್ ನಿವಾಸಿ ಶಂಕರ್ ಅವರ ಮಗ ಪ್ರಶಾಂತ್ (21) ಹಾಗೂ ಕುವೆಂಪುನಗರ 3ನೇ ಹಂತದ ನಿವಾಸಿ ನರಸಿಂಹಮೂರ್ತಿ ಅವರ ಮಗ ಅರವಿಂದ ಸಾಗರ(26) ಬಂಧಿತ ಕೊಲೆ ಆರೋಪಿಗಳು.

ಪ್ರಕರಣದಲ್ಲಿ ಭಾಗಿಯಾಗಿ ತಲೆಮರೆಸಿಕೊಂಡಿರುವ ಇನ್ನೂ ನಾಲ್ಕು ಮಂದಿಗೆ ಪೊಲೀಸರು ತೀವ್ರ ಶೋಧ ನಡೆಸುತ್ತಿದ್ದಾರೆ. ಮೇ 18ರಂದು ಸಂಜೆ ಸುಮಾರು 5 ಗಂಟೆ ವೇಳೆ ಒಂಟಿಕೊಪ್ಪಲಿನ ಕಾಳಿದಾಸ ರಸ್ತೆಯಲ್ಲಿರುವ ಟೈಲರ್ ಶಾಪ್ ಬಳಿ ಕುಳಿತಿದ್ದ ಚಂದ್ರು ಮೇಲೆ ಮೂರು ಸ್ಕೂಟರ್‌ಗಳಲ್ಲಿ ಬಂದ 9 ಮಂದಿ ಮಚ್ಚು, ಲಾಂಗ್‌ಗಳಿಂದ ದಾಳಿ ನಡೆಸಿ, ಮನಸ್ಸೋ ಇಚ್ಛೆ ಕೊಚ್ಚಿ ಕೊಲೆಗೈದು ಪರಾರಿಯಾಗಿದ್ದರು. ಮತ್ತೊಂದು ಬೈಕಿನಲ್ಲಿದ್ದ ಇಬ್ಬರು ಚಂದ್ರು ಬಗ್ಗೆ ಮಾಹಿತಿ ನೀಡಿ, ಕೊಲೆಗೆ ಸಹಕರಿಸಿದ್ದರು.

ಪ್ರಕರಣ ದಾಖಲಿಸಿಕೊಂಡಿದ್ದ ವಿವಿ ಪುರಂ ಠಾಣೆ ಪೊಲೀಸರು ತನಿಖೆ ಕೈಗೊಂಡಿದ್ದರು. ಆರೋಪಿಗಳ ಪತ್ತೆಗಾಗಿ ರಚಿಸಿದ್ದ ಎನ್.ಆರ್. ಉಪ ವಿಭಾಗದ ಎಸಿಪಿ ಸಿ.ಕೆ.ಅಶ್ವತ್ಥನಾರಾಯಣ, ದೇವರಾಜ ಉಪ ವಿಭಾಗದ ಎಸಿಪಿ ಶಾಂತಮಲ್ಲಪ್ಪ, ಸಿಸಿಬಿ ಘಟಕದ ಎಸಿಪಿ ಸಂದೇಶ್‌ಕುಮಾರ್ ಹಾಗೂ ಮಂಡಿ ಠಾಣೆ ಇನ್ಸ್‌ಪೆಕ್ಟರ್ ಯೋಗೇಶ್ ಅವರನ್ನೊಳಗೊಂಡ ತನಿಖಾ ತಂಡದ ಅಧಿಕಾರಿಗಳು ಹಾಗೂ ಸಿಬ್ಬಂದಿ, ಕಾರ್ಯಾಚರಣೆ ನಡೆಸಿ ಇಂದು ಮುಂಜಾನೆ ಇಲವಾಲ ಬಳಿಯ ತೋಟದ ಮನೆಯೊಂದರಲ್ಲಿ ಅಡಗಿದ್ದ 7 ಮಂದಿಯನ್ನು ಬಂಧಿಸುವಲ್ಲಿ ಯಶಸ್ವಿಯಾಗಿದ್ದಾರೆ.


ಹಳೇ ವೈಷಮ್ಯದ ಹಿನ್ನೆಲೆಯಲ್ಲಿ ಚಂದ್ರುವನ್ನು ಮುಗಿಸಲು ಸ್ಕೆಚ್ ಹಾಕಿದ್ದ ಈ ಯುವಕರ ತಂಡವು, ಕಳೆದ 9 ದಿನಗಳ ಹಿಂದೆಯೇ ರಾತ್ರಿ 9.45 ಗಂಟೆಯಲ್ಲಿ ಪಂಚವಟಿ ಸರ್ಕಲ್ ಬಳಿ, ಗೋಕುಲಂ ವಾಟರ್ ಟ್ಯಾಂಕ್ ಕಡೆಯಿಂದ ಬರುತ್ತಿದ್ದ ಚಂದ್ರು ಮೇಲೆರಗಲು ಬೆನ್ನತ್ತಿದ್ದರು. ಕಾರೊಂದು ಅಡ್ಡ ಬಂದ ಕಾರಣ ಅಂದು ಇವರ ಪ್ರಯತ್ನ ವಿಫಲವಾಗಿತ್ತು ಎಂಬುದು ಬಂಧಿತರನ್ನು ವಿಚಾರಣೆಗೊಳಪಡಿಸಿದಾಗ ತಿಳಿದು ಬಂದಿದೆ.

ಆ ವಿಷಯ ಚಂದ್ರು ಗಮನಕ್ಕೆ ಬಾರದಿದ್ದುದರಿಂದ ಆತ ಎಚ್ಚೆತ್ತುಕೊಂಡಿರಲಿಲ್ಲ. ಮಾಮೂಲಿಯಂತೆ ತಮ್ಮ ಮನೆ ಬಳಿ ಟೈಲರ್ ಅಂಗಡಿ ಮುಂದೆ ಕುಳಿತಿದ್ದಾಗ ಹೊಂಚು ಹಾಕಿ ಈ ಕೃತ್ಯವೆಸಗಿ, ಅಂದು ರಾತ್ರಿ ಇಲವಾಲದ ಬಾರ್‌ವೊಂದರಲ್ಲಿ ಲಿಕ್ಕರ್ ಖರೀದಿಸಿ ಹೊರ ವಲಯದ ಫಾರಂ ಹೌಸ್‌ನಲ್ಲಿ ಅಡಗಿದ್ದರು ಎಂದು ತಿಳಿದು ಬಂದಿದೆ. ತಲೆಮರೆಸಿಕೊಂಡಿರುವ ಉಳಿದ ನಾಲ್ಕು ಮಂದಿ ಹೆಚ್.ಡಿ.ಕೋಟೆ ಬಳಿ ಇರುವುದಾಗಿ ಮಾಹಿತಿ ಬಂದಿರುವ ಹಿನ್ನೆಲೆಯಲ್ಲಿ ತನಿಖಾ ತಂಡದ ಪೊಲೀಸರು, ಈ ಆರೋಪಿಗಳ ಪತ್ತೆಗೆ ಬಲೆ ಬೀಸಿದ್ದಾರೆ. ಬಂಧಿತ 7 ಮಂದಿಯನ್ನು ವಿಚಾರಣೆ ನಡೆಸಿದ ನಂತರ ಇಂದು ಮಧ್ಯಾಹ್ನ ನ್ಯಾಯಾಧೀಶರ ಮುಂದೆ ಹಾಜರುಪಡಿಸಲಾಗಿ ಅವರನ್ನು ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ.

ಕೊಲೆ ಮಾಡಿದವರೆಲ್ಲರೂ 22 ರಿಂದ 26 ವರ್ಷದವರಾಗಿದ್ದು, ಯಾವುದೇ ಕ್ರಿಮಿನಲ್ ಪ್ರಕರಣದ ಹಿನ್ನೆಲೆ ಇಲ್ಲದವರಾಗಿದ್ದಾರೆ. ಈ ಹಿಂದೆ ಹಳೇ ದ್ವೇಷದ ಹಿನ್ನೆಲೆಯಲ್ಲಿ ಎರಡು ಗುಂಪಿನ ನಡುವೆ ಗಲಾಟೆಯಾದಾಗ ಚಂದ್ರು ಇವರಿಗೆ ಅವಾಜ್ ಹಾಕಿದ್ದರಿಂದ ಈ ಕೃತ್ಯ ಎಸಗಿದ್ದಾರೆಂಬುದು ವಿಚಾರಣೆ ವೇಳೆ ತಿಳಿದು ಬಂದಿದೆ.

ಈ 7 ಮಂದಿ ಆರೋಪಿಗಳ ಬಂಧಿಸುವಲ್ಲಿ ಯಶಸ್ವಿಯಾದ ಪೊಲೀಸ್ ಅಧಿಕಾರಿಗಳ ತಂಡದ ಕಾರ್ಯ ಸಾಧನೆಯನ್ನು ನಗರ ಪೊಲೀಸ್ ಆಯುಕ್ತ ಬಿ.ರಮೇಶ್ ಪ್ರಶಂಸಿಸಿದ್ದಾರೆ.

ಮೇಕೆದಾಟು ಅಣೆಕಟ್ಟು ಯೋಜನೆ: ಕರ್ನಾಟಕ–ತಮಿಳುನಾಡು ಸಂಬಂಧ ಹದಗೆಡುವ ಸಾಧ್ಯತೆ



ಚೆನ್ನೈ, ಮೇ 20– ತಮಿಳುನಾಡು ಮುಖ್ಯಮಂತ್ರಿಯಾಗಿರುವ ಎಂ.ಕೆ.ಸ್ಟಾಲಿನ್ ಕಾಂಗ್ರೆಸ್‌ಗೆ ಶಕ್ತಿಯ ಆಧಾರ ಸ್ತಂಭವಾಗಿದ್ದಾರೆ. ತಮಿಳುನಾಡಿನಿಂದ 8 ಸಂಸದರನ್ನು ಆ ಪಕ್ಷ ನೀಡಿದೆ. ಸಿದ್ದರಾಮಯ್ಯ ಕರ್ನಾಟಕದ ಮುಖ್ಯಮಂತ್ರಿಯಾಗಿ ಅಧಿಕಾರ ಸ್ವೀಕರಿಸುತ್ತಿದ್ದಂತೆ ಕಾವೇರಿ ನದಿಯ ಮೇಕೆದಾಟು ಅಣೆಕಟ್ಟು ವಿವಾದ ತಮಿಳುನಾಡಿಗೆ ದೊಡ್ಡ ತಲೆನೋವಾಗುವ ಸಾಧ್ಯತೆಯಿದೆ.

ನೂತನ ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಕಾವೇರಿ ನದಿಗೆ ಅಡ್ಡಲಾಗಿ ಮೇಕೆದಾಟು ಅಣೆಕಟ್ಟು ನಿರ್ಮಾಣಕ್ಕಾಗಿ 'ಪಾದಯಾತ್ರೆ' ನಡೆಸಿದ್ದರು. ಉದ್ದೇಶಿತ ಅಣೆಕಟ್ಟು ಅಂತರರಾಜ್ಯ ಗಡಿಯಲ್ಲಿ ಬರಲಿದ್ದು, ಬೆಂಗಳೂರು ನಗರಕ್ಕೆ ಕುಡಿಯುವ ನೀರು ಒದಗಿಸುವ ಗುರಿ ಹೊಂದಿದೆ. 400 ಮೆಗಾವ್ಯಾಟ್ ವಿದ್ಯುತ್ ಉತ್ಪಾದನೆಗೂ ಉದ್ದೇಶಿಸಲಾಗಿದೆ. ಯೋಜನೆಯ ಅನುಷ್ಠಾನದ ವಿರುದ್ಧ ತಮಿಳುನಾಡು ಸುಪ್ರೀಂಕೋರ್ಟ್‌ಗೆ ಮೊರೆ ಹೋಗಿದ್ದು, ಕೇಂದ್ರ ಜಲಶಕ್ತಿ ಸಚಿವಾಲಯದ ಸಹಯೋಗದಲ್ಲಿ ನಡೆದ ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರದ ಸಭೆಯಲ್ಲಿ ತಮಿಳುನಾಡು ಯೋಜನೆಗೆ ತನ್ನ ತೀವ್ರ ವಿರೋಧವನ್ನು ಪುನರುಚ್ಚರಿಸಿತು.

ಮೇಕೆದಾಟು ಬಳಿ ಅಣೆಕಟ್ಟು ಕಟ್ಟುವುದರಿಂದ ತಮಿಳುನಾಡಿಗೆ ಕಾವೇರಿ ನೀರು ಹರಿಸುವುದಕ್ಕೆ ಯಾವುದೇ ತೊಂದರೆಯಾಗುವುದಿಲ್ಲ ಎಂಬುದು ಕರ್ನಾಟಕದ ನಿಲುವು. ಆದರೆ, ತಮಿಳುನಾಡಿನಂತಹ ಕೆಳಭಾಗದ ನದಿ ತೀರದ ರಾಜ್ಯದ ಮೇಲೆ ಪರಿಣಾಮ ಬೀರುವ ಕಾರಣ ಅಣೆಕಟ್ಟು ನಿರ್ಮಿಸಲು ಕರ್ನಾಟಕ ರಾಜ್ಯಕ್ಕೆ ಯಾವುದೇ ಹಕ್ಕು ಇಲ್ಲ ಎಂದು ತಮಿಳುನಾಡು ಅಭಿಪ್ರಾಯಪಟ್ಟಿದೆ.

ತಮಿಳುನಾಡು ಮತ್ತು ಕರ್ನಾಟಕ ಎರಡೂ ವಿಧಾನಸಭೆಗಳು 2022ರಲ್ಲಿ ಪರಸ್ಪರ ವಿರುದ್ಧ ನಿರ್ಣಯಗಳನ್ನು ಅಂಗೀಕರಿಸಿದ್ದವು ಮತ್ತು ಈ ವಿಷಯವು ಎರಡು ರಾಜ್ಯಗಳ ಗಡಿ ಪ್ರದೇಶಗಳಲ್ಲಿ ಉದ್ವಿಗ್ನತೆಯನ್ನು ಉಂಟುಮಾಡಿತು. ರಾಜ್ಯ ಕಾಂಗ್ರೆಸ್ ಈ ಯೋಜನೆಯನ್ನು ಒಪ್ಪುವುದಿಲ್ಲ. ಈ ಸಂಬಂಧ ಕರ್ನಾಟಕ ಸರ್ಕಾರದೊಂದಿಗೆ ಮಾತನಾಡುತ್ತೇವೆ. ಮೇಕೆದಾಟು ಯೋಜನೆಯಿಂದ ತಮಿಳುನಾಡಿನ ಹಿತಾಸಕ್ತಿ ಕಡೆಗಣಿಸಲಾಗುವುದು ಎಂದು ತಮಿಳುನಾಡು ಕಾಂಗ್ರೆಸ್ ಸಮಿತಿ ಅಧ್ಯಕ್ಷ ಕೆ.ಎಸ್. ಅಳಗಿರಿ ಸುದ್ದಿಸಂಸ್ಥೆ ಐಎಎನ್‌ಎಸ್‌ಗೆ ತಿಳಿಸಿದ್ದಾರೆ.

ಮೇಕೆದಾಟು ವಿಚಾರದಲ್ಲಿ ಸಿದ್ದರಾಮಯ್ಯ ಸರ್ಕಾರದ ಮುಂದಿನ ನಡೆ ಏನಾಗುತ್ತದೆ ಎಂಬುದನ್ನು ಕಾದು ನೋಡಬೇಕು, 2024ರ ಲೋಕಸಭಾ ಚುನಾವಣೆಯ ಅಂತ್ಯದವರೆಗೆ ಕರ್ನಾಟಕ ಸರ್ಕಾರವು ಮೃದುವಾಗಿರಲು ಕಾಂಗ್ರೆಸ್ ಪಕ್ಷದ ಕೇಂದ್ರ ನಾಯಕತ್ವವು ನಿರ್ದೇಶಿಸಬಹುದು.

ಮುಕ್ತ ವಿವಿಯಲ್ಲಿ 51 ಹೊಸ ಕೋರ್ಸ್‌ಗಳ ಆರಂಭಕ್ಕೆ ಸಿದ್ಧತೆ

ಮೈಸೂರು, ಮೇ 20(ಆರ್‌ಕೆ)–ವಿದ್ಯಾರ್ಥಿಗಳಿಗೆ ಅಗತ್ಯ ಶೈಕ್ಷಣಿಕ ಸೌಲಭ್ಯಗಳನ್ನು ಒದಗಿಸಿರುವ ಹಿನ್ನೆಲೆಯಲ್ಲಿ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯಕ್ಕೆ NAAC A+ ಗ್ರೇಡ್ ಮಾನ್ಯತೆ ಲಭಿಸಿದೆ ಎಂದು ಕುಲಪತಿ ಪ್ರೊ. ಶರಣಪ್ಪ ವಿ.ಹಲಸೆ ತಿಳಿಸಿದ್ದಾರೆ.

ಮುಕ್ತ ವಿಶ್ವವಿದ್ಯಾನಿಲಯದ ಆಡಳಿತ ಭವನದ ಬಿಓಎಂ ಸಭಾಂಗಣದಲ್ಲಿ ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡುತ್ತಿದ್ದ ಅವರು, ಪ್ರಸ್ತುತ 64 ಕೋರ್ಸ್‌ಗಳಿದ್ದು, ಮುಂದೆ ಡೇಟಾ ಸೈನ್ಸ್, ಬಯೋ ಇನ್‌ಫರ್ಮ್ಯಾಟಿಕ್ಸ್, ಅರ್ಥ ಸೈನ್ಸ್, ಕಂಪ್ಯೂಟರ್ ಅಪ್ಲಿಕೇಷನ್ಸ್, ಸೈಬರ್ ಸೆಕ್ಯೂರಿಟಿ ಸೇರಿದಂತೆ ಇನ್ನೂ 51 ಹೊಸ ಕೋರ್ಸ್‌ಗಳನ್ನು ಆರಂಭಿಸಲಾಗುವುದು ಎಂದರು.

ರಾಜ್ಯದಾದ್ಯಂತ ಎಲ್ಲಾ ಜಿಲ್ಲೆಗಳಲ್ಲಿರುವ ವಿದ್ಯಾರ್ಥಿಗಳಿಗೆ ಉನ್ನತ ಶಿಕ್ಷಣ ನೀಡುವ ಸಲುವಾಗಿ ಮುಂದಿನ ದಿನಗಳಲ್ಲಿ ಇನ್ನೂ 23 ಜಿಲ್ಲೆಗಳಲ್ಲಿ ಮುಕ್ತ ವಿಶ್ವವಿದ್ಯಾನಿಲಯದ ಅಧ್ಯಯನ ಕೇಂದ್ರ ಆರಂಭಿಸಲುದ್ದೇಶಿಸಲಾಗಿದೆ. ಪ್ರತೀ ವರ್ಷ ವಿವಿಧ ಕೋರ್ಸ್‌ಗಳಿಗೆ ಪ್ರವೇಶಾತಿ ಪಡೆಯುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ ಹೆಚ್ಚಾಗುತ್ತಿದ್ದು, ಅವರು ಬಯಸುವ ಕೋರ್ಸ್‌ಗಳನ್ನು ಪರಿಚಯಿಸಲಾಗುತ್ತಿದೆ ಎಂದರು.

ಮಂಗಳಮುಖಿಯರು ಹಾಗೂ ಕೋವಿಡ್ ಪರಿಸ್ಥಿತಿಯಲ್ಲಿ ಮಾರಕ ರೋಗಕ್ಕೆ ತುತ್ತಾದವರ ಮಕ್ಕಳಿಗೆ ಮುಕ್ತ ವಿಶ್ವವಿದ್ಯಾನಿಲಯದಲ್ಲಿ ಉಚಿತ ಶಿಕ್ಷಣ ನೀಡಲುದ್ದೇಶಿಸಲಾಗಿದ್ದು, ಕೆಎಸ್‌ಆರ್‌ಟಿಸಿ ಬಸ್, ಮ್ಯಾಕ್ಸಿಕ್ಯಾಬ್ ಡ್ರೈವರ್‌ಗಳ ಮಕ್ಕಳಿಗೆ ಶೇ.50ರ ರಿಯಾಯಿತಿ ಶುಲ್ಕದೊಂದಿಗೆ ವಿವಿಧ ಕೋರ್ಸ್‌ಗಳಲ್ಲಿ ಶಿಕ್ಷಣ ನೀಡಲು ಪ್ರವೇಶ ಮಾಡಿಕೊಳ್ಳಲಾಗುವುದು ಎಂದು ಪ್ರೊ. ಹಲಸೆ ತಿಳಿಸಿದರು.



ಯುಜಿಸಿ ಅಧೀನದ ನ್ಯಾಕ್ ಸಂಸ್ಥೆಯು ಇದೇ ಮೊದಲ ಬಾರಿಗೆ A+ ಗ್ರೇಡ್ ಮಾನ್ಯತೆ ನೀಡಿದ್ದು, ವಿಶ್ವವಿದ್ಯಾನಿಲಯದ ಘನತೆ ಉನ್ನತ ಮಟ್ಟಕ್ಕೇರಿದೆ. ಅದರಿಂದಾಗಿ ರಾಜ್ಯ ಮತ್ತು ಕೇಂದ್ರ ಸರ್ಕಾರದಿಂದ ಅನುದಾನ ಕೋರಲು ಅವಕಾಶ ಲಭಿಸಿದಂತಾಗಿದೆ. ಮುಂದೆ 100 ಕೋಟಿ ರೂ. ಅನುದಾನ ಪಡೆದು ಅಭಿವೃದ್ಧಿಪಡಿಸಲು ಪೂರಕ ತಯಾರಿ ನಡೆಸುತ್ತಿದ್ದೇವೆ ಎಂದು ಕುಲಪತಿಗಳು ತಿಳಿಸಿದರು.

ಇತ್ತೀಚೆಗೆ ನಡೆದ ವಿಶ್ವವಿದ್ಯಾನಿಲಯಗಳ ಕುಲಪತಿಗಳ ಸಭೆಯಲ್ಲಿ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯವು ಹೊಸ ರಾಷ್ಟ್ರೀಯ ಶಿಕ್ಷಣ ನೀತಿ (NEP)ಯನ್ನು ಅನುಷ್ಠಾನ ಮಾಡುವ ಕುರಿತಂತೆ ಚರ್ಚಿಸಲಾಗಿದೆ. ವಿಶ್ವವಿದ್ಯಾನಿಲಯದ ಸೆಂಟ್ರಲ್ ಲೈಬ್ರರಿಯಲ್ಲಿ ಬ್ರೌಸಿಂಗ್ ಸೆಂಟರ್ ಸ್ಥಾಪನೆ, ಆನ್‌ಲೈನ್ ಅಪ್ಲಿಕೇಷನ್ ವ್ಯವಸ್ಥೆ, ಇ–ಬುಕ್ಸ್ ಮತ್ತು ಇ–ರಿಸೋರ್ಸಸ್, ಸೆಂಟ್ರಲ್ ಇನ್ಸ್ಟ್ರುಮೆಂಟೇಷನ್ ಸೌಲಭ್ಯ, ವರ್ಚುಯಲ್ ಲ್ಯಾಬೋರೇಟರಿ ಸ್ಥಾಪಿಸಲಾಗಿದೆ ಎಂದು ಇದೇ ಸಂದರ್ಭ ನುಡಿದರು.

ಆನ್‌ಲೈನ್ ಕೋರ್ಸ್‌ಗಳನ್ನು ಆರಂಭಿಸಿ ಸ್ವಂತವಾಗಿ ಲರ್ನಿಂಗ್ ಮ್ಯಾನೇಜ್‌ಮೆಂಟ್ ಸಿಸ್ಟಂ ಬಲಪಡಿಸುವ ಮೂಲಕ 2 ಲಕ್ಷಕ್ಕೂ ಮಿಗಿಲಾಗಿ ವಿದ್ಯಾರ್ಥಿಗಳ ಪ್ರವೇಶಾತಿ ಮಾಡುವುದು ನಮ್ಮ ಗುರಿಯಾಗಿದ್ದು, ತಮ್ಮ ನಿರಂತರ ಪ್ರಯತ್ನದಿಂದಾಗಿ ಪ್ರಾದೇಶಿಕ ಕೇಂದ್ರ ಸ್ಥಾಪಿಸಲು ಗುಲ್ಬರ್ಗ ಯೂನಿವರ್ಸಿಟಿಯಿಂದ ಒಂದು ಎಕರೆ ಜಾಗ ಪಡೆಯಲು ಯಶಸ್ವಿಯಾಗಿದ್ದೇವೆ. ಅದೇ ರೀತಿ ಮುಡಾದಿಂದಲೂ ಸಿಎ ನಿವೇಶನ ಪಡೆಯಲು ಪ್ರಯತ್ನ ಮುಂದುವರಿದಿದೆ ಎಂದು ಪ್ರೊ. ಹಲಸೆ ನುಡಿದರು.

ಕುಲಸಚಿವ ಕೆಎಲ್‌ಎನ್ ಮೂರ್ತಿ, ಪರೀಕ್ಷಾಂಗ ಕುಲಸಚಿವ ಕೆ.ಬಿ.ಪ್ರವೀಣ್, ಹಣಕಾಸು ಅಧಿಕಾರಿ ಖಾದರ್ ಪಾಷ, ನ್ಯಾಕ್ ಕೋ–ಆರ್ಡಿನೇಟರ್ ಡಾ. ಹೆಚ್.ರಾಜೇಶ್ವರಿ, ವಿವಿಧ ವಿಭಾಗಗಳ ಮುಖ್ಯಸ್ಥರಾದ ಡಾ. ಜೈಪಾಲ್, ಡಾ. ವಿ.ಮಹೇಶ್, ಪ್ರೊ. ರಾಮನಾಥಮ್ ನಾಯ್ಡು, ಪ್ರೊ. ಎನ್.ಲಕ್ಷ್ಮಿ ಸುದ್ದಿಗೋಷ್ಠಿಯಲ್ಲಿ ಉಪಸ್ಥಿತರಿದ್ದರು.

ಡೆಲ್ಲಿ ವಿರುದ್ಧ ಭರ್ಜರಿ ಗೆಲುವು: ಪ್ಲೇಆಫ್ ತಲುಪಿದ ಚೆನ್ನೈ

ಡೆಲ್ಲಿ, ಮೇ 20 (ಸಿಎನ್)– ಋತುರಾಜ್ ಗಾಯಕ್ವಾಡ್, ಕಾನ್ವೇ ಭರ್ಜರಿ ಅರ್ಧಶತಕ ಹಾಗೂ ಬೌಲರ್‌ಗಳ ಸಂಘಟಿತ ದಾಳಿ ನೆರವಿನಿಂದಾಗಿ ಡೆಲ್ಲಿ ಕ್ಯಾಪಿಟಲ್ಸ್ ವಿರುದ್ಧ ಚೆನ್ನೈ ಸೂಪರ್ ಕಿಂಗ್ಸ್ 77 ರನ್‌ಗಳ ಭರ್ಜರಿ ಜಯ ಸಾಧಿಸಿದೆ. ಇದರೊಂದಿಗೆ ಅಂಕಪಟ್ಟಿಯಲ್ಲಿ 17 ಅಂಕಗಳೊಂದಿಗೆ 2ನೇ ಸ್ಥಾನಕ್ಕೇರಿ ಪ್ಲೇಆಫ್ ಪ್ರವೇಶ ಪಡೆದುಕೊಂಡಿದೆ.

ಇಲ್ಲಿನ ಅರುಣ್‌ಜೇಟ್ಲಿ ಕ್ರೀಡಾಂಗಣದಲ್ಲಿ ನಡೆದ ಪಂದ್ಯದಲ್ಲಿ ಟಾಸ್ ಗೆದ್ದು ಬ್ಯಾಟಿಂಗ್ ಮಾಡಿದ ಚೆನ್ನೈ ನಿಗದಿತ 20 ಓವರ್‌ಗಳಿಗೆ 3 ವಿಕೆಟ್ ನಷ್ಟಕ್ಕೆ 223 ರನ್‌ಗಳ ಬೃಹತ್ ಮೊತ್ತ ಪೇರಿಸಿತು.

224 ರನ್‌ಗಳ ಬೃಹತ್ ಗುರಿ ಬೆನ್ನತ್ತಿದ ಡೆಲ್ಲಿ ಕ್ಯಾಪಿಟಲ್ಸ್ ತಂಡ 20 ಓವರುಗಳಲ್ಲಿ 9 ವಿಕೆಟ್ ನಷ್ಟಕ್ಕೆ 146 ರನ್ ಗಳಿಸಿತು.



ಡೆಲ್ಲಿ ಪರ ಡೇವಿಡ್‌ವಾರ್ನರ್ 58 ಎಸೆತಗಳಲ್ಲಿ 5 ಸಿಕ್ಸರ್ ಹಾಗೂ 7 ಬೌಂಡರಿ ಒಳಗೊಂಡ 89 ರನ್ ಗಳಿಸಿದ್ದು ಬಿಟ್ಟರೆ ಇನ್ಯಾವ ಬ್ಯಾಟ್ಸ್‌ಮ್ಯಾನ್ ಕೂಡ ಹೆಚ್ಚು ಹೊತ್ತು ಕ್ರೀಸ್‌ನಲ್ಲಿ ನಿಲ್ಲಲಿಲ್ಲ. ಅಂತಿಮವಾಗಿ 77 ರನ್‌ಗಳಿಂದ ಸೋಲು ಕಂಡಿತು.

ಚೆನ್ನೈ ಪರ ದೀಪಕ್ ಚಹಾರ್ 3 ವಿಕೆಟ್ ಉರುಳಿಸಿದರೆ, ಮಹೀಶ್‌ತೀಕ್ಷ್ಣ, ಮಹೀಶ ಪ್ರತಿರಣ ತಲಾ 2 ವಿಕೆಟ್ ಪಡೆದು ತಂಡದ ಜಯದಲ್ಲಿ ಪ್ರಮುಖ ಪಾತ್ರ ವಹಿಸಿದರು.

ಇದಕ್ಕೂ ಮುನ್ನ ಮೊದಲು ಬ್ಯಾಟ್ ಮಾಡಿದ ಚೆನ್ನೈ ತಂಡ 223 ರನ್‌ಗಳ ಬೃಹತ್ ಮೊತ್ತ ಗಳಿಸಿತು. ಋತುರಾಜ್ ಗಾಯಕ್ವಾಡ್ 50 ಎಸೆತಗಳಲ್ಲಿ 7 ಸಿಕ್ಸರ್ ಹಾಗೂ 3 ಬೌಂಡರಿ ಒಳಗೊಂಡ 79 ರನ್ ಸಿಡಿಸಿದರೆ. ಕಾನ್ವೇ 52 ಎಸೆತಗಳಲ್ಲಿ 3 ಸಿಕ್ಸ್ 11 ಬೌಂಡರಿ ಒಳಗೊಂಡ 87 ರನ್ ಗಳಿಸಿದರು. ಈ ಇಬ್ಬರು ಆಟಗಾರರು ಚೆನ್ನೈ ತಂಡದ ಮೊತ್ತ ಉಬ್ಬಿಸಲು ನೆರವಾದರು. ಡೆಲ್ಲಿ ಪರ ಖಲೀಲ್‌ಅಹ್ಮದ್, ನೋಕಿಯೇ, ಚೇತನ್ ಸಕಾರಿಯಾ ತಲಾ 1 ವಿಕೆಟ್ ಪಡೆದರು. ಋತುರಾಜ್ ಗಾಯಗ್ವಾಡ್ ಪಂದ್ಯಶ್ರೇಷ್ಠ ಪ್ರಶಸ್ತಿಗೆ ಭಾಜನರಾದರು.

ರಾಜ್ಯದ ನೂತನ ಪೊಲೀಸ್ ಮಹಾ ನಿರ್ದೇಶಕ ಅಲೋಕ್ ಮೋಹನ್

ಬೆಂಗಳೂರು: ರಾಜ್ಯದ ನೂತನ ಪೊಲೀಸ್ ಮಹಾನಿರ್ದೇಶಕರಾಗಿ(ಡಿಜಿ, ಐಜಿಪಿ) ಅಗ್ನಿಶಾಮಕ ಹಾಗೂ ತುರ್ತು ಸೇವೆಗಳ ಇಲಾಖೆ ಡಿಜಿಪಿ ಡಾ.ಅಲೋಕ್ ಮೋಹನ್ ಅವರನ್ನು ನೇಮಕ ಮಾಡಿ ಸಿದ್ದರಾಮಯ್ಯ ನೇತೃತ್ವದ ನೂತನ ಸರ್ಕಾರ ಶನಿವಾರ ಆದೇಶ ಹೊರಡಿಸಿದೆ. ರಾಜ್ಯ ಪೊಲೀಸ್ ಮಹಾನಿರ್ದೇಶಕರಾಗಿದ್ದ ಪ್ರವೀಣ್ ಸೂದ್ ಅವರು ಸಿಬಿಐ ನಿರ್ದೇಶಕರಾಗಿ ನೇಮಕಗೊಂಡ ಹಿನ್ನೆಲೆಯಲ್ಲಿ ಅವರಿಂದ ತೆರವಾದ ಸ್ಥಾನಕ್ಕೆ ಅಲೋಕ್ ಮೋಹನ್ ಅವರನ್ನು ನೇಮಕ ಮಾಡಲಾಗಿದೆ. ಅಲೋಕ್ ಮೋಹನ್ ಅವರು 1987ರ ಬ್ಯಾಚ್‌ನ ಹಿರಿಯ ಐಪಿಎಸ್ ಅಧಿಕಾರಿಯಾಗಿದ್ದು, ಸೇವಾ ಜೇಷ್ಠತೆ ಆಧಾರದಲ್ಲಿ ಅವರನ್ನೇ ಸರ್ಕಾರ ಡಿಜಿ–ಐಜಿಪಿ ಹುದ್ದೆಗೆ ಪರಿಗಣಿಸಿದೆ.



ರಾಜ್ಯದ ನೂತನ ಅಡ್ವೋಕೇಟ್ ಜನರಲ್ ಶಶಿಕಿರಣ್ ಶೆಟ್ಟಿ



ಬೆಂಗಳೂರು: ರಾಜ್ಯ ಸರ್ಕಾರದ ನೂತನ ಅಡ್ವೋಕೇಟ್ ಜನರಲ್ ಆಗಿ ಹಿರಿಯ ವಕೀಲ ಹಾಗೂ ನಿವೃತ್ತ ಲೋಕಾಯುಕ್ತ ನ್ಯಾಯಮೂರ್ತಿ ವಿಶ್ವನಾಥ್ ಶೆಟ್ಟಿ ಅವರ ಪುತ್ರ ಶಶಿಕಿರಣ್ ಶೆಟ್ಟಿ ಅವರನ್ನು ನೇಮಕ ಮಾಡಲಾಗಿದೆ. ಇಂದು ನೂತನ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ನೇತೃತ್ವದಲ್ಲಿ ನಡೆದ ಮೊದಲ ಸಚಿವ ಸಂಪುಟ ಸಭೆಯಲ್ಲಿ ಎಜಿ ಆಯ್ಕೆ ಅಧಿಕಾರವನ್ನು ಸಿಎಂಗೆ ನೀಡಲಾಗಿದೆ. ಅದರಂತೆ ಹೈಕೋರ್ಟ್‌ನ ಹಿರಿಯ ವಕೀಲ ಶಶಿಕಿರಣ್ ಶೆಟ್ಟಿ ಅವರನ್ನು ರಾಜ್ಯ ಸರ್ಕಾರ ನೇಮಕ ಮಾಡಿದೆ. ಬಸವರಾಜ ಬೊಮ್ಮಾಯಿ ನೇತೃತ್ವದ ಬಿಜೆಪಿ ಸರ್ಕಾರದಲ್ಲಿ ಅಡ್ವೋಕೇಟ್ ಜನರಲ್ ಆಗಿದ್ದ ಪ್ರಭುಲಿಂಗ ನಾವದಗಿ ಅವರು ಇತ್ತೀಚೆಗೆ ತಮ್ಮ ಹುದ್ದೆಗೆ ರಾಜೀನಾಮೆ ನೀಡಿದ್ದರು. ಅವರಿಂದ ತೆರವಾಗಿದ್ದ ಎಜಿ ಸ್ಥಾನಕ್ಕೆ ಇದೀಗ ಶಶಿಕಿರಣ್ ಶೆಟ್ಟಿ ಅವರನ್ನು ನೇಮಕ ಮಾಡಲಾಗಿದೆ.

ಮಂಗಳೂರು ಪ್ರಣವ ಸೌಹಾರ್ದ ಸಹಕಾರಿ ಸಂಘದ ಮೈಸೂರು ಶಾಖೆ ಇಂದು ಉದ್ಘಾಟನೆ

ಮೈಸೂರು,ಮೇ 20(ಎಂಟಿವೈ)–ಮಂಗಳೂರಿನ ಪ್ರಣವ ಸೌಹಾರ್ದ ಸಹಕಾರಿ ಸಂಘದ ಮೈಸೂರು ಶಾಖೆಯನ್ನು ಮೇ 21ರಂದು ಸಂಜೆ 6ಕ್ಕೆ ಉದ್ಘಾಟನೆ ಮಾಡಲಾಗುವುದು ಎಂದು ಬ್ಯಾಂಕ್‌ನ ಅಧ್ಯಕ್ಷ ಜಿ.ಪ್ರಶಾಂತ್ ಪೈ ತಿಳಿಸಿದ್ದಾರೆ.

ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಚಾಮರಾಜ ಮೊಹಲ್ಲಾ 8ನೇ ಬ್ಲಾಕ್‌ನ ಬ್ಯಾಂಕ್ ಆಫ್ ಬರೋಡಾ ಎದುರಿನ ಕಟ್ಟಡದಲ್ಲಿ ಪ್ರಣವ ಸೌಹಾರ್ದ ಸಹಕಾರಿ ಸಂಘದ ಶಾಖೆ ತೆರೆಯಲಾಗಿದ್ದು, ಬ್ಯಾಂಕ್‌ನ ಸಂಸ್ಥಾಪಕ ಅಧ್ಯಕ್ಷ ಜಿ.ಆರ್.ಪ್ರಸಾದ್ ನೂತನ ಶಾಖೆಯನ್ನು ಉದ್ಘಾಟಿಸಲಿದ್ದಾರೆ. ಕಾರ್ಯಕ್ರಮದಲ್ಲಿ ಗುರುದೇವಾನಂದ ಸ್ವಾಮೀಜಿ ಆಶೀರ್ವಚನ ನೀಡಲಿದ್ದಾರೆ. ವಿವಿಧ ಸಹಕಾರಿ ಸಂಸ್ಥೆಗಳ ಮುಖ್ಯಸ್ಥ ಎಸ್.ಕೆ. ಮಂಜುನಾಥ್, ಭಾರತಿ ಜಿ.ಭಟ್, ಹೆಚ್.ವಿ. ರಾಜೀವ್, ಎಸ್.ಆರ್.ನಾರಾಯಣರಾವ್, ಶಿವಕುಮಾರ್ ಬಿರಾದಾರ್ ಇನ್ನಿತರರು ಅತಿಥಿಗಳಾಗಿ ಪಾಲ್ಗೊಳ್ಳಲಿದ್ದಾರೆ ಎಂದರು.

ಮಂಗಳೂರಿನ ಪ್ರಣವ ಸೌಹಾರ್ದ ಸಹಕಾರಿ ಸಂಘವು ಸತತ ಎ ದರ್ಜೆ ಪಡೆದಿದೆ. ಜೊತೆಗೆ ಷೇರುದಾರರಿಗೆ ಲಾಭಾಂಶ ನೀಡಲಾಗುತ್ತಿದೆ. ಇದರೊಡನೆ ಚಾರಿಟಬಲ್ ಟ್ರಸ್ಟ್ ಮೂಲಕ ಸಮಾಜಮುಖಿ ಕೆಲಸ ಕಾರ್ಯ ಕೂಡ ಮಾಡಲಾಗುತ್ತಿದೆ. ಸ್ವಉದ್ಯೋಗಕ್ಕೂ ನೆರವು ನೀಡಲಾಗುತ್ತಿದೆ. ಸಾವಯವ ಕೃಷಿಗೆ ಉತ್ತೇಜನ ನೀಡುತ್ತಿದೆ ಎಂದು ತಿಳಿಸಿದರು.

ಮೇ 23ರಂದು ವಿವಿಧೆಡೆ ವಿದ್ಯುತ್ ವ್ಯತ್ಯಯ

ಮೈಸೂರು,ಮೇ 20– ಮೇ 23 ಮಂಗಳವಾರದಂದು ಬೆಳಿಗ್ಗೆ 10ರಿಂದ ಸಂಜೆ 5.30ರವರೆಗೆ ರಾಜೀವನಗರ 2ನೇ ಹಂತ, ಕ್ರಿಶ್ಚಿಯನ್ ಕಾಲೋನಿ, ಯಾಸಿನ್ ಮಸ್ಜಿದ್, ಎಸ್.ಬಡಾವಣೆ, ಸೂರ್ಯನಾರಾಯಣ ದೇವಸ್ಥಾನ ರಸ್ತೆ, ಆಲ್ ಬಜಾರ್ ಮಸ್ಜಿದ್ ವೃತ್ತ, ಅಂಬೇಡ್ಕರ್ ಭವನ ರಸ್ತೆ, ಕ್ಯೂಬಾ ಮಸ್ಜಿದ್ ವೃತ್ತ, ನಾರಾಯಣ ಹೃದಯಾಲಯ ಆಸ್ಪತ್ರೆ, ಕಾಮನಕೆರೆಹುಂಡಿ, ಕೆ.ಹೆಚ್.ಬಿ. ಬಡಾವಣೆ, RTO-55, ಆಸೀನಾ ಬಡಾವಣೆ, ರಾಜೀವನಗರ 3ನೇ ಹಂತ ಹಾಗೂ ಸುತ್ತ–ಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದ್ದು, ಸಾರ್ವಜನಿಕರು ಹಾಗೂ ಕೈಗಾರಿಕೋದ್ಯಮಿಗಳು ಸಹಕರಿಸಬೇಕೆಂದು ನ.ರಾ.ಮೊಹಲ್ಲಾ ವಿಭಾಗದ ಕಾರ್ಯನಿರ್ವಾಹಕ ಇಂಜಿನಿಯರ್ ತಿಳಿಸಿದ್ದಾರೆ.

ಮೇ 24, ಹೆಚ್.ಡಿ.ಕೋಟೆ ತಾಲೂಕಿಗೆ ಲೋಕಾಯುಕ್ತ ಅಧಿಕಾರಿಗಳ ಭೇಟಿ

ಮೈಸೂರು,ಮೇ 20– ಕರ್ನಾಟಕ ಲೋಕಾಯುಕ್ತ ಜಿಲ್ಲಾ ವ್ಯಾಪ್ತಿಯ ಪೊಲೀಸ್ ಅಧಿಕಾರಿಗಳು, ಜಿಲ್ಲೆಯ ತಾಲೂಕು ಕೇಂದ್ರಗಳಲ್ಲಿ ಸಾರ್ವಜನಿಕ ಮತ್ತು ಸರ್ಕಾರಿ ಕಚೇರಿಗಳಲ್ಲಿ ಸಾರ್ವಜನಿಕರು ಅಧಿಕೃತ ಕೆಲಸಗಳ ಅನಗತ್ಯ ವಿಳಂಬ, ಲಂಚದ ಬೇಡಿಕೆ ಇತ್ಯಾದಿ ತೊಂದರೆಗಳನ್ನು ನೀಡುತ್ತಿರುವ ಬಗ್ಗೆ ಸಂಬಂಧಪಟ್ಟ ಸಾರ್ವ ಜನಿಕ ಸರ್ಕಾರಿ ಅಧಿಕಾರಿ ನೌಕರರ ವಿರುದ್ಧ ಅಗತ್ಯ ದಾಖಲಾತಿಗಳೊಡನೆ ಸ್ವೀಕರಿಸುವ ಕಾರ್ಯಕ್ರಮವನ್ನು ಹೆಚ್.ಡಿ.ಕೋಟೆ ತಾಲೂಕಿನ ಡಾ.ಅಂಬೇಡ್ಕರ್ ಭವನದಲ್ಲಿ ಮೇ 24ರಂದು ಬೆಳಗ್ಗೆ 11ರಿಂದ ಮಧ್ಯಾಹ್ನ 1ರವರೆಗೆ ಹಮ್ಮಿಕೊಳ್ಳಲಾಗಿದೆ ಎಂದು ಲೋಕಾಯುಕ್ತ ಮೈಸೂರು ವಿಭಾಗದ ಪ್ರಕಟಣೆ ತಿಳಿಸಿದೆ.

ಮಹಿಳೆ ಕೈಯಿಂದ ಮೊಬೈಲ್, ಹಣವಿದ್ದ ಪರ್ಸ್ ಕದ್ದಿದ್ದ ಖದೀಮರ ಬಂಧನ

ಮೈಸೂರು, ಮೇ 20(ಎಸ್‌ಬಿಡಿ)– ಮಹಿಳೆ ಕೈಯಿಂದ ಮೊಬೈಲ್ ಹಾಗೂ ಹಣವಿದ್ದ ಪರ್ಸ್ ಕಿತ್ತುಕೊಂಡು ಪರಾರಿಯಾಗಿದ್ದ ಇಬ್ಬರು ಖದೀಮರನ್ನು ಮೈಸೂರಿನ ನಜರ್‌ಬಾದ್ ಠಾಣೆ ಪೊಲೀಸರು ಬಂಧಿಸಿದ್ದಾರೆ.

ಬನ್ನೂರು ಪುರಸಭೆ ಸದಸ್ಯ ಶಾಂತರಾಜು ಹಾಗೂ ಅವರ ಪತ್ನಿ ಸುಜಾತ ಅವರು ಮೇ 11ರಂದು ಮೈಸೂರಿನ ಬಿ.ಎನ್.ರಸ್ತೆಯಲ್ಲಿ ದ್ವಿಚಕ್ರ ವಾಹನದಲ್ಲಿ ತೆರಳುತ್ತಿದ್ದಾಗ, ಪ್ರೆಸಿಡೆಂಟ್ ಹೋಟೆಲ್ ಬಳಿ ಹಿಂಭಾಗದಿಂದ ಬೈಕ್‌ನಲ್ಲಿ ಬಂದ ಇಬ್ಬರು ಖದೀಮರು ಸುಜಾತ ಅವರ ಕೈಯಲ್ಲಿದ್ದ ಪರ್ಸ್ ಕಿತ್ತುಕೊಂಡು ಪರಾರಿಯಾಗಿದ್ದರು. ಅದರಲ್ಲಿ 22 ಸಾವಿರ ಬೆಲೆಯ ಮೊಬೈಲ್ ಹಾಗೂ 15 ಸಾವಿರ ರೂ. ಹಣವಿತ್ತು. ಶಾಂತರಾಜು ಖದೀಮರನ್ನು ಹಿಂಬಾಲಿಸಿದ್ದರಾದರೂ ಅವರು ಸಿಕ್ಕಿರಲಿಲ್ಲ. ಬಳಿಕ ನಜರ್‌ಬಾದ್ ಠಾಣೆಯಲ್ಲಿ ದೂರು ದಾಖಲಿಸಿದ್ದರು.

ಪ್ರಕರಣ ದಾಖಲಿಸಿಕೊಂಡ ಪೊಲೀಸರು ಮರುದಿನ(ಮೇ 12) ಇಬ್ಬರನ್ನು ಬಂಧಿಸಿ, ವಿಚಾರಣೆಗೊಳಪಡಿಸಿದಾಗ ಬಿ.ಎನ್.ರಸ್ತೆಯಲ್ಲಿ ಮಹಿಳೆಯಿಂದ ಪರ್ಸ್ ಕಿತ್ತುಕೊಂಡು ಹೋಗಿದ್ದು ಹಾಗೂ ಲಕ್ಷ್ಮೀಪುರಂ ಠಾಣೆ ವ್ಯಾಪ್ತಿಯಲ್ಲಿ ಸುಲಿಗೆ ಮಾಡಿದ್ದನ್ನು ಒಪ್ಪಿಕೊಂಡಿದ್ದಾಗಿ ಪೊಲೀಸರು ತಿಳಿಸಿದ್ದಾರೆ. ಬಂಧಿತರಿಂದ ಒಟ್ಟು 44 ಸಾವಿರ ರೂ. ಬೆಲೆಯ 2 ಮೊಬೈಲ್ ಹಾಗೂ 2 ಸಾವಿರ ರೂ. ಹಣ ವಶಪಡಿಸಿಕೊಳ್ಳಲಾಗಿದೆ ಎಂದಿದ್ದಾರೆ.

ಅಪರಾಧ ಮತ್ತು ಸಂಚಾರ ವಿಭಾಗದ ಡಿಸಿಪಿ ಎಸ್.ಜಾಹ್ನವಿ ಮಾರ್ಗದರ್ಶನ, ದೇವರಾಜ ಉಪವಿಭಾಗದ ಎಸಿಪಿ ಶಾಂತಮಲ್ಲಪ್ಪನವರ ನೇತೃತ್ವದಲ್ಲಿ ನಜರ್‌ಬಾದ್ ಠಾಣೆ ಇನ್ಸ್‌ಪೆಕ್ಟರ್ ಕೆ.ಸಂತೋಷ್, ಸಬ್‌ಇನ್ಸ್‌ಪೆಕ್ಟರ್‌ಗಳಾದ ವೈಶಾಲಿ ಎ.ಬಿರಾದಾರ, ಶ್ರೀನಿವಾಸ ಪಾಟೀಲ, ಸಿಬ್ಬಂದಿ ಸತೀಶ್ ಕುಮಾರ್, ಕಿರಣ್ ರಾಥೋಡ್, ಸಂತೋಷ್‌ಕುಮಾರ್, ತಾಂತ್ರಿಕ ವಿಭಾಗದ ಕುಮಾರ್ ಕಾರ್ಯಾಚರಣೆ ನಡೆಸಿ, ಖದೀಮರನ್ನು ಬಂಧಿಸಿದ್ದಾರೆ.

ನಾಳೆಯಿಂದ ಒತ್ತಡ ನಿರ್ವಹಣಾ ಚಿಕಿತ್ಸಾ ಶಿಬಿರ

ಮೈಸೂರು, ಮೇ 20–ಮೈಸೂರಿನ ಲಲಿತಾದ್ರಿಪುರ ರಸ್ತೆಯಲ್ಲಿರುವ ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆಯಲ್ಲಿ ಮೇ 22ರಿಂದ 27ರವರೆಗೆ ಒತ್ತಡ ನಿರ್ವಹಣಾ ಚಿಕಿತ್ಸಾ ಶಿಬಿರ ಹಮ್ಮಿಕೊಳ್ಳಲಾಗಿದೆ. ಶಿಬಿರವು ಬೆಳಗ್ಗೆ 9.30ರಿಂದ 4.30ರವರೆಗೆ ನಡೆಯಲಿದೆ. ಮಾಹಿತಿಗೆ ಮೊ. 8722821894, ದೂ. 0821–2548231 ಸಂಪರ್ಕಿಸಬಹುದು.

'ಲೆಜೆಂಡ್ಸ್ ಪ್ರೀಮಿಯರ್ ಲೀಗ್ ಟಿ–10' ಕ್ರಿಕೆಟ್ ಪಂದ್ಯಾವಳಿಗೆ ಚಾಲನೆ

ದೈಹಿಕ ಸದೃಢತೆಗೆ ಕ್ರೀಡೆ ಅನಿವಾರ್ಯ: ಪ್ರೊ.ಲೋಕನಾಥ್

ಮೈಸೂರು, ಮೇ 20(ಎಸ್‌ಬಿಡಿ)– ದೈಹಿಕ ಸದೃಢತೆ ಕಾಯ್ದುಕೊಳ್ಳುವಲ್ಲಿ ಕ್ರೀಡೆ ಪ್ರಮುಖ ಪಾತ್ರ ವಹಿಸುತ್ತದೆ ಎಂದು ಮೈಸೂರು ವಿಶ್ವವಿದ್ಯಾನಿಲಯದ ಕುಲಪತಿ ಪ್ರೊ.ಎನ್.ಕೆ.ಲೋಕನಾಥ್ ಅಭಿಪ್ರಾಯಿಸಿದರು.

ಮೈಸೂರು ವಿವಿ ದೈಹಿಕ ಶಿಕ್ಷಣ ವಿಭಾಗ, ನವೋದಯ ಕ್ರಿಕೆಟ್ ಕ್ಲಬ್ ಹಾಗೂ ಜೈಹಿಂದ್ ಕ್ರಿಕೆಟ್ ಕ್ಲಬ್ ಸಹಯೋಗದೊಂದಿಗೆ ಆಯೋಜಿಸಲಾಗಿರುವ 'ಲೆಜೆಂಡ್ಸ್ ಪ್ರೀಮಿಯರ್ ಲೀಗ್ ಟಿ–10' ಎರಡು ದಿನಗಳ ಕ್ರಿಕೆಟ್ ಪಂದ್ಯಾವಳಿಗೆ ಮಾನಸಗಂಗೋತ್ರಿಯ ಎಸ್‌ಡಿಎನ್‌ಆರ್ ಒಡೆಯರ್ ಕ್ರೀಡಾಂಗಣದಲ್ಲಿ ಶನಿವಾರ ಚಾಲನೆ ನೀಡಿ, ಅವರು ಮಾತನಾಡಿದರು.

ಕ್ರಿಕೆಟ್ ಮಹತ್ವವನ್ನು ಪ್ರಸ್ತಾಪಿಸಿದ ಅವರು, ಕ್ರಿಕೆಟ್ ದೇಶದ ಕ್ರೀಡಾ ಪ್ರೇಮಿಗಳ ಅತ್ಯಂತ ನೆಚ್ಚಿನ ಕ್ರೀಡೆ. ಹಳ್ಳಿ, ನಗರದ ಗಲ್ಲಿ ಗಲ್ಲಿಗಳಲ್ಲೂ ಕ್ರಿಕೆಟ್ ಆಟವಾಡುತ್ತಿರುತ್ತಾರೆ. ನನಗೂ ಕ್ರಿಕೆಟ್ ಎಂದರೆ ಇಷ್ಟ, ನಾನೂ ಈ ಹಿಂದೆ ಆಟವಾಡುತ್ತಿದ್ದೆ. ಆದರೆ ನಂತರದಲ್ಲಿ ಕಾರ್ಯದೊತ್ತಡದಿಂದಾಗಿ ಕ್ರೀಡಾಂಗಣದಿಂದ ವಿಮುಖನಾಗಬೇಕಾಯ್ತು. ಉತ್ತಮ ಆರೋಗ್ಯಕ್ಕೆ ದೈಹಿಕ ಸದೃಢತೆ ತುಂಬಾ ಮುಖ್ಯ. ಇದು ಕ್ರಿಕೆಟ್‌ನಿಂದ ಸಿಗಲಿದೆ ಎಂದು ಅಭಿಪ್ರಾಯಿಸಿದರು.



ಮೈಸೂರು ವಿವಿ ಕುಲಪತಿ ಪ್ರೊ.ಎನ್.ಕೆ.ಲೋಕನಾಥ್ ಅವರು ಬ್ಯಾಟ್ ಬೀಸುವ ಮೂಲಕ 'ಲೆಜೆಂಡ್ಸ್ ಪ್ರೀಮಿಯರ್ ಲೀಗ್ ಟಿ–10' ಕ್ರಿಕೆಟ್ ಪಂದ್ಯಾವಳಿಗೆ ಶನಿವಾರ ಚಾಲನೆ ನೀಡಿದರು.

ವಿವಿಯ ಮಾಜಿ ಕ್ರಿಕೆಟ್ ತರಬೇತುದಾರ ಡಾ.ಮನ್ಸೂರ್ ಅಹ್ಮದ್ ಅವರನ್ನು ಉದ್ದೇಶಿಸಿ ಮಾತನಾಡಿದ ಕುಲಪತಿ ಪ್ರೊ.ಎನ್.ಕೆ.ಲೋಕನಾಥ್, ಶಿಕ್ಷಣ ತಜ್ಞರಂತೆ ಕ್ರೀಡಾ ತರಬೇತುದಾರರಿಗೂ ನಿವೃತ್ತಿ ಇರಬಾರದು. ಉತ್ತಮ ಕ್ರೀಡಾಪಟುಗಳನ್ನು ಸಜ್ಜುಗೊಳಿಸುವ ಕಾರ್ಯವನ್ನು ಮುಂದುವರೆಸಬೇಕೆಂದು ಸಲಹೆ ನೀಡಿದರು.

ರಾಜ್ಯ ಕ್ರಿಕೆಟ್ ಸಂಸ್ಥೆ (ಕೆಎಸ್‌ಸಿಎ) ಮೈಸೂರು ವಲಯದ ಸಂಚಾಲಕ ಹರಿಕೃಷ್ಣ ಕುಮಾರ್, ಲೆಜೆಂಡ್ಸ್ ಪ್ರೀಮಿಯರ್ ಲೀಗ್ ಆಯೋಜನೆ ಹಿಂದಿನ ಪ್ರಯತ್ನಗಳನ್ನು ತಿಳಿಸುವುದರ ಜೊತೆಗೆ, ಸಹಕರಿಸಿದ ವಿವಿ ದೈಹಿಕ ಶಿಕ್ಷಣ ನಿರ್ದೇಶಕ ಪಿ.ಕೃಷ್ಣಯ್ಯ, ನವೋದಯ ಕ್ರಿಕೆಟ್ ಕ್ಲಬ್‌ನ ಶ್ರೀನಿವಾಸ್ ಪ್ರಸಾದ್ ಇನ್ನಿತರರಿಗೆ ಧನ್ಯವಾದ ತಿಳಿಸಿದರು.

ಈ ವೇಳೆ ಪಂದ್ಯಾವಳಿಗೆ ಸಹಕಾರ ನೀಡಿರುವ ಸೇಪಿಯೆಂಟ್ ಎಜುಕೇಶನ್ ಟ್ರಸ್ಟ್‌ನ ಅಧ್ಯಕ್ಷ ದಲ್ಜೀತ್ ರಾಮ್, ಕ್ರಿಕೆಟಿಗ ಎಂ.ಆರ್.ಸುರೇಶ್, ಐಎಫ್ಐಎಂಇಡಿ ಫಾರ್ಮಾಸ್ಯುಟಿಕಲ್ಸ್ ಮತ್ತು ಐಡಿಯಾ ಇನ್ಫಿನಿಟಿ ಸಂಸ್ಥೆಯ ಪ್ರತಿನಿಧಿಗಳು ಉಪಸ್ಥಿತರಿದ್ದರು. ಪಂದ್ಯಾವಳಿಯನ್ನು ಎಸ್‌ಡಿಎನ್‌ಆರ್ ಒಡೆಯರ್ ಕ್ರೀಡಾಂಗಣ ಮತ್ತು ಶ್ರೀ ಜಯಚಾಮರಾಜೇಂದ್ರ ಎಂಜಿನಿಯರಿಂಗ್ ಕಾಲೇಜು (ಎಸ್‌ಜೆಸಿಇ) ಆವರಣದ ಕೆಎಸ್‌ಸಿಎ ಮೈದಾನದಲ್ಲಿ ಆಯೋಜಿಸಿದ್ದು, ಇಂದು 6 ಲೀಗ್ ಪಂದ್ಯಗಳು ನಡೆದಿವೆ. ಸೆಮಿಫೈನಲ್ ಹಾಗೂ ಫೈನಲ್ ಪಂದ್ಯಗಳು ಒಡೆಯರ್ ಕ್ರೀಡಾಂಗಣದಲ್ಲಿ ಭಾನುವಾರ ನಡೆಯಲಿದ್ದು, ಸಂಜೆ 4ಕ್ಕೆ ವಿಜೇತ ತಂಡಗಳಿಗೆ ಬಹುಮಾನ ವಿತರಿಸಲಾಗುವುದು.

ಸೆಮಿಫೈನಲ್ ಪ್ರವೇಶ

ಶನಿವಾರ ನಡೆದ ಲೀಗ್ ಪಂದ್ಯಗಳಲ್ಲಿ ಮಾಸ್ಟರ್ ಕ್ರಿಕೆಟ್ ಕ್ಲಬ್ ಶಿವಮೊಗ್ಗ ತಂಡದ ವಿರುದ್ಧ ದಿ ಮೈಸೂರ್ ಲ್ಯಾನ್ಸರ್ಸ್ ತಂಡ, ದಿ ಮೈಸೂರು ಮಹಾರಾಜಾಸ್ ವಿರುದ್ಧ ಟೀಮ್ ಮಹಾರಾಜ ಬೆಂಗಳೂರು, ಟೀಮ್ ತುಮಕೂರು ವಿರುದ್ಧ ದಿ ಮೈಸೂರ್ ಗ್ಲಾಡಿಯೇಟರ್ಸ್, ಮಾಸ್ಟರ್ ಕ್ರಿಕೆಟ್ ಕ್ಲಬ್ ಶಿವಮೊಗ್ಗ ವಿರುದ್ಧ ದಿ ಮೈಸೂರ್ ಮಹಾರಾಜಾಸ್, ಟೀಮ್ ತುಮಕೂರು ವಿರುದ್ಧ ದಿ ಮೈಸೂರ್ ಲ್ಯಾನ್ಸರ್ಸ್, ಮಾಸ್ಟರ್ ಕ್ರಿಕೆಟ್ ಕ್ಲಬ್ ಶಿವಮೊಗ್ಗ ವಿರುದ್ಧ ಟೀಮ್ ಮಹಾರಾಜ ಬೆಂಗಳೂರು ಹಾಗೂ ದಿ ಮೈಸೂರ್ ಲ್ಯಾನ್ಸರ್ ವಿರುದ್ಧ ದಿ ಮೈಸೂರ್ ಗ್ಲಾಡಿಯೇಟರ್ಸ್ ತಂಡಗಳು ಗೆಲುವು ಸಾಧಿಸಿದವು. ಇಂದು ಮೈಸೂರು ಗ್ಲಾಡಿಯೇಟರ್ಸ್ ಹಾಗೂ ಟೀಮ್ ಮಹಾರಾಜ ಬೆಂಗಳೂರು ತಂಡಗಳು ಸೆಮಿಫೈನಲ್ ಪ್ರವೇಶಿಸಿವೆ.

ಮೋದಿಯಂತೆ ಮೆಟ್ಟಿಲಿಗೆ ಹಣೆಮುಟ್ಟಿ ನಮಸ್ಕರಿಸಿ ವಿಧಾನಸೌಧ ಪ್ರವೇಶಿಸಿದ ಡಿ.ಕೆ.ಶಿವಕುಮಾರ್, ವಿಡಿಯೋ ವೈರಲ್!

ಬೆಂಗಳೂರು, ಮೇ 20– ಪ್ರಮಾಣ ವಚನ ಸ್ವೀಕಾರ ಸಮಾರಂಭದ ನಂತರ



ಕರ್ನಾಟಕ ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ತಮ್ಮ ಮೊದಲ ಸಂಪುಟ ಸಭೆಗೆ ವಿಧಾನಸೌಧಕ್ಕೆ ಆಗಮಿಸಿದರು.

ದಕ್ಷಿಣ ಭಾರತದ ರಾಜ್ಯದಲ್ಲಿ ಕಾಂಗ್ರೆಸ್ ಗೆಲುವಿನ ರೂವಾರಿಯಾಗಿದ್ದ ಶಿವಕುಮಾರ್ ವಿಧಾನ ಭವನದ ಎದುರು ಹಣೆ ಮುಟ್ಟಿ ನಮನ ಸಲ್ಲಿಸಿದರು. ನಂತರ ಮಾಧ್ಯಮದವರಿಗೆ ವಿಜಯದ ಚಿಹ್ನೆಯನ್ನು ತೋರಿಸಿ ವಿಧಾನಸೌಧ ಪ್ರವೇಶಿಸಿದರು.

ಇಂದು ಬೆಂಗಳೂರಿನ ಕಂಠೀರವ ಕ್ರೀಡಾಂಗಣದಲ್ಲಿ ಕಾಂಗ್ರೆಸ್ ನಾಯಕ ಡಿ.ಕೆ.ಶಿವಕುಮಾರ್ ಕರ್ನಾಟಕದ ಉಪ ಮುಖ್ಯಮಂತ್ರಿಯಾಗಿ ಪ್ರಮಾಣ ವಚನ ಸ್ವೀಕರಿಸಿದರು. ಸಿದ್ದರಾಮಯ್ಯ ಎರಡನೇ ಅವಧಿಗೆ ಮುಖ್ಯಮಂತ್ರಿಯಾಗಿ ಹಾಗೂ ಎಂಟು ಶಾಸಕರು ಸಚಿವರಾಗಿ ಪ್ರಮಾಣವಚನ ಸ್ವೀಕರಿಸಿದರು. ಸಚಿವರಾಗಿ ಪ್ರಮಾಣ ವಚನ ಸ್ವೀಕರಿಸಿದ ಶಾಸಕರು: ಜಿ.ಪರಮೇಶ್ವರ, ಕೆ.ಎಚ್.ಮುನಿಯಪ್ಪ, ಕೆ.ಜೆ.ಜಾರ್ಜ್, ಎಂ.ಬಿ.ಪಾಟೀಲ್, ಸತೀಶ್ ಜಾರಕಿಹೊಳಿ, ಪ್ರಿಯಾಂಕ್ ಖರ್ಗೆ, ರಾಮಲಿಂಗಾರೆಡ್ಡಿ ಮತ್ತು ಬಿ.ಜೆ.ಜಮೀರ್ ಅಹಮದ್ ಖಾನ್. ಕರ್ನಾಟಕದ ಉಪಮುಖ್ಯಮಂತ್ರಿಯಾಗಿ ಪ್ರಮಾಣ ವಚನ ಸ್ವೀಕರಿಸಿದ ಬಳಿಕ ಟ್ವೀಟ್ ಮಾಡಿರುವ ಶಿವಕುಮಾರ್, 'ನಮ್ಮ ಜನರ ಆಶೋತ್ತರಗಳನ್ನು ಈಡೇರಿಸಲು ಹೊಸ ಪಯಣ ಆರಂಭಿಸಿದ್ದು, ಕಾಂಗ್ರೆಸ್ ಸರ್ಕಾರ ನಿರಂತರ ಪ್ರಗತಿ ಮತ್ತು ಎಲ್ಲರ ಕಲ್ಯಾಣಕ್ಕೆ ಭರವಸೆ ನೀಡಲಿದೆ' ಎಂದು ಭರವಸೆ ನೀಡಿದ್ದಾರೆ. 'ಕರ್ನಾಟಕದ ಜನರ ಅಗಾಧ ಬೆಂಬಲ ಮತ್ತು ಪ್ರೀತಿಗಾಗಿ ನಾನು ಅವರಿಗೆ ಧನ್ಯವಾದಗಳು' ಎಂದು ಟ್ವೀಟಿಸಿದ್ದಾರೆ.

ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಮತ್ತು ಪಕ್ಷದ ನಾಯಕರಾದ ರಾಹುಲ್ ಗಾಂಧಿ ಮತ್ತು ಪ್ರಿಯಾಂಕಾ ಗಾಂಧಿ ವಾದ್ರಾ ಅವರೊಂದಿಗೆ ಹಲವಾರು ಪ್ರಾದೇಶಿಕ ನಾಯಕರು ವೇದಿಕೆ ಹಂಚಿಕೊಂಡಿದ್ದರಿಂದ ಪ್ರಮಾಣ ವಚನ ಸಮಾರಂಭವು ವಿರೋಧ ಪಕ್ಷಗಳ ಶಕ್ತಿ ಪ್ರದರ್ಶನವಾಗಿ ಮಾರ್ಪಟ್ಟಿತು. ಪ್ರಮಾಣ ವಚನ ಸಮಾರಂಭದಲ್ಲಿ ಬಿಹಾರ ಮುಖ್ಯಮಂತ್ರಿ ನಿತೀಶ್ ಕುಮಾರ್, ರಾಷ್ಟ್ರೀಯವಾದಿ ಕಾಂಗ್ರೆಸ್ ಪಕ್ಷದ ಅಧ್ಯಕ್ಷ ಶರದ್ ಪವಾರ್, ತಮಿಳುನಾಡು ಮುಖ್ಯಮಂತ್ರಿ ಎಂಕೆ ಸ್ಟಾಲಿನ್ ಮತ್ತು ನ್ಯಾಷನಲ್ ಕಾನ್ಫರೆನ್ಸ್ ಅಧ್ಯಕ್ಷ ಫಾರೂಕ್ ಅಬ್ದುಲ್ಲಾ ಉಪಸ್ಥಿತರಿದ್ದರು. ಪಿಡಿಪಿ ಮುಖ್ಯಸ್ಥೆ ಮೆಹಬೂಬಾ ಮುಫ್ತಿ, ಕಾಂಗ್ರೆಸ್ ಆಡಳಿತವಿರುವ ರಾಜ್ಯಗಳ ಮುಖ್ಯಮಂತ್ರಿಗಳಾದ ಭೂಪೇಶ್ ಬಾಘೇಲ್ (ಛತ್ತೀಸ್‌ಗಢ), ಅಶೋಕ್ ಗೆಹ್ಲೋಟ್ (ರಾಜಸ್ಥಾನ) ಮತ್ತು ಸುಖ್ವಿಂದರ್ ಸಿಂಗ್ ಸುಖು (ಹಿಮಾಚಲ ಪ್ರದೇಶ) ಮತ್ತು ಬಿಹಾರ ಉಪ ಮುಖ್ಯಮಂತ್ರಿ ತೇಜಸ್ವಿ ಯಾದವ್ (ಆರ್‌ಜೆಡಿ) ಸಹ ಉಪಸ್ಥಿತರಿದ್ದರು.

ಐದು ಗ್ಯಾರಂಟಿಗಳಿಗೆ ತಾತ್ವಿಕ ಒಪ್ಪಿಗೆ, ಮುಂದಿನ ಸಂಪುಟ ಸಭೆ ಬಳಿಕ ಅಧಿಕೃತ ಘೋಷಣೆ

ಬೆಂಗಳೂರು, ಮೇ 20–ಮೊದಲ ಸಚಿವ ಸಂಪುಟ ಸಭೆಯಲ್ಲೇ ಐದು ಗ್ಯಾರಂಟಿಗಳಿಗೆ ತಾತ್ವಿಕ ಅನುಮೋದನೆ ಪಡೆಯಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಘೋಷಣೆ ಮಾಡಿದರು. ಮೊದಲ ಸಚಿವ ಸಂಪುಟ ಸಭೆ ಬಳಿಕ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಸಿದ್ದರಾಮಯ್ಯ, ಐದು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಕುರಿತಂತೆ ಹೆಚ್ಚಿನ ವಿವರಗಳು ಹಾಗೂ ಗ್ಯಾರಂಟಿಗಳಿಗೆ ಇರುವ ಷರತ್ತುಗಳು ಮತ್ತು ನಿಯಮಗಳನ್ನು ಮುಂದಿನ ಸಭೆಗಳಲ್ಲಿ ಚರ್ಚಿಸಿ ಅಂತಿಮ ತೀರ್ಮಾನ ಕೈಗೊಳ್ಳಲಾಗುವುದು ಎಂದು ಹೇಳಿದರು.

ಗೃಹಜ್ಯೋತಿ ಯೋಜನೆಯಡಿ ಪ್ರತಿ ಮನೆಗೂ 200 ಯೂನಿಟ್ ಉಚಿತ ವಿದ್ಯುತ್, ಗೃಹಲಕ್ಷ್ಮೀ ಯೋಜನೆಯಡಿ ಮನೆ ಯಜಮಾನಿಗೆ ಪ್ರತಿ ತಿಂಗಳು 2000 ರೂಪಾಯಿ ನೀಡಲಾಗುವುದು. ಅನ್ನಭಾಗ್ಯ ಯೋಜನೆಯಡಿ ಪ್ರತಿ ವ್ಯಕ್ತಿಗೆ 10 ಕೆ.ಜಿ ಅಕ್ಕಿ, ಶಕ್ತಿ ಯೋಜನೆಯಡಿ ಮಹಿಳೆಯರಿಗೆ ಉಚಿತ ಬಸ್ ಪ್ರಯಾಣ, ನಿರುದ್ಯೋಗಿ ಪದವೀಧರರಿಗೆ ಪ್ರತಿ ತಿಂಗಳಿಗೆ 3000 ರೂಪಾಯಿ, ನಿರುದ್ಯೋಗಿ ಡಿಪ್ಲೋಮಾ ಪದವೀಧರರಿಗೆ ತಿಂಗಳಿಗೆ 1500 ರೂ. ನೀಡಲಾಗುವುದು ಎಂದು ಸಿದ್ದರಾಮಯ್ಯ ಘೋಷಿಸಿದರು. ಸುದ್ದಿಗೋಷ್ಠಿ ವೇಳೆ ಕೇಂದ್ರ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದ ಸಿದ್ದರಾಮಯ್ಯ ಅವರು, ಪ್ರಧಾನಿ ಮೋದಿ ಸೇರಿದಂತೆ ಬಿಜೆಪಿ ನಾಯಕರು ಕಾಂಗ್ರೆಸ್‌ನ ಗ್ಯಾರಂಟಿಗಳ ವಿರುದ್ಧ ಕಿಡಿಕಾರಿದ್ದರು. ಈ ಯೋಜನೆಗಳನ್ನು ಅನುಷ್ಠಾನ ಮಾಡಿದ್ದೇ ಆದರೆ ರಾಜ್ಯ ದಿವಾಳಿಯಾಗುತ್ತದೆ ಎಂದು ಹೇಳಿದ್ದರು. ಆದರೆ ಯಾವುದೇ ಆರ್ಥಿಕ ದಿವಾಳಿ ಆಗದಂತೆ ಯೋಜನೆಗಳನ್ನು ಜಾರಿಗೆ ತರುತ್ತೇವೆ ಎಂದರು.

ಹಿಂದಿನ ಸರ್ಕಾರ ಯೂಸ್‌ಲೆಸ್: ಕೇಂದ್ರ ಸರ್ಕಾರದಿಂದ ನಮ್ಮ ಪಾಲಿನ ತೆರಿಗೆ ಪಾಲನ್ನು ಸರಿಯಾಗಿ ಪಡೆಯದ ಹಿಂದಿನ ಬಿಜೆಪಿ ಸರ್ಕಾರ 'ಯೂಸ್ ಲೆಸ್' ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ವಾಗ್ದಾಳಿ ನಡೆಸಿದ್ದಾರೆ.

ಹಣಕಾಸು ಆಯೋಗದ ಶಿಫಾರಸಿನಂತೆ ಕೇಂದ್ರ ಸರ್ಕಾರ ನಮಗೆ 5,495 ಕೋಟಿ ರೂ. ಕೊಡಬೇಕಿತ್ತು. ಆದರೆ ಹಿಂದಿನ ರಾಜ್ಯ ಸರ್ಕಾರ ಅದನ್ನು ಪಡೆಯಲಿಲ್ಲ. ನಿರ್ಮಲಾ ಸೀತಾರಾಮನ್ ಕರ್ನಾಟಕದಿಂದ ರಾಜ್ಯಸಭಾ ಸದಸ್ಯರಾಗಿದ್ದಾರೆ. ಅವರು ಹಾಗೂ ಪ್ರಧಾನಿ ನರೇಂದ್ರ ಮೋದಿಯ ಕಾರಣದಿಂದಾಗಿ ಕರ್ನಾಟಕಕ್ಕೆ ನಷ್ಟವಾಯಿತು ಎಂದರು. ಜಿಎಸ್‌ಟಿ ಮೂಲಕ ಕೇಂದ್ರಕ್ಕೆ ಹೆಚ್ಚಿನ ತೆರಿಗೆ ಹೋಗುತ್ತಿದೆ. ಬೇರೆ ರಾಜ್ಯಗಳಿಗೆ ಹೋಲಿಕೆ ಮಾಡಿದರೆ ನಮಗೆ ಅನ್ಯಾಯವಾಗಿದೆ. ಬಸವರಾಜ ಬೊಮ್ಮಾಯಿ ಜಿಎಸ್‌ಟಿ ಕೌನ್ಸಿಲ್ ಸದಸ್ಯರಾಗಿದ್ದರೂ ನಮ್ಮ ತೆರಿಗೆ ಪಾಲನ್ನು ಸರಿಯಾಗಿ ಪಡೆಯಲಿಲ್ಲ. ಇದರಿಂದ ರಾಜ್ಯಕ್ಕೆ ಅನ್ಯಾಯವಾಗಿದೆ ಎಂದು ಆರೋಪಿಸಿದರು.

ಕರ್ನಾಟಕದಿಂದ 4 ಲಕ್ಷ ಕೋಟಿ ರೂ. ತೆರಿಗೆ ಕಟ್ಟುತ್ತೇವೆ. ನಮ್ಮ ರಾಜ್ಯದ ಬಜೆಟ್ ಗಾತ್ರ 3.10 ಲಕ್ಷ ಕೋಟಿ ರೂ. ಇದೆ. ಕೇಂದ್ರದಿಂದ ಈ ವರ್ಷ 50 ಸಾವಿರ ಕೋಟಿ ರೂ. ಬರಬೇಕಿದೆ. ಜೊತೆಗೆ ಕಟ್ಟು ನಿಟ್ಟಾದ ತೆರಿಗೆ ಸಂಗ್ರಹ ಮೂಲಕ ಐದು ಗ್ಯಾರಂಟಿಗಳನ್ನು ಅನುಷ್ಠಾನ ಮಾಡಲಾಗುವುದು ಎಂದು ಮುಖ್ಯಮಂತ್ರಿ ತಿಳಿಸಿದರು.

ಮೂರನೇ ಪುಟದಿಂದ

ಐದು ಗ್ಯಾರಂಟಿಗಳಿಗೆ ಸಂಪುಟ ಗ್ಯಾರಂಟಿ

ಪರ್ಯಾಯ ಸಂಪನ್ಮೂಲ ಕ್ರೋಢೀಕರಿಸಿ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸುತ್ತೇವೆ. ಪ್ರಸಕ್ತ ಬಜೆಟ್ ಗಾತ್ರವನ್ನು 3.10 ರಿಂದ 3.25ಕ್ಕೆ ಹೆಚ್ಚಿಸುವ ಉದ್ದೇಶದಿಂದ ನಮ್ಮ ಸರ್ಕಾರ ಹೊಸದಾಗಿ ಮುಂಗಡ ಪತ್ರವನ್ನು ಜುಲೈನಲ್ಲಿ ಮಂಡಿಸಲಿದೆ. ಇದರಿಂದ 15 ಸಾವಿರ ಕೋಟಿ ರೂ. ಹೆಚ್ಚಿನ ತೆರಿಗೆ ವಸೂಲಿ ಆಗಲಿದೆ. ಅನಗತ್ಯ ದುಂದುವೆಚ್ಚಗಳಿಗೆ ಕಡಿವಾಣ ಹಾಕಿ ತೆರಿಗೆ ವಸೂಲಿಗೆ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳುವುದರಿಂದ ನಮ್ಮ ಸಂಪನ್ಮೂಲದ ಕ್ರೋಢೀಕರಣ ಹೆಚ್ಚಲಿದೆ. ಇನ್ನು ಮುಂದೆ ಸಾಲ ಪಡೆ ಯುವುದನ್ನು ಕಡಿಮೆ ಮಾಡುವುದ ರಿಂದಲೂ ಒಂದಷ್ಟು ಉಳಿ ತಾಯವಾಗಲಿದೆ. ನಾವು ಗ್ಯಾರಂಟಿಗೆ ನಿಗದಿಪಡಿಸಿದ ಹಣವನ್ನು ಪರ್ಯಾಯ ಮೂಲಗಳಿಂದ ಸಂಗ್ರಹಿಸುತ್ತೇವೆ. ನಮ್ಮದು ನುಡಿದಂತೆ ನಡೆಯುವ ಸರ್ಕಾರ. ಯಾರಿಗೂ ನಮ್ಮ ಯೋಜನೆಗಳ ಬಗ್ಗೆ ಅನುಮಾನ ಬೇಡ. ಈ 5 ಗ್ಯಾರಂಟಿಗಳ ಬಗ್ಗೆ ಮುಂದಿನ ಸಂಪುಟ ಸಭೆಯಲ್ಲಿ ಚರ್ಚಿಸಿ, ಹಣ ನಿಗದಿಗೊಳಿಸಿ ಯೋಜನೆಗಳ ಅನುಷ್ಠಾನದ ಆದೇಶ ಹೊರಬೀಳಲಿದೆ. ಡಬಲ್ ಎಂಜಿನ್ ಸರ್ಕಾರ ಈಗಾಗಲೇ ಬಹಳಷ್ಟು ಸಾಲ ಮಾಡಿ ಬಡ್ಡಿ ಕಟ್ಟುವಂತೆ ಮಾಡಿದೆ. ಹೊಸದಾಗಿ ತೆರಿಗೆ ವಿಧಿಸುವ ಅವಕಾಶವಿಲ್ಲದಂತೆ ಮಾಡಿದೆ. ಅದರಲ್ಲೂ ಸೀಮಿತ ವಲಯದಲ್ಲಿ ಮಾತ್ರ ರಾಜ್ಯಕ್ಕೆ ತೆರಿಗೆ ಸಂಗ್ರಹಿಸುವ ಅವಕಾಶವಿದೆ. ಇಷ್ಟೆಲ್ಲಾ ಅಡೆ–ತಡೆಯ ನಡುವೆಯೂ ಬೊಕ್ಕಸದ ಮೇಲೆ ಪರಿಣಾಮ ಬೀರದಂತೆ ಗಮನವಿಟ್ಟು ನಾವು ನೀಡಿರುವ 5 ಗ್ಯಾರಂಟಿಗಳನ್ನು ಜನರ ಮಡಿಲಿಗೆ ಹಾಕುತ್ತೇವೆ.

ಪ್ರತಿ ಮನೆಗೂ 200 ಯುನಿಟ್ ಉಚಿತ ವಿದ್ಯುತ್ ನೀಡುವುದರಿಂದ ಮಾಸಿಕ 1200 ಕೋಟಿ ರೂ. ಹೊರೆಯಾಗಲಿದೆ. ಇನ್ನು ಗೃಹಲಕ್ಷ್ಮಿ ಯೋಜನೆಯಡಿ ಪ್ರತಿ ಮನೆಯ ಒಡತಿಗೆ ಮಾತ್ರ ಮಾಸಿಕ ಎರಡು ಸಾವಿರ ರೂ. ನೀಡಲಾಗುವುದು.

ಅನ್ನ ಭಾಗ್ಯ ಯೋಜನೆಯಡಿ ನೀಡುತ್ತಿದ್ದ 7 ಕೆ.ಜಿ. ಅಕ್ಕಿಯನ್ನು 10 ಕೆ.ಜಿ.ಗೆ ಹೆಚ್ಚಿಸಿದ್ದೇವೆ. ಪ್ರಸಕ್ತ ಶೈಕ್ಷಣಿಕ ವರ್ಷದಲ್ಲಿ ವಿವಿಧ ಪದವಿ ಮತ್ತು ಡಿಪ್ಲೊಮಾ ಪಡೆದು ನಿರುದ್ಯೋಗಿಯಾಗಿರುವವರಿಗೆ ಅನುಕ್ರಮವಾಗಿ 3000 ರೂ. ಹಾಗೂ 1500 ರೂ.ಗಳನ್ನು ಎರಡು ವರ್ಷದವರೆಗೆ ಮಾತ್ರ ನೀಡುತ್ತೇವೆ. ಒಂದು ವೇಳೆ ನಿರುದ್ಯೋಗಿಗಳಿಗೆ ಉದ್ಯೋಗ ದೊರೆತ ಕೂಡಲೇ ಭತ್ಯೆ ಸ್ಥಗಿತಗೊಳ್ಳಲಿದ್ದು, ಇದು ಹೇಗೆ ಎಂಬುದರ ವಿವರ ಆದೇಶದಲ್ಲಿ ಹೊರಡಿಸಲಾಗುವುದು.

ಸರ್ಕಾರದ ಸಾಮಾನ್ಯ ಬಸ್ಸುಗಳಲ್ಲಿ ಕರ್ನಾಟಕದ ಮಹಿಳೆಯರು ಮಾತ್ರ ಉಚಿತವಾಗಿ ಪ್ರಯಾಣಿಸಲು ಪಾಸ್ ನೀಡಲಾಗುವುದು. ಇಂದಿನ ಸಂಪುಟ ಸಭೆಯಲ್ಲಿ ಗ್ಯಾರಂಟಿ ಯೋಜನೆಗಳ ಅನುಷ್ಠಾನಕ್ಕೆ ಸಂಬಂಧಿಸಿದಂತೆ ಸುದೀರ್ಘ ಚರ್ಚೆ ನಡೆಸಿ ಅನುಷ್ಠಾನಕ್ಕೆ ತಾತ್ವಿಕ ಒಪ್ಪಿಗೆ ನೀಡಿದ್ದೇವೆ. ಮುಂದಿನ ಸಂಪುಟಸಭೆಯಲ್ಲಿ ಈ ಯೋಜನೆಗಳ ಅನುಷ್ಠಾನದ ರೀತಿ ನೀತಿಗಳನ್ನು ರೂಪಿಸಿ ತಕ್ಷಣವೇ ಜಾರಿಗೊಳಿಸುವುದಾಗಿ ಸಿದ್ದರಾಮಯ್ಯ ತಿಳಿಸಿದರು. ಇಂದಿರಾ ಕ್ಯಾಂಟಿನ್‌ಗಳನ್ನು ಪುನಶ್ಚೇತನಗೊಳಿಸಲು ಸಂಪುಟ ಸಭೆಯಲ್ಲಿ ನಿರ್ಣಯಿಸಲಾಗಿದೆ ಎಂದು ಅವರು ಹೇಳಿದರು.

'ಮಿಷನ್ ಇನ್ನೋವೇಶನ್ ಮೈಸೂರು' ಸಮಾರೋಪ

ಆರ್ಥಿಕತೆ ಉತ್ತಮಪಡಿಸಲು ನವೋದ್ಯಮಗಳಿಗೆ ಉತ್ತೇಜನ ಅಗತ್ಯ

ಉದ್ಯೋಗಕ್ಕಾಗಿ ಮಹಾನಗರಗಳಿಗೆ ವಲಸೆಯೂ ತಪ್ಪಲಿದೆ; ಮೈಸೂರು ರಾಜವಂಶಸ್ಥ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್ ಅಭಿಮತ

ಮೈಸೂರು, ಮೇ 20(ಪಿಎಂ)– ಮೈಸೂರಿನಲ್ಲಿ ನವೋದ್ಯಮಗಳಿಗೆ (ಸ್ಟಾರ್ಟ್‌ಅಪ್) ಉತ್ತೇಜನ ನೀಡುವ ಮೂಲಕ ಮೈಸೂರಿನ ಆರ್ಥಿಕ ಪರಿಸ್ಥಿತಿ ಉತ್ತಮಗೊಳಿಸಲು ಸಾಧ್ಯವಿದೆ. ಅಲ್ಲದೆ, ಮೈಸೂರು ಗ್ರಾಮೀಣ ಪ್ರದೇಶದ ಯುವ ಜನತೆ ಬೆಂಗಳೂರು ಸೇರಿದಂತೆ ದೇಶದ ವಿವಿಧ ಮಹಾನಗರಗಳಿಗೆ ಉದ್ಯೋಗಕ್ಕಾಗಿ ವಲಸೆ ಹೋಗುವುದು ತಪ್ಪಲಿದೆ ಎಂದು ಮೈಸೂರು ರಾಜವಂಶಸ್ಥ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್ ಅಭಿಪ್ರಾಯಪಟ್ಟರು.

ಮೈಸೂರಿನ ಮಾನಸ ಗಂಗೋತ್ರಿಯ ರಾಣಿ ಬಹದ್ದೂರ್ ಸಭಾಂಗಣದಲ್ಲಿ ಮೈಸೂರು ವಿವಿ ಯೂನಿವರ್ಸಿಟಿ ಕೆರಿಯರ್ ಹಬ್, ಬೆಂಗಳೂರಿನ ರೀಪ್ ಬೆನಿಫಿಟ್ ಫೌಂಡೇಷನ್ ಜಂಟಿ ಆಶ್ರಯದಲ್ಲಿ ಶನಿವಾರ ಹಮ್ಮಿಕೊಂಡಿದ್ದ 'ಮಿಷನ್ ಇನ್ನೋವೇಶನ್ ಮೈಸೂರು' ಕಾರ್ಯಕ್ರಮದ (ಮೈಸೂರು ವಿವಿ ಸಮಾಜ ಕಾರ್ಯ ವಿಭಾಗದ ವಿದ್ಯಾರ್ಥಿಗಳಲ್ಲಿ ಸಾಮಾಜಿಕ ಉದ್ಯಮ ಪರಿಕಲ್ಪನೆ ಬೆಳೆಸುವ 6 ತಿಂಗಳ ಕಾರ್ಯಕ್ರಮ) ಸಮಾರೋಪ ಸಮಾರಂಭದಲ್ಲಿ ಅವರು ಮಾತನಾಡಿದರು.

ಸ್ಟಾರ್ಟ್‌ಅಪ್, ಇನ್ನೋವೇಷನ್ ಮೂಲಕ ಮೈಸೂರಿನ ಆರ್ಥಿಕ ಪರಿಸ್ಥಿತಿ ಉತ್ತಮಗೊಳಿಸಲು ಸಾಧ್ಯವಿದೆ. ಪ್ರವಾಸೋದ್ಯಮದ ಮೇಲೆ ಮೈಸೂರು ಆರ್ಥಿಕತೆ ಅವಲಂಬಿಸುವುದು ಕಷ್ಟ. ಕಾರಣ ಅದು ಕೆಲ ಋತುಮಾನಕ್ಕೆ ಸೀಮಿತವಾಗಿದೆ. ಹಾಗಾಗಿ ಇಲ್ಲಿನ ಸ್ಟಾರ್ಟ್‌ಅಪ್, ಇನ್ನೋವೇಷನ್‌ಗೆ ಉತ್ತೇಜನ ನೀಡಿದರೆ, ಆರ್ಥಿಕತೆ ಉತ್ತಮವಾಗುತ್ತದೆ. ಜೊತೆಗೆ ಮೈಸೂರಿನ ಗ್ರಾಮೀಣ ಪ್ರದೇಶಗಳಿಂದ ಉದ್ಯೋಗಕ್ಕಾಗಿ ಬೆಂಗಳೂರು ಮೊದಲಾದ ಮಹಾನಗರಗಳಿಗೆ ವಲಸೆ ಹೋಗುವುದು ತಪ್ಪುತ್ತದೆ. ಇದರಿಂದ ಸ್ಥಳೀಯ ಯುವ ಜನರು ತಮ್ಮ ಪ್ರದೇಶದಲ್ಲೇ ಉಳಿದು ಬದುಕು ಕಟ್ಟಿಕೊಳ್ಳಲು ಸಹಕಾರಿಯಾಗಲಿದೆ ಎಂದು ಹೇಳಿದರು.



ಮೈಸೂರಿನ ಮಾನಸ ಗಂಗೋತ್ರಿಯ ರಾಣಿ ಬಹದ್ದೂರ್ ಸಭಾಂಗಣದ ಆವರಣದಲ್ಲಿ ಎಂಎಸ್‌ಡಬ್ಲ್ಯೂ ವಿದ್ಯಾರ್ಥಿಗಳು ಪ್ರದರ್ಶಿಸಿದ್ದ ವಿವಿಧ ವಿಷಯಗಳ ಕುರಿತ ಪೋಸ್ಟರ್‌ಗಳನ್ನು ವೀಕ್ಷಿಸಿದ ಮೈಸೂರು ರಾಜ ವಂಶಸ್ಥ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್, ಕಾರ್ಯಚಟುವಟಿಕೆಗಳ ಬಗ್ಗೆ ಮಾಹಿತಿ ಪಡೆದರು.

ಮೈಸೂರು ಇದೀಗ ಸ್ಟಾರ್ಟ್‌ಅಪ್ ಹಬ್ ಆಗಿ ಬೆಳವಣಿಗೆ ಕಾಣುತ್ತಿದೆ. ಈಗ ಮೈಸೂರು–ಬೆಂಗಳೂರು ಸಂಪರ್ಕ ಸುಲಭ ಸಾಧ್ಯವಾಗಿದೆ. ಪ್ರಯಾಣದ ಸಮಯ ಕಡಿಮೆಯಾಗಿದೆ. ಜೊತೆಗೆ ಮೈಸೂರಿನಲ್ಲಿ ಎಲ್ಲಾ ರೀತಿಯ ಮೂಲಸೌಕರ್ಯ ಬೆಳವಣಿಗೆ ಕಾಣುತ್ತಿದೆ. ಸ್ಟಾರ್ಟ್‌ಅಪ್ ವಲಯಕ್ಕೆ ಸರ್ಕಾರದಿಂದ ದೊರೆಯುವ ಸೌಲಭ್ಯಗಳ ಬಗ್ಗೆ ತಿಳಿದುಕೊಳ್ಳುವುದು ಮುಖ್ಯ. ಆಗಾಗ್ಗೆ ಹೊರಬರುವ ನೀತಿ–ನಿಯಮಗಳ ಬಗ್ಗೆಯೂ ನಿಗಾ ಇಡುವುದು ಅಗತ್ಯ. ಇದು ನಿಮ್ಮ ಉದ್ಯಮಗಳ ಬೆಳವಣಿಗೆಗೆ ಸಹಕಾರಿ. 'ಮಿಷನ್ ಇನ್ನೋವೇಶನ್ ಮೈಸೂರು' ಕಾರ್ಯಕ್ರಮದ ಮೂಲಕ ನವೋದ್ಯಮಗಳು ಹೊರಹೊಮ್ಮುತ್ತಿರುವುದು ಸಂತಸದ ಸಂಗತಿ. ನಮ್ಮ ಬೇರುಂಡ ಪ್ರತಿಷ್ಠಾನ ಸಹ ಇಂತಹ ಕಾರ್ಯಕ್ರಮಗಳಿಗೆ ಅಗತ್ಯ ಸಹಕಾರ ನೀಡಲಿದೆ ಎಂದು ತಿಳಿಸಿದರು.

ಈ ರೀತಿ ಯುವ ಜನತೆಯಲ್ಲಿ ಸಾಮಾಜಿಕ ನವೋದ್ಯಮ ಪರಿಕಲ್ಪನೆ ಬೆಳೆಸುವುದರಿಂದ ಭವಿಷ್ಯದ ಸಮಾಜದಲ್ಲಿ ಉದ್ಭವಿಸುವ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಲು ಸಾಧ್ಯವಾಗಲಿದೆ. ವಿವಿಧ ಕ್ಷೇತ್ರಗಳು ಒಂದಕ್ಕೊಂದು ಅಂತರ್ ಸಂಪರ್ಕ ಹೊಂದಿರುತ್ತವೆ. ಹಾಗಾಗಿ ಸಮನ್ವಯತೆಯಿಂದ ಕೆಲಸ ಮಾಡುವ ಬಗ್ಗೆ ಹೆಚ್ಚು ಗಮನ ನೀಡಬೇಕಾಗುತ್ತದೆ. ಸೂಕ್ತ ಶಿಕ್ಷಣ ಮತ್ತು ಅರಿವಿನ ಕೊರತೆ ಕಾರಣಕ್ಕೆ ಪರಿಸರ ಮತ್ತು ಆರೋಗ್ಯ ಕ್ಷೇತ್ರಗಳಲ್ಲಿ ಮಾನವನ ಚಟುವಟಿಕೆಗಳು ಹಾನಿಕಾರಕವಾಗುತ್ತಿರುವುದು ಹೆಚ್ಚಾಗುತ್ತಿದೆ. ಇದರಿಂದ ಸಾಕಷ್ಟು ಸಮಸ್ಯೆಗಳು ಉದ್ಭವಿಸುತ್ತಿವೆ. ಹಾಗಾಗಿ ಸಮನ್ವಯತೆ ಮೂಲಕ ಪರಿಸರ, ಆರೋಗ್ಯ ಕ್ಷೇತ್ರದಲ್ಲಿನ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಬೇಕಿದೆ ಎಂದು ತಿಳಿಸಿದರು.

'ಮೈಸೂರು ಮಿತ್ರ'ನೊಂದಿಗೆ ಮಾತನಾಡಿದ ಮೈಸೂರು ವಿವಿ ಯೂನಿವರ್ಸಿಟಿ ಕೆರಿಯರ್ ಹಬ್ ಸಂಚಾಲಕಿ ಎಲ್.ಹಂಸವೇಣಿ, ಈ ಕಾರ್ಯಕ್ರಮವು 2022ರ ಜುಲೈಯಿಂದ ಮೂರು ಹಂತದಲ್ಲಿ ನಡೆದಿದೆ. ಇದೀಗ ಸಮಾರೋಪ ಸಮಾರಂಭದ ಹಂತಕ್ಕೆ ಬಂದಿದೆ. ಮೈಸೂರು ಮಾನಸ ಗಂಗೋತ್ರಿ, ಮಂಡ್ಯದ ಸರ್ ಎಂ.ವಿಶ್ವೇಶ್ವರಯ್ಯ ಸ್ನಾತಕೋತ್ತರ ಕೇಂದ್ರ, ಚಾಮರಾಜನಗರದ ಡಾ.ಬಿ.ಆರ್.ಅಂಬೇಡ್ಕರ್ ಕಾಲೇಜು ಮತ್ತು ಕೆಆರ್ ನಗರ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಸಮಾಜ ಕಾರ್ಯ ವಿಭಾಗದ (ಎಂಎಸ್‌ಡಬ್ಲ್ಯೂ) ಒಟ್ಟು 103 ವಿದ್ಯಾರ್ಥಿಗಳು ಇದರಲ್ಲಿ ಭಾಗವಹಿಸಿದ್ದರು ಎಂದು ಹೇಳಿದರು.

ಈ ವಿದ್ಯಾರ್ಥಿಗಳು ಗ್ರಾಮೀಣ ಭಾಗದ ನಾಗರಿಕ ಸಮಸ್ಯೆ, ಸರ್ಕಾರಿ ಯೋಜನೆಗಳ ಕುರಿತು ಅಧ್ಯಯನ ನಡೆಸಿ 15ಕ್ಕೂ ಹೆಚ್ಚು ಸಮಸ್ಯೆಗಳನ್ನು ಗುರುತಿಸಿ, ಅವುಗಳಿಗೆ ಪರಿಹಾರ ಕಂಡುಹಿಡಿದಿದ್ದಾರೆ. ಇದೀಗ ಮೂರು ಎನ್‌ಜಿಓ ಸ್ಥಾಪನೆಗೆ 15 ವಿದ್ಯಾರ್ಥಿಗಳು ಸಿದ್ಧವಾಗಿದ್ದಾರೆ ಎಂದರು.

ಭಾಗವಹಿಸಿದ್ದ 103 ವಿದ್ಯಾರ್ಥಿಗಳ ಪೈಕಿ ಒಟ್ಟು 15 ಸದಸ್ಯರು ತಮ್ಮ ಸಂಸ್ಥೆಗಳನ್ನು (3 ತಂಡಗಳು) ಪ್ರಾರಂಭಿಸಬೇಕೆಂಬ ಆಸಕ್ತಿ ಹೊಂದಿದ್ದಾರೆ. ಉಳಿದ 88 ವಿದ್ಯಾರ್ಥಿಗಳು ತಮ್ಮ ತಮ್ಮ ತಂಡಗಳಿಗೆ ಸಂಸ್ಥೆಯ ಸ್ವರೂಪ ನೀಡುವ ಸಂಬಂಧ ಮುಂದೆ ನಿರ್ಧರಿಸಲಿದ್ದಾರೆ. ಸಂಸ್ಥೆಗಳಾಗಿ ಹೊರಹೊಮ್ಮುತ್ತಿರುವ ತಂಡಗಳು ಸಾಮಾಜಿಕ ಉದ್ಯಮಗಳಾಗಿ ಕಾರ್ಯನಿರ್ವಹಿಸಲಿದ್ದು, ಈ ತಂಡಗಳಿಗೆ ನಮ್ಮ ಫೌಂಡೇಷನ್ ಮುಂದೆಯೂ ಅಗತ್ಯ ಸಹಕಾರ ನೀಡಲಿದೆ

-ಎ.ಆರ್.ಅಶಿಶ್, ಹಿರಿಯ ಕಾರ್ಯಕ್ರಮ ವ್ಯವಸ್ಥಾಪಕರು, ರೀಪ್ ಬೆನಿಫಿಟ್ ಫೌಂಡೇಷನ್, ಬೆಂಗಳೂರು.

ಗ್ರಾಮ ಮಿತ್ರ (ಚಾಮರಾಜನಗರದ ಡಾ.ಬಿ.ಆರ್.ಅಂಬೇಡ್ಕರ್ ಸ್ನಾತಕೋತ್ತರ ಕೇಂದ್ರದ ವಿದ್ಯಾರ್ಥಿಗಳ ತಂಡ), ಕೇರ್ ಫಾರ್ ಯು (ಮಂಡ್ಯದ ತೂಬಿನಕೆರೆಯ ಸರ್ ಎಂ.ವಿಶ್ವೇಶ್ವರಯ್ಯ ಸ್ನಾತಕೋತ್ತರ ಕೇಂದ್ರದ ವಿದ್ಯಾರ್ಥಿಗಳ ತಂಡ) ಹಾಗೂ ಸೇವ್ ಲೈಬ್ರರೀಸ್ (ಮೈಸೂರು ವಿವಿ ಮಾನಸ ಗಂಗೋತ್ರಿಯ ಎಂಎಸ್‌ಡಬ್ಲ್ಯೂ ವಿದ್ಯಾರ್ಥಿಗಳ ತಂಡ) ತಂಡಗಳು ವಿವಿಧ ಸಮಸ್ಯೆಗಳ ಕುರಿತು ಅಧ್ಯಯನ ನಡೆಸಿ, ಸಾಂಸ್ಥಿಕ ಸ್ವರೂಪದೊಂದಿಗೆ ಕಾರ್ಯನಿರ್ವಹಿಸಲು ಸಜ್ಜಾಗಿವೆ. ಮೈಸೂರು ವಿವಿ ಸಿಪಿಡಿಪಿಎಸ್ ನಿರ್ದೇಶಕ ಪ್ರೊ.ಎಸ್.ಜೆ.ಮಂಜುನಾಥ್, ಸಮಾಜ ಕಾರ್ಯ ವಿಭಾಗದ ಡಾ.ಹೆಚ್.ಪಿ.ಜ್ಯೋತಿ, ರೀಪ್ ಬೆನಿಫಿಟ್ ಫೌಂಡೇಷನ್‌ನ ಮುಖ್ಯ ಕಾರ್ಯ ಚಟುವಟಿಕೆ ಅಧಿಕಾರಿ ಸಾರಾ ಮಿಶ್ರಾ, ಹಿರಿಯ ಕಾರ್ಯಕ್ರಮ ವ್ಯವಸ್ಥಾಪಕ ಎ.ಆರ್.ಅಶಿಶ್ ಮತ್ತಿತರರು ಹಾಜರಿದ್ದರು.

ಜೈನ ಸಮುದಾಯದ ಡಿ.ಸುಧಾಕರ್‌ಗೆ ಸಚಿವ ಸ್ಥಾನ ನೀಡಿ



ಮೈಸೂರು,ಮೇ 20(ಪಿಎಂ)– ಚಿತ್ರದುರ್ಗ ಜಿಲ್ಲೆಯ ಹಿರಿಯೂರು ವಿಧಾನಸಭಾ ಕ್ಷೇತ್ರದಿಂದ ಆಯ್ಕೆಯಾದ ಜೈನ ಸಮುದಾಯದ ಡಿ.ಸುಧಾಕರ್ ಅವರಿಗೆ ಸಚಿವ ಸಂಪುಟದಲ್ಲಿ ಸ್ಥಾನ ನೀಡಬೇಕೆಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರಲ್ಲಿ ಭಾರತೀಯ ಜೈನ್ ಮಿಲನ್ ಸಂಸ್ಥೆ ಮನವಿ ಮಾಡಿದೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಶನಿವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಜೈನ್ ಮಿಲನ್ ಸಂಸ್ಥೆ ಅಧ್ಯಕ್ಷ ಕೆ.ಯುವರಾಜ್ ಭಂಡಾರಿ, ದೇಶದ ಜನಸಂಖ್ಯೆಯಲ್ಲಿ ಶೇ.0.4ರಷ್ಟು ಮಾತ್ರವೇ ಜೈನರಿದ್ದೇವೆ. ನಮ್ಮದು ಅಲ್ಪಸಂಖ್ಯಾತ ಸಮುದಾಯವಾಗಿದ್ದು, ರಾಜ್ಯದಲ್ಲಿ 4.5 ಲಕ್ಷ ಮಾತ್ರ ಜನಸಂಖ್ಯೆ ಇದೆ. ಇಂತಹ ಸಮುದಾಯದ ನಾಯಕರಲ್ಲಿ ಒಬ್ಬರಾದ ಡಿ.ಸುಧಾಕರ್ ಸರಳ ಸಜ್ಜನಿಕೆಗೆ ಹೆಸರಾಗಿದ್ದಾರೆ ಎಂದರು.

ಡಿ.ಸುಧಾಕರ್ ಜನತೆ ಸಂಕಷ್ಟಕ್ಕೆ ಸ್ಪಂದಿಸುವ ಮೂಲಕ ಜನ ಮನ್ನಣೆ ಗಳಿಸಿದ್ದಾರೆ. 2008ರಿಂದ ಸತತವಾಗಿ ಶಾಸಕರಾಗಿ ಚುನಾಯಿತರಾಗುತ್ತಿದ್ದಾರೆ. ಅವರಿಗೆ ಸಚಿವ ಸಂಪುಟದಲ್ಲಿ ಸ್ಥಾನ ನೀಡುವ ಮೂಲಕ ಜೈನ ಸಮುದಾಯಕ್ಕೆ ಪ್ರಾತಿನಿಧ್ಯ ನೀಡಬೇಕೆಂದು ಕೋರಿದರು. ಸಂಸ್ಥೆಯ ಪ್ರಧಾನ ಕಾರ್ಯದರ್ಶಿ ಎಂ.ರತ್ನರಾಜ್, ಮೈಸೂರು ವಿಭಾಗದ ಕಾರ್ಯದರ್ಶಿ ಜಿ.ಬಿ.ಚಂದ್ರಪ್ರಕಾಶ್ ಮತ್ತಿತರರು ಗೋಷ್ಠಿಯಲ್ಲಿದ್ದರು.



ಮೈಸೂರಿನ ಸರಸ್ವತಿಪುರಂನ ಕಾಮಾಕ್ಷಿ ಆಸ್ಪತ್ರೆ ರಸ್ತೆ ಕಾಮಗಾರಿಯನ್ನು ಕೆ.ಆರ್. ಕ್ಷೇತ್ರದ ಶಾಸಕ ಟಿ.ಎಸ್.ಶ್ರೀವತ್ಸ ಪರಿಶೀಲಿಸಿ, ಶೀಘ್ರದಲ್ಲೇ ಕಾಮಗಾರಿ ಪೂರ್ಣಗೊಳಿಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು. ಈ ವೇಳೆ ಮೇಯರ್ ಶಿವಕುಮಾರ್, ನಗರಪಾಲಿಕೆ ಆಯುಕ್ತ ಜಿ.ಲಕ್ಷ್ಮೀಕಾಂತ್ ರೆಡ್ಡಿ ಇನ್ನಿತರರಿದ್ದರು.

ಶಾಲಾ ವಿದ್ಯಾರ್ಥಿಗಳಿಗೆ ಗಣಿತಶಾಸ್ತ್ರ ಕುರಿತು ಸ್ಪರ್ಧೆ

ಮೈಸೂರು,ಮೇ 20(ಪಿಎಂ)– ಸಾತಗಳ್ಳಿ 2ನೇ ಹಂತದ ಲರ್ನರ್ಸ್ ಗ್ಲೋಬಲ್ ಸ್ಕೂಲ್ ಅಂಡ್ ಲರ್ನರ್ಸ್ ಪಿಯು ಕಾಲೇಜು ವತಿಯಿಂದ ಯುವ ಕೌಶಲ್ಯ ದಿನದ ಪ್ರಯುಕ್ತ ಜೂನ್ ಮತ್ತು ಜುಲೈನಲ್ಲಿ ಶಾಲಾ ವಿದ್ಯಾರ್ಥಿಗಳಿಗೆ 'ಮ್ಯಾಥ್ಸ್ ಒಲಂಪಿಯಾಡ್ ಸ್ಪರ್ಧೆ (ಗಣಿತಶಾಸ್ತ್ರಕುರಿತು ಸ್ಪರ್ಧೆ)' ಏರ್ಪಡಿಸಲಾಗಿದೆ ಎಂದು ಸದರಿ ಶಿಕ್ಷಣ ಸಂಸ್ಥೆ ಸಂಸ್ಥಾಪಕ ಮುರಳಿ ಮೋಹನ ಕೊನರಡ್ಡಿ ತಿಳಿಸಿದರು.



ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಶನಿವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ವಿದ್ಯಾರ್ಥಿಗಳಿಗೆ ಗಣಿತಶಾಸ್ತ್ರ ಕುರಿತಂತೆ ಕೌಶಲ್ಯ ಹೆಚ್ಚಿಸಲು ಈ ಸ್ಪರ್ಧೆ ಏರ್ಪಡಿಸಲಾಗಿದೆ. 1 ರಿಂದ 2ನೇ ತರಗತಿ, 3ರಿಂದ 4, 5ರಿಂದ 6, 7ರಿಂದ 8 ಹಾಗೂ 9ರಿಂದ 10ನೇ ತರಗತಿ ವಿಭಾಗಗಳಲ್ಲಿ ಸ್ಪರ್ಧೆ ನಡೆಯಲಿದೆ. ಆನ್‌ಲೈನ್ ಮತ್ತು ಆಫ್‌ಲೈನ್ ಎರಡು ವಿಧದಲ್ಲೂ ಸ್ಪರ್ಧೆಯಲ್ಲಿ ಭಾಗವಹಿಸಲು ಅವಕಾಶವಿದ್ದು, ಸ್ಪರ್ಧೆಗೆ ಉಚಿತ ಪ್ರವೇಶವಿದೆ. ನೋಂದಣಿ ಮತ್ತು ಹೆಚ್ಚಿನ ಮಾಹಿತಿಗಾಗಿ ಮೊಸಂ. 99169 33202 ಸಂಪರ್ಕಿಸಬಹುದು ಎಂದರು. ಯೋಗ ಶಿಕ್ಷಕ ಶಿವಪ್ರಕಾಶ್, ಅಧ್ಯಾಪಕ ಸುಜಯ್ ದೇವದತ್ತ ಗೋಷ್ಠಿಯಲ್ಲಿದ್ದರು.



ಸಿದ್ದರಾಮಯ್ಯನವರು ಎರಡನೇ ಬಾರಿ ಮುಖ್ಯಮಂತ್ರಿಯಾಗಿ ಹಾಗೂ ಡಿ.ಕೆ.ಶಿವಕುಮಾರ್ ಅವರು ಉಪ ಮುಖ್ಯಮಂತ್ರಿಯಾಗಿ ಅಧಿಕಾರ ವಹಿಸಿಕೊಂಡ ಹಿನ್ನೆಲೆಯಲ್ಲಿ ಮೈಸೂರಿನ ನಗರ ಪಾಲಿಕೆ ಸದಸ್ಯ ಲೋಕೇಶ್ ಪಿಯಾ ಇಂದಿರಾ ಕ್ಯಾಂಟೀನ್‌ನಲ್ಲಿ ಸಾರ್ವಜನಿಕರಿಗೆ ಹೋಳಿಗೆ ಊಟ ಏರ್ಪಡಿಸಿ, ಸಂಭ್ರಮಿಸಿದರು. ಈ ವೇಳೆ ನಾಗೇಶ್, ಶೇಖರ್, ಪ್ರಶಾಂತ್, ಶಿವು, ಇನ್ನಿತರರಿದ್ದರು

ನಾಳೆಯಿಂದ ಸಂಚಾರ ಪೊಲೀಸರಿಗೆ ಉಚಿತ ಶ್ವಾಸಕೋಶ ತಪಾಸಣೆ

ಮೈಸೂರು,ಮೇ 20 (ಪಿಎಂ)– ವಿಶ್ವ ಅಸ್ತಮಾ ದಿನಾಚರಣೆ ಪ್ರಯುಕ್ತ ಭಾನವಿ ಆಸ್ಪತ್ರೆ ವತಿಯಿಂದ ಮೇ 22ರಿಂದ 27ರವರೆಗೆ ನಗರದ ಸಂಚಾರ ವಿಭಾಗದ ಪೊಲೀಸರಿಗೆ ಉಚಿತ ಶ್ವಾಸಕೋಶ ತಪಾಸಣಾ ಶಿಬಿರ ಆಯೋಜಿಸಲಾಗಿದೆ ಎಂದು ಆಸ್ಪತ್ರೆಯ ಶ್ವಾಸಕೋಶ ತಜ್ಞ ಡಾ.ಮುರಳಿಮೋಹನ್ ತಿಳಿಸಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಶನಿವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಮೈಸೂರಿನ ಕುವೆಂಪುನಗರದ ಆಸ್ಪತ್ರೆಯಲ್ಲಿ ಬೆಳಗ್ಗೆ 9ರಿಂದ ಮಧ್ಯಾಹ್ನ 12ರವರೆಗೆ ಈ ತಪಾಸಣಾ ಶಿಬಿರ ನಡೆಯಲಿದೆ. ಸಂಚಾರ ಪೊಲೀಸರು ಧೂಳಿನ ವಾತಾವರಣದಲ್ಲಿ ಕರ್ತವ್ಯ ನಿರ್ವಹಿಸುವ ಕಾರಣ ಅವರಲ್ಲಿ ಶ್ವಾಸಕೋಶದ ತೊಂದರೆಗಳು ಇರುವ ಸಾಧ್ಯತೆಗಳಿರುತ್ತವೆ. ಈ ಹಿನ್ನೆಲೆಯಲ್ಲಿ ತಪಾಸಣಾ ಶಿಬಿರ ಏರ್ಪಡಿಸಲಾಗಿದೆ ಎಂದರು.

ನಗರ ಪೊಲೀಸ್ ವಿಭಾಗದಲ್ಲಿ 450 ಸಂಚಾರ ಪೊಲೀಸರಿದ್ದು, ಅವರು ಇದರ ಸದುಪಯೋಗ ಪಡೆದುಕೊಳ್ಳಬಹುದು. ನಮ್ಮ ಆಸ್ಪತ್ರೆಯಲ್ಲಿ ಶ್ವಾಸಕೋಶ ತಜ್ಞರು, ಅತ್ಯಾಧುನಿಕ ಉಪಕರಣಗಳಿದ್ದು, ಸಾರ್ವಜನಿಕರು ಸಹ ಪ್ರಯೋಜನ ಪಡೆಯಬಹುದು ಎಂದು ತಿಳಿಸಿದರು. ಆಸ್ಪತ್ರೆಯ ಪ್ರಧಾನ ವ್ಯವಸ್ಥಾಪಕ ಆರ್.ಪ್ರಶಾಂತ್, ಜನರಲ್ ಫಿಜಿಶಿಯನ್ ಡಾ.ಚಂದನ್ ಕುಮಾರ್, ನರ್ಸಿಂಗ್ ಅಧೀಕ್ಷಕ ನಿರಂಜನ್‌ಸ್ವಾಮಿ ಗೋಷ್ಠಿಯಲ್ಲಿದ್ದರು.

PUBLIC NOTICE

My Client Sri. **Manoj. M** S/o Sri. Mitulal, Office at No. 9/1, 12th Cross, V.V. Mohalla, MYSORE- 570002 is intended to purchase below mentioned Schedule A to D Property from Smt. **Shoba Aravind, Sri. Krupa Nandakumar, Sri. M.R. Vijay Raghavan and Smt. Swarna Roa,** they have acquired the title of the Schedule Property through individual Sale deed.

Any person having any right, title, interest, claim in or to the Schedule Property or any part thereof by way of any agreement, contract, lease, trust, inheritance, gift, possession, mortgage, exchange or any such deed/instrument of transfer, easement or otherwise, may submit their objection(s), claim(s) by direct or in writing with us at the under mentioned address through Registered Post along with the supporting documentary proof, within Seven **(7) days** from the date of this publication. Any objections received thereafter will not be binding on my Client and my Client shall proceed with the Sale.

SCHEDULE

A. Smt. Shoba Aravind;- **Survey No. 21/4 (Old No.21/3), measuring 1 Acre 5 Guntas,** East By: Horticulture Department Property, West By: Kengegowda's Property, South By: Horticulture Department Property, North By : Survey No. 21/5,

B. Sri. Krupa Nandakumar: **Survey No. 21/5 (Old No.21/3), measuring 1 Acre 06 Guntas,** East By: Horticulture Department Property, West By: Kengegowda's Property, South By: Survey No. 21/7, North By : Survey No. 21/4,

C. Sri. M.R. Vijay Raghavan;- **Survey No. 21/6 (Old No.21/3), measuring 07 Guntas & Survey No. 15/10 (Old No.15/3), measuring 23 Guntas, totally measuring 30 Guntas,** East By: Horticulture Department Property, West By: Sy. No. 15/3 remaining Property, South By: 15/3 remaining Property, North By: Mydanahalli Road.

D. Smt. Swarna Rao;- Survey No. 21/7 (Old No.21/3), measuring 37 Guntas 04 Annas, East By: Horticulture Department Property, West By: Kengegowda's Property, South By: Survey No. 21/5, North By: Survey No. 21/6,

All properties are situated at Yalachalli Village, Ilvala Hobli, Mysore Taluk & District.

Sd/- **B.S. Leena Devi Papanna,** Advocate, Roll No. KAR1558/05 # 9/1, V.V. Mohalla, Mysore, Ph No. 9449135412

Date : 19.05.2023,
Place: Mysore

ಹಸಿರು ನಮ್ಮ ಉಸಿರು

ಮೈಸೂರು ಮಿತ್ರ ಭಾನುವಾರ 21 ಮೇ 2023

ಮುಖ್ಯಮಂತ್ರಿ ಸಿದ್ದರಾಮಯ್ಯ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಎಂಟು ಮಂದಿ ನೂತನ ಸಂಪುಟ ಸದಸ್ಯರು ಪ್ರಮಾಣ ವಚನ ಸ್ವೀಕಾರ

ಮೂರನೇ ಪುಟದಿಂದ

ಇಲಾಖೆಯ ಹೊಣೆಗಾರಿಕೆ ಹೊತ್ತು ಕಾರ್ಯ ನಿರ್ವಹಿಸಿದ್ದರು. ಆದರೆ, ಈ ಬಾರಿ ಉಪ ಮುಖ್ಯಮಂತ್ರಿಯಾಗಿ ಅಧಿಕಾರ ಸ್ವೀಕರಿಸಿದ್ದಾರೆ.

ಸಂಪುಟ ಸೇರಿರುವ ಡಾ. ಜಿ.ಪರಮೇಶ್ವರ್ ಈ ಹಿಂದೆ ಕುಮಾರಸ್ವಾಮಿ ಸಂಪುಟದಲ್ಲಿ ಉಪ ಮುಖ್ಯಮಂತ್ರಿಯಾಗಿ ಸೇವೆ ಸಲ್ಲಿಸಿದ್ದರು. ಆದರೆ, ಇಂದು ಕೇವಲ ಮಂತ್ರಿಯಾಗಿ ಅಧಿಕಾರ ಸ್ವೀಕರಿಸಿದರು. ಉಳಿದಂತೆ ಸಂಪುಟ ಸೇರಿದ ಇತರ ಏಳು ಮಂದಿ ಅನುಭವಿಗಳಾಗಿದ್ದು, ಹಿಂದಿನ ಕಾಂಗ್ರೆಸ್ ಹಾಗೂ ಮೈತ್ರಿ ಸರ್ಕಾರದ ಆಡಳಿತದಲ್ಲಿ ಮಂತ್ರಿಗಳಾಗಿ ಕೆಲಸ ಮಾಡಿದ ಅನುಭವವಿದೆ.

ಸಿದ್ದರಾಮಯ್ಯ ಪ್ರಮಾಣ ವಚನ ಸ್ವೀಕರಿಸಿದ ಸಂದರ್ಭದಲ್ಲಿ ಉಪ ಮುಖ್ಯಮಂತ್ರಿ ಹೊರತುಪಡಿಸಿ 28 ಶಾಸಕರನ್ನು ಸಚಿವರನ್ನಾಗಿ ಸೇರ್ಪಡೆ ಮಾಡಿಕೊಳ್ಳಲು ಈ ಮೊದಲು ತೀರ್ಮಾನಿಸಿದ್ದರು.

ಸಂಪುಟಕ್ಕೆ ಯಾರನ್ನು ತೆಗೆದುಕೊಳ್ಳಬೇಕು ಎಂಬ ವಿಚಾರಕ್ಕೆ ಚರ್ಚೆ ಮಾಡಲೆಂದೇ ಸಿದ್ದರಾಮಯ್ಯ ಹಾಗೂ ಶಿವಕುಮಾರ್ ಅವರು ಶುಕ್ರವಾರ ದೆಹಲಿಗೆ ತೆರಳಿ ಇಡೀ ದಿನ ವರಿಷ್ಠರೊಂದಿಗೆ ಚರ್ಚೆ ನಡೆಸಿದರೂ ತಮ್ಮ ಅನಿಸಿಕೆಯಂತೆ ಎಲ್ಲರನ್ನು ಮಂತ್ರಿ ಮಾಡಲು ಸಿದ್ದರಾಮಯ್ಯ ಅವರಿಗೆ ಸಾಧ್ಯವಾಗಲಿಲ್ಲ.

ಪರ್ಯಾಯ ಶಕ್ತಿ ಪ್ರದರ್ಶನ: ಸರ್ಕಾರ ರಚನೆಯ ಸಂದರ್ಭವನ್ನು ಕಾಂಗ್ರೆಸ್ ರಾಜಕೀಯವಾಗಿ ಬಳಸಿಕೊಳ್ಳುವಲ್ಲಿ ಯಶಸ್ವಿಯಾಗಿದೆ. ಬಿಜೆಪಿಯೇತರ ಆಡಳಿತವಿರುವ ಮುಖ್ಯಮಂತ್ರಿಗಳು, ವಿವಿಧ ರಾಜಕೀಯ ಪಕ್ಷಗಳ ನಾಯಕರನ್ನು ಒಂದೇ ವೇದಿಕೆಯಡಿ ತರುವಲ್ಲಿ ಯಶಸ್ವಿಯಾಗಿರುವುದಲ್ಲದೆ, ಪ್ರಧಾನಿ ನರೇಂದ್ರ ಮೋದಿ ವಿರುದ್ಧ ಒಗ್ಗಟ್ಟು ಪ್ರದರ್ಶನ ಮಾಡಿದರು.



ಮುಂಬರುವ ಲೋಕಸಭಾ ಚುನಾವಣೆಗೆ ಬಿಜೆಪಿ ವಿರುದ್ಧ ಉಳಿದ ಪಕ್ಷಗಳು ಸಂಘಟನಾತ್ಮಕವಾಗಿ ಹೋರಾಟ ನಡೆಸಿ ಯುಪಿಎ ಸರ್ಕಾರವನ್ನು ಮತ್ತೆ ಅಧಿಕಾರಕ್ಕೆ ತರುವ ಹುಮ್ಮಸ್ಸು ಈ ನಾಯಕರಲ್ಲಿ ಕಂಡುಬಂದಿತು.

ಪ್ರಮಾಣ ವಚನದ ವೇದಿಕೆಯಲ್ಲಿ ಕಾಂಗ್ರೆಸ್‌ನ ರಾಷ್ಟ್ರೀಯ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಮಾಜಿ ಅಧ್ಯಕ್ಷ ರಾಹುಲ್ ಗಾಂಧಿ, ಪ್ರಿಯಾಂಕಾಗಾಂಧಿ, ರಾಜಸ್ಥಾನದ ಮುಖ್ಯಮಂತ್ರಿ ಅಶೋಕ್ ಗೆಹ್ಲೋಟ್, ತಮಿಳುನಾಡು ಮುಖ್ಯ ಮಂತ್ರಿ ಎಂ.ಕೆ.ಸ್ಟಾಲಿನ್, ಬಿಹಾರದ ಮುಖ್ಯ ಮಂತ್ರಿ ನಿತೀಶ್ ಕುಮಾರ್, ಉಪ ಮುಖ್ಯಮಂತ್ರಿ ತೇಜಸ್ವಿ ಯಾದವ್, ಮಧ್ಯ ಪ್ರದೇಶದ ಮಾಜಿ ಮುಖ್ಯಮಂತ್ರಿ ಕಮಲ್ ನಾಥ್, ನ್ಯಾಷನಲಿಸ್ಟ್ ಕಾಂಗ್ರೆಸ್ ಪಕ್ಷದ ಅಧ್ಯಕ್ಷ ಶರದ್ ಪವಾರ್, ಭಾರತೀಯ ಕಮ್ಯುನಿಸ್ಟ್ ಪಕ್ಷದ ಕಾರ್ಯದರ್ಶಿ ಎ.ರಾಜಾ, ಭಾರತೀಯ ಕಮ್ಯುನಿಸ್ಟ್ ಮಾರ್ಕ್ಸಿಸ್ಟ್ ಪಕ್ಷದ ಮುಖಂಡ ಸೀತಾರಾಮ್ ಯೆಚೂರಿ, ಜಮ್ಮು ಮತ್ತು ಕಾಶ್ಮೀರದ ನ್ಯಾಷನಲ್ ಕಾನ್ಫರೆನ್ಸ್ ಪಕ್ಷದ ಅಧ್ಯಕ್ಷ ಮತ್ತು ಮಾಜಿ ಮುಖ್ಯಮಂತ್ರಿ ಡಾ. ಫಾರೂಕ್ ಅಬ್ದುಲ್ಲಾ, ಜಮ್ಮು ಮತ್ತು ಕಾಶ್ಮೀರದ ಮಾಜಿ ಮುಖ್ಯಮಂತ್ರಿ ಮೆಹಬೂಬಾ ಮುಫ್ತಿ ಮೊದಲಾದ ಗಣ್ಯರು ಭಾಗವಹಿಸಿದ್ದರು. ಪ್ರಮಾಣ ವಚನ ಸ್ವೀಕರಿಸಿದ ಎಲ್ಲರಿಗೂ ರಾಜ್ಯಪಾಲರು, ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪ ಮುಖ್ಯಮಂತ್ರಿ ಡಿ.ಕೆ.ಶಿವ ಕುಮಾರ್ ಅವರು ಹೂಗುಚ್ಛ ನೀಡಿ ಅಭಿನಂದಿಸಿದರು.

ಸಿಎಂ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್‌ಗೆ ಪ್ರಧಾನಿ ಮೋದಿ ಅಭಿನಂದನೆ



ಬೆಂಗಳೂರು, ಮೇ 20– ಕರ್ನಾಟಕದ ಮುಖ್ಯಮಂತ್ರಿಯಾಗಿ ಮತ್ತು ಉಪ ಮುಖ್ಯಮಂತ್ರಿಯಾಗಿ ಪ್ರಮಾಣ ವಚನ ಸ್ವೀಕರಿಸಿದ ಕಾಂಗ್ರೆಸ್ ನಾಯಕರಾದ ಸಿದ್ದರಾಮಯ್ಯ ಮತ್ತು ಡಿಕೆ ಶಿವಕುಮಾರ್ ಅವರನ್ನು ಪ್ರಧಾನಿ ನರೇಂದ್ರ ಮೋದಿ ಶನಿವಾರ ಅಭಿನಂದಿಸಿದ್ದಾರೆ. ಕರ್ನಾಟಕದ ಮುಖ್ಯಮಂತ್ರಿಯಾಗಿ ಪ್ರಮಾಣ ವಚನ ಸ್ವೀಕರಿಸಿದ ಸಿದ್ದರಾಮಯ್ಯ ಮತ್ತು ಉಪ ಮುಖ್ಯ ಮಂತ್ರಿಯಾಗಿ ಪ್ರಮಾಣ ವಚನ ಸ್ವೀಕರಿಸಿದ ಡಿಕೆ ಶಿವಕುಮಾರ್ ಅವರಿಗೆ ಅಭಿನಂದನೆಗಳು. ಫಲಪ್ರದವಾದ ಅಧಿಕಾರಾವಧಿಗೆ ನನ್ನ ಶುಭಾಶಯಗಳು ಎಂದು ಪ್ರಧಾನಿ ಟ್ವೀಟ್ ಮಾಡಿದ್ದಾರೆ.

ನೂತನ ಮುಖ್ಯಮಂತ್ರಿಯಾಗಿ ಪ್ರಮಾಣ ವಚನ ಸ್ವೀಕರಿಸಿದ ಸಿದ್ದರಾಮಯ್ಯ ಅವರಿಗೆ ಮಾಜಿ ಸಿಎಂ ಬಸವರಾಜ ಬೊಮ್ಮಾಯಿ ಅಭಿನಂದನೆ ಸಲ್ಲಿಸಿದ್ದಾರೆ.

ಕರ್ನಾಟಕ ರಾಜ್ಯದ ನೂತನ ಮುಖ್ಯಮಂತ್ರಿಯಾಗಿ ಅಧಿಕಾರ ವಹಿಸಿಕೊಂಡ ಸಿದ್ದರಾಮಯ್ಯ ಅವರು ಹಾಗೂ ಅವರ ಸಚಿವ ಸಂಪುಟ ಸದಸ್ಯರಿಗೆ ಹೃತ್ಪೂರ್ವಕ ಅಭಿನಂದನೆಗಳು ಎಂದು ಅವರು ಟ್ವೀಟ್ ಮಾಡಿದ್ದಾರೆ. 224 ಸದಸ್ಯ ಬಲದ ವಿಧಾನಸಭೆ ಚುನಾವಣೆಯಲ್ಲಿ ಕಾಂಗ್ರೆಸ್ 135 ಸ್ಥಾನಗಳನ್ನು ಗಳಿಸಿತ್ತು. ಫಲಿತಾಂಶ ಪ್ರಕಟಗೊಂಡ ಒಂದು ವಾರದ ನಂತರ ಸಿದ್ದರಾಮಯ್ಯ ಅವರು ಬಸವರಾಜ ಬೊಮ್ಮಾಯಿ ಅವರ ಉತ್ತರಾಧಿಕಾರಿಯಾದರು.





ಪ್ರಮಾಣ ವಚನ ಸ್ವೀಕಾರ ಸಮಾರಂಭದಲ್ಲಿ ದೇಶದ ನಾನಾ ರಾಜ್ಯಗಳ ಗಣ್ಯರು ಭಾಗವಹಿಸಿದ್ದನ್ನು (ಮೇಲಿನ ಚಿತ್ರದಲ್ಲಿ) ಹಾಗೂ ನೆರೆದಿದ್ದ ಭಾರೀ ಜನಸ್ತೋಮವನ್ನು (ಕೆಳಚಿತ್ರದಲ್ಲಿ) ಕಾಣಬಹುದು

ಹುಣಸೂರು ಮಾದರಿ ಕ್ಷೇತ್ರ ಮಾಡುವೆ

ಶಾಸಕ ಜಿ.ಡಿ.ಹರೀಶ್‌ಗೌಡ ಭರವಸೆ



ಹುಣಸೂರು, ಮೇ 20– ತಾಲೂಕಿನ ಜನತೆ ನನ್ನ ತಂದೆ ಅಭಿವೃದ್ಧಿ ಕಾರ್ಯ ಹಾಗೂ ನನ್ನ ನಾಯಕತ್ವ ಗುಣ ಮೆಚ್ಚಿ ನನ್ನನ್ನು ಶಾಸಕನಾಗಿ ಆಯ್ಕೆ ಮಾಡಿದ್ದೀರಾ. ನಿಮ್ಮ ಭಾವನೆಗಳಿಗೆ ಧಕ್ಕೆ ಬಾರದಂತೆ ಕ್ಷೇತ್ರದ ಸರ್ವತೋಮುಖ ಅಭಿವೃದ್ಧಿಗೆ ಶ್ರಮಿಸುವ ಮೂಲಕ ಹುಣಸೂರನ್ನು ರಾಜ್ಯದಲ್ಲೇ ಮಾದರಿಯಾಗಿ ಅಭಿವೃದ್ಧಿ ಪಡಿಸುತ್ತೇನೆ ಎಂದು ಶಾಸಕ ಜಿ.ಡಿ.ಹರೀಶ್‌ಗೌಡ ಭರವಸೆ ನೀಡಿದರು.

ಶನಿವಾರ ಬೆಳಗ್ಗೆ ತಾಲೂಕಿನ ಮಾದಹಳ್ಳಿ ಮಠಕ್ಕೆ ಭೇಟಿ ನೀಡಿದ ಅವರು ಶ್ರೀಸಾಂಬಸದಾಶಿವ ಸ್ವಾಮೀಜಿಗಳ ಆಶೀರ್ವಾದ ಪಡೆದು ಮಾತನಾಡಿದ ಅವರು, ಹುಣಸೂರು ನಗರ ಸೇರಿದಂತೆ ತಾಲೂಕಿನ ಪ್ರತಿ ಹಳ್ಳಿಗಳಲ್ಲಿ ಸಾಕಷ್ಟು ಸಮಸ್ಯೆಗಳಿದ್ದು, ಅವುಗಳನ್ನು ಬಗೆಹರಿಸುವ ದೊಡ್ಡ ಸವಾಲು ನನ್ನ ಮುಂದಿದೆ. ಜನರ ನಿರೀಕ್ಷೆಗೂ ಮೀರಿ ಅಭಿವೃದ್ಧಿ ಕೆಲಸಗಳನ್ನು ಮಾಡುವ ಮೂಲಕ ತಾಲೂಕಿನ ಅಭಿವೃದ್ಧಿಗೆ ಶ್ರಮಿಸುವುದೇ ನನ್ನ ಮುಖ್ಯ ಗುರಿ. ಮುಂದೆ ನಿಮ್ಮ ಮಗನಂತೆ ದುಡಿಯುವ ಮೂಲಕ ನುಡಿದಂತೆ ನಡೆಯುತ್ತೇನೆ ಎಂದರು.

ತಾಲೂಕಿನಲ್ಲಿ ಕಳೆದ 15 ವರ್ಷಗಳಿಂದ ಯಾವುದೇ ಅಭಿವೃದ್ಧಿ ಕಾರ್ಯಗಳಾಗದೇ ಅಭಿವೃದ್ಧಿ ಕುಂಠಿತವಾಗಿತ್ತು. ಹೀಗಾಗಿ ಕ್ಷೇತ್ರದಲ್ಲಿ ರಸ್ತೆ, ಕುಡಿಯುವ ನೀರು ಸೇರಿದಂತೆ ಮೂಲ ಸೌಕರ್ಯಕ್ಕೆ ಒತ್ತು ನೀಡಲಾಗುವುದು. ಅಲ್ಲದೇ ಆರೋಗ್ಯ ಮತ್ತು ನೈರ್ಮಲ್ಯದ ಕಡೆಗೆ ಹೆಚ್ಚು ಗಮನ ಹರಿಸಲಾಗುವುದು ಎಂದು ತಿಳಿಸಿದರು.

ನನ್ನ ಗೆಲುವಿಗೆ ಕಾರಣರಾದ ತಾಲೂಕಿನ ಜನತೆಗೆ ಕೃತಜ್ಞತೆ ಹೇಳಲು ಪ್ರತಿ ಗ್ರಾಮಕ್ಕೂ ಪ್ರವಾಸ ಕೈಗೊಂಡಿದ್ದೇನೆ. ಈ ವೇಳೆ ಜನತೆ ಯಾವುದೇ ಸಮಸ್ಯೆಗಳಿದ್ದರೂ ಮುಕ್ತವಾಗಿ ನನ್ನೊಂದಿಗೆ ಹಂಚಿಕೊಳ್ಳಬಹುದು. ನಾನಿರುವುದೇ ನಿಮ್ಮ ಸೇವೆಗಾಗಿ. ಹೀಗಾಗಿ ಸಾಧ್ಯವಾದರೇ ಸ್ಥಳದಲ್ಲೇ ಸಮಸ್ಯೆ ಬಗೆಹರಿಸುತ್ತೇನೆ. ಇಲ್ಲದಿದ್ದರೇ ಸಂಬಂಧಪಟ್ಟ ಅಧಿಕಾರಿಗಳ ಮೂಲಕ ಸಮಸ್ಯೆ ಬಗೆಹರಿಸಲು ಕ್ರಮ ವಹಿಸಲಾಗುವುದು ಎಂದರು.

ತಾಲೂಕಿನ ರಸ್ತೆಗಳು ಸುಧಾರಣೆಯಾಗಿಲ್ಲ. ಎಷ್ಟೋ ಬಡಜನತೆಗೆ ಶಾಶ್ವತ ಸೂರು ಸಿಕ್ಕಿಲ್ಲ. ಕಾಡಂಚಿನಲ್ಲಿ ವಾಸಿಸುವ ಆದಿವಾಸಿಗಳಿಗೆ ಸಿಗಬೇಕಾದ ಹಕ್ಕು, ಜಮೀನಿನ ಸಾಗುವಳಿ, ಆಶ್ರಯ ಮನೆ, ರಸ್ತೆ, ವಿದ್ಯುತ್, ಮೂಲ ಸೌಲಭ್ಯಗಳು ಸೇರಿದಂತೆ ಹಲವು ಜ್ವಲಂತ ಸಮಸ್ಯೆಗಳ ಮೇಲೆ ಬೆಳಕು ಚೆಲ್ಲುವ ಮೂಲಕ ಶಾಶ್ವತ ಪರಿಹಾರಕ್ಕೆ ಮುಂದಾಗಲಾಗುವುದು ಎಂದರು.

ಇದೇ ವೇಳೆ ಮುಂದಿನ ದಿನಗಳಲ್ಲಿ ಮಠದಲ್ಲಿ ಸಮುದಾಯ ಭವನ ನಿರ್ಮಾಣಕ್ಕೆ ಎಲ್ಲಾ ರೀತಿಯ ನೆರವು ನೀಡಲಾಗುವುದು ಎಂದು ಭರವಸೆ ನೀಡಿದರು.

ಮಸೀದಿ, ಚರ್ಚ್‌ಗಳಿಗೆ ಭೇಟಿ: ನಗರದ ಕಾರ್ಖಾನೆ ರಸ್ತೆಯಲ್ಲಿರುವ ಮಸೀದಿ ಹಾಗೂ ಗಣೇಶನಗುಡಿ ಬೀದಿಯಲ್ಲಿರುವ ದೊಡ್ಡ ಮಸೀದಿ, ಪೋಸ್ಟ್ ಆಫೀಸ್ ರಸ್ತೆಯಲ್ಲಿರುವ ಚರ್ಚ್‌ಗೆ ಭೇಟಿ ನೀಡಿದ ಶಾಸಕ ಜಿ.ಡಿ.ಹರೀಶ್‌ಗೌಡ ಪ್ರಾರ್ಥನೆ ಸಲ್ಲಿಸಿ, ಅಲ್ಲಿದ್ದವರಿಗೆ ಅಭಿನಂದನೆ ಸಲ್ಲಿಸಿದರು. ಈ ವೇಳೆ ಮಾತನಾಡಿ ನಿಮ್ಮೊಂದಿಗೆ ನಾನಿದ್ದೇನೆ. ಯಾವುದೇ ಸಮಾಜಮುಖಿ ಕಾರ್ಯಗಳಿಗೆ ನನ್ನ ಸಂಪೂರ್ಣ ಸಹಕಾರ ಇದೆ ಎಂದರು.

ಪತ್ರಕರ್ತರ ಭವನ ನಿರ್ಮಾಣಕ್ಕೆ ಭರವಸೆ: ಬಳಿಕ ನಗರದ ಪತ್ರಕರ್ತರ ಭವನಕ್ಕೆ ಭೇಟಿ ನೀಡಿ ಮಾತನಾಡಿದ ಅವರು, ನನ್ನೆಲ್ಲಾ ಕೆಲಸ ಕಾರ್ಯಗಳಿಗೆ ನಿಮ್ಮ ಸಲಹೆ, ಸಹಕಾರ ಅತ್ಯಗತ್ಯ. ಕ್ಷೇತ್ರದ ಸಮಗ್ರ ಅಭಿವೃದ್ಧಿಗೆ ಸಲಹೆ, ಸೂಚನೆ ನೀಡುವಂತೆ ಮನವಿ ಮಾಡಿದ ಅವರು ಹುಣಸೂರು ಪತ್ರಕರ್ತರ ಸಂಘಕ್ಕೆ ಸ್ವಂತ ಭವನ ನಿರ್ಮಾಣಕ್ಕೆ ಅನುದಾನ ನೀಡುವುದಾಗಿ ಭರವಸೆ ನೀಡಿದರು. ಇದೇ ವೇಳೆ ತಾಲೂಕಿನ ಗಾವಡಗೆರೆ ಗುರುಲಿಂಗ ಜಂಗಮ ಮಠಕ್ಕೆ ಭೇಟಿ ನೀಡಿ, ಶ್ರೀನಟರಾಜಸ್ವಾಮೀಜಿಗಳ ಆಶೀರ್ವಾದ ಪಡೆದರು. ಈ ವೇಳೆ ತಾಲೂಕು ಜೆಡಿಎಸ್ ಅಧ್ಯಕ್ಷ ದೇವರಾಜ ಒಡೆಯರ್, ನಗರಾಧ್ಯಕ್ಷ ಹೆಚ್.ಎಂ.ಫಜಲುಲ್ಲಾ, ಶ್ರೀಧರ್, ಸುರೇಶ್, ರಮೇಶ್, ಜಗ ಸೇರಿದಂತೆ ಇನ್ನಿತರರಿದ್ದರು.

ಡಿಆರ್‌ಸಿ ಸಿನಿಮಾಸ್

ದೂ : 4240422/4241800

ಸ್ಕ್ರೀನ್ 1	ದಿ ಕೇರಳ ಸ್ಟೋರಿ (ಹಿಂ): ಬೆ.10.25ಕ್ಕೆ, ಮ.1.20ಕ್ಕೆ, ಸಂ.4.05ಕ್ಕೆ, ರಾ.7ಕ್ಕೆ, ರಾ.9.50ಕ್ಕೆ.
ಸ್ಕ್ರೀನ್ 2	ಡೇರ್‌ಡೆವಿಲ್ ಮುಸ್ತಫಾ (ಕ): ಬೆ.10.05ಕ್ಕೆ, ಸಂ.6.50ಕ್ಕೆ, ಗಾರ್ಡಿಯನ್ಸ್ ಆಫ್ ಗ್ಯಾಲಕ್ಸಿ ವಾಲ್ಯೂಂ 3 (3ಡಿ)(ಇಂ): ಮ.1.10ಕ್ಕೆ, ಜೆರ್ಸಿ ನಂಬರ್ 10 (ಕ): ಸಂ.4.05ಕ್ಕೆ, ರಾಘವೇಂದ್ರ ಸ್ಟೋರ್ಸ್ (ಕ): ರಾ.10ಕ್ಕೆ.
ಸ್ಕ್ರೀನ್ 3	ಇವಿಲ್ ಡೆಡ್ ರೈಸ್ (ಇಂ): ಬೆ.11ಕ್ಕೆ, ಪಿಚ್ಚೈಕಾರನ್2 (ತ): ಮ.1.20ಕ್ಕೆ, ಸಂ.4.25ಕ್ಕೆ, ರಾಘವೇಂದ್ರ ಸ್ಟೋರ್ಸ್ (ಕ): ರಾ.7.30ಕ್ಕೆ, ಚಾರ್ಲ್ಸ್ ಎಂಟರ್‌ಪ್ರೈಸಸ್ (ಮ): ಸಂ.9.55ಕ್ಕೆ.
ಸ್ಕ್ರೀನ್ 4	ಫಾಸ್ಟ್ X (3ಡಿ)(ಇಂ): ಬೆ.10.45ಕ್ಕೆ, ಮ.1.35ಕ್ಕೆ, ಸಂ.4.25ಕ್ಕೆ, ರಾ.7.15ಕ್ಕೆ, ರಾ.10ಕ್ಕೆ.

ಐನಾಕ್ಸ್ ಮೂವೀಸ್

INOX LIVE THE MOVIE

ದೂ : 2533444 / 2433456

ಸ್ಕ್ರೀನ್ 1	ಫಾಸ್ಟ್ X (3ಡಿ)(ಇಂ): ಬೆ.10.30, ಮ.1.30ಕ್ಕೆ, ಸಂ.4.30ಕ್ಕೆ, ರಾ.7.30ಕ್ಕೆ, ರಾ.10.30ಕ್ಕೆ.
ಸ್ಕ್ರೀನ್ 2	ದಿ ಕೇರಳ ಸ್ಟೋರಿ (ಹಿಂ): ಬೆ.10ಕ್ಕೆ, ಮ.12.55ಕ್ಕೆ, ಮ.3.50ಕ್ಕೆ, ಸಂ.6.45ಕ್ಕೆ, ರಾ.9.40ಕ್ಕೆ.
ಸ್ಕ್ರೀನ್ 3	ದಿ ಕೇರಳ ಸ್ಟೋರಿ (ಹಿಂ): ಬೆ.11ಕ್ಕೆ, ಮ.1.55ಕ್ಕೆ, ಸಂ.4.50ಕ್ಕೆ, ರಾ.10.30ಕ್ಕೆ, ಅನುರಾಗಂ (ಮ): ರಾ.7.45ಕ್ಕೆ.
ಸ್ಕ್ರೀನ್ 4	ಫಾಸ್ಟ್ X (3ಡಿ)(ಇಂ): ಬೆ.9.30ಕ್ಕೆ, ಪಿಚ್ಚೈಕಾರನ್ 2(ತ): ಮ.12.20ಕ್ಕೆ, ರಾ.10.05ಕ್ಕೆ, ಡೇರ್‌ಡೆವಿಲ್ ಮುಸ್ತಫಾ (ಕ): ಸಂ.6.50ಕ್ಕೆ.

ಪಿವಿಆರ್ ಸಿನಿಮಾಸ್

PVR CINEMAS

ಮೊ.ನಂ: 8951357139

ನೆಕ್ಸಸ್ ಸೆಂಟರ್‌ಸಿಟಿ ಮಾಲ್, 2ನೇ ಮಹಡಿ,

ಮಂಡಲ (ಕ): ಮ.2.15ಕ್ಕೆ, **1 ರಾಬರಿ ಕಥೆ** (ಕ): ಸಂ.4.50ಕ್ಕೆ, **ಚೌಕಾಬಾರ** (ಕ): ರಾ.7.50ಕ್ಕೆ, **ಕ್ರಿಡ್ 3** (ಇಂ): ಬೆ.11.35ಕ್ಕೆ, **ತು ಜೂಥಿ ಮೇನ್ ಮಕ್ಕರ್** (ಹಿಂ): ಬೆ.8.30ಕ್ಕೆ, ಮ.12ಕ್ಕೆ, ಮ.3.30ಕ್ಕೆ, ರಾ.7ಕ್ಕೆ, ರಾ.10.30ಕ್ಕೆ, **ತು ಜೂಥಿ ಮೇನ್ ಮಕ್ಕರ್** (ಹಿಂ): ಬೆ.9.30ಕ್ಕೆ, ಬೆ.11ಕ್ಕೆ, ಮ.1ಕ್ಕೆ, ಮ.2.30ಕ್ಕೆ, ಸಂ.4.30ಕ್ಕೆ, ಸಂ.6ಕ್ಕೆ, ರಾ.8ಕ್ಕೆ, ರಾ.9.30ಕ್ಕೆ, **ತುರಮುಖಂ** (ಮ): ರಾ.10.30ಕ್ಕೆ, **ಅಜಿಲನ್ ಕಿಂಗ್ ಆಫ್ ದಿ ಓಷನ್** (ತ): ಮ.1ಕ್ಕೆ, ಸಂ.4ಕ್ಕೆ, ರಾ.7ಕ್ಕೆ, ರಾ.10ಕ್ಕೆ, **ಸ್ಕ್ರೀಮ್ 6** (ಇಂ): ಮ.2.45ಕ್ಕೆ, ರಾ.7.45ಕ್ಕೆ, **65** (ಇಂ): ಮ.12.30ಕ್ಕೆ, ಸಂ.5.30ಕ್ಕೆ, ರಾ.10.30ಕ್ಕೆ.

ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ. ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.

ಪದ್ಮ ಚಿತ್ರಮಂದಿರ	(ದೂ: 2521923)
ಕರುಂಗಾ ಪಿಯಾನ್ (ತ)	4 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್ ಚಿತ್ರಮಂದಿರ	(ದೂ: 2422871)
ರಾಘವೇಂದ್ರ ಸ್ಟೋರ್ (ಕ)	4 ಪ್ರದರ್ಶನಗಳು
ಉಮಾ ಚಿತ್ರಮಂದಿರ	(ದೂ: 2520009)
ಡೇ ಅಂಡ್ ಸಮ್‌ಒನ್ (ತೆ)	4 ಪ್ರದರ್ಶನಗಳು
ಬಾಲಾಜಿ ಚಿತ್ರಮಂದಿರ	(ದೂ: 2497199)
ಕಿಸಿ ಕ ಭಾಯಿ ಕಿಸಿ ಕಿ ಜಾನ್ (ಹಿ)	4 ಪ್ರದರ್ಶನಗಳು
ಮಹದೇಶ್ವರ ಚಿತ್ರಮಂದಿರ	(ಮೊ:9900820093)
ವೀರಂ (ಕ)	4 ಪ್ರದರ್ಶನಗಳು
ಗಾಯಿತ್ರಿ	
ಕಸ್ಟಡಿ (ತೆ)	4 ಪ್ರದರ್ಶನಗಳು
ರಾಜ್‌ಕಮಲ್	
ಫಾಸ್ಟ್ ಎಕ್ಸ್ (ಇಂ) 2 ಪ್ರದರ್ಶನಗಳು ದಿ ಕೇರಳ ಸ್ಟೋರಿ(ಹಿಂ)	2 ಪ್ರದರ್ಶನಗಳು
ಸಂಗಂ	
ಶ್ರೀಮಂತ (ಕ) 2 ಪ್ರದರ್ಶನಗಳು, ವಿರೂಪಾಕ್ಷ (ತೆ)	2 ಪ್ರದರ್ಶನಗಳು
ಲಿಡೋ	
ಪಿಎಸ್–2 (ತ)	4 ಪ್ರದರ್ಶನಗಳು
ತಿಬ್ಬಾದೇವಿ	
ಏಜೆಂಟ್ (ತೆ)	4 ಪ್ರದರ್ಶನಗಳು
ಪ್ರಭಾ	
ಸುಮನ್ (ಕ)	4 ಪ್ರದರ್ಶನಗಳು

ಇಂದು ವಿದ್ಯುತ್ ವ್ಯತ್ಯಯ

ನಂಜನಗೂಡು, ಮೇ 20– ಇಲ್ಲಿನ ವಿದ್ಯುತ್ ವಿತರಣಾ ಕೇಂದ್ರಗಳಲ್ಲಿ ತ್ರೈಮಾಸಿಕ ನಿರ್ವಹಣಾ ಕಾರ್ಯ ಹಮ್ಮಿಕೊಂಡಿರುವುದರಿಂದ ಮೇ 21ರಂದು ಬೆಳಗ್ಗೆ 10 ರಿಂದ ಸಂಜೆ 5ರವರೆಗೆ ನಂಜನಗೂಡು ಪಟ್ಟಣ, ಕಲ್ಲಹಳ್ಳಿ ಕೈಗಾರಿಕಾ ಪ್ರದೇಶ, ನೆಸ್ಲೆ, ಎಟಿ & ಎಸ್, ಮ್ಯಾಕ್ಸ್ ಫಾರ್ಮ, ದೇವೀರಮ್ಮನಹಳ್ಳಿ, ದೇಬೂರು, ದೇವರಸನಹಳ್ಳಿ, ತಾಂಡವಪುರ, ಚಿಕ್ಕಯ್ಯನಛತ್ರ, ಮರಳೂರು, ತಾಂಡ್ಯ ಕೈಗಾರಿಕಾ ಪ್ರದೇಶ, ಬಾಲಾಜಿ, ಇಂಡಸ್, ಗಣಪತಿ, ಕೆಐಎಡಿಬಿ 1&2, ಕೆಂಪಿಸಿದ್ದನಹುಂಡಿ, ಹುಳಿಮಾವು ಸೇರಿದಂತೆ ಸುತ್ತಮುತ್ತಲ ಗ್ರಾಮಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ ಎಂದು ಪ್ರಕಟಣೆ ತಿಳಿಸಿದೆ.

ಮುಖ್ಯಮಂತ್ರಿಯಾಗಿ ಅಧಿಕಾರ ಸ್ವೀಕರಿಸಿದ ಸಿದ್ದರಾಮಯ್ಯಗೆ ದಲೈಲಾಮಾ ಅಭಿನಂದನೆ

ಧರ್ಮಶಾಲಾ, ಮೇ 20– ಟಿಬೆಟಿಯನ್ ಧರ್ಮಗುರು ದಲೈಲಾಮಾ ಅವರು ಕರ್ನಾಟಕದ ಮುಖ್ಯಮಂತ್ರಿಯಾಗಿ ಅಧಿಕಾರ ಸ್ವೀಕರಿಸಿರುವ ಸಿದ್ದರಾಮಯ್ಯ ಅವರನ್ನು ಅಭಿನಂದಿಸಿದ್ದಾರೆ. ಸಂದಿಗ್ಧ ಸಮಯದಲ್ಲಿ ಟಿಬೆಟಿಯನ್ನರಿಗೆ ನೀಡಿದ ಆತ್ಮೀಯ ಮತ್ತು ಸ್ನೇಹಪರ ಬೆಂಬಲಕ್ಕಾಗಿ ಕರ್ನಾಟಕ ಸರ್ಕಾರ ಮತ್ತು ಜನರಿಗೆ ಕೃತಜ್ಞತೆಯನ್ನು ಬಯಸುತ್ತೇನೆ.

ಮುಂದೆ ಎದುರಾಗಬಹುದಾದ ಸವಾಲುಗಳನ್ನು ಎದುರಿಸುವಲ್ಲಿ ನೀವು ಯಶಸ್ವಿಯಾಗಬೇಕೆಂದು ನಾನು ಬಯಸುತ್ತೇನೆ ಎಂದಿದ್ದಾರೆ.

ಕೋಟೆ, ಹುಣಸೂರಲ್ಲಿ 'ಕೈ' ಸಂಭ್ರಮಾಚರಣೆ





ಹೆಚ್.ಡಿ.ಕೋಟೆ/ಹುಣಸೂರು, ಮೇ 20– ಮುಖ್ಯಮಂತ್ರಿಯಾಗಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿಯಾಗಿ ಡಿ.ಕೆ.ಶಿವಕುಮಾರ್ ಶನಿವಾರ ಪ್ರಮಾಣ ವಚನ ಸ್ವೀಕರಿಸಿದ ಹಿನ್ನೆಲೆಯಲ್ಲಿ ಹೆಚ್.ಡಿ.ಕೋಟೆ, ಹುಣಸೂರಲ್ಲಿ ಕಾಂಗ್ರೆಸ್ ಕಾರ್ಯಕರ್ತರು ಪಟಾಕಿ ಸಿಡಿಸಿ, ಸಿಹಿ ಹಂಚಿ ಸಂಭ್ರಮಿಸಿದರು.

ಹೆಚ್.ಡಿ.ಕೋಟೆ: ಪಟ್ಟಣದಲ್ಲಿ ಶನಿವಾರ ಜಮಾಯಿಸಿದ ಕಾಂಗ್ರೆಸ್ ಕಾರ್ಯಕರ್ತರು ಸಂಭ್ರಮಾಚರಣೆ ನಡೆಸಿದರು.

ಜಿಲ್ಲಾ ಕಾಂಗ್ರೆಸ್ ಸದಸ್ಯ ಪರಶಿವಮೂರ್ತಿ ಮಾತನಾಡಿ, ಈ ಬಾರಿ ಸ್ಪಷ್ಟ ಬಹುಮತದೊಂದಿಗೆ ಕಾಂಗ್ರೆಸ್ ಅಧಿಕಾರಕ್ಕೆ ಬಂದಿದ್ದು, ಮುಖ್ಯಮಂತ್ರಿಯಾಗಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿಯಾಗಿ ಡಿ.ಕೆ.ಶಿವಕುಮಾರ್ ಪ್ರಮಾಣವಚನ ಸ್ವೀಕರಿಸಿರುವುದು ಸಂತಸದ ವಿಷಯ. ಅನಿಲ್ ಚಿಕ್ಕಮಾದು ಅವರು 2ನೇ ಬಾರಿಗೆ ಶಾಸಕರಾಗಿ ಆಯ್ಕೆಯಾಗುವ ಮೂಲಕ ಇತಿಹಾಸ ಸೃಷ್ಟಿಸಿದ್ದಾರೆ. ಇದಕ್ಕೆ ಅವರ ಅಭಿವೃದ್ಧಿ ಕಾರ್ಯಗಳೇ ಕಾರಣ. ಪ್ರಸ್ತುತ ಕಾಂಗ್ರೆಸ್ ಸರ್ಕಾರ ರಾಜ್ಯದಲ್ಲಿ ಅಧಿಕಾರದಲ್ಲಿ ಇರುವುದರಿಂದ ತಾಲೂಕಿನ ಸಮಗ್ರ ಅಭಿವೃದ್ಧಿಗೆ ಶಾಸಕ ಅನಿಲ್ ಚಿಕ್ಕಮಾದು ಶ್ರಮಿಸುತ್ತಾರೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಇದೇ ವೇಳೆ ತಾಲೂಕು ಕಾಂಗ್ರೆಸ್ ವತಿಯಿಂದ ಪ್ರಮಾಣ ವಚನ ಸ್ವೀಕಾರ ಕಾರ್ಯಕ್ರಮದ ನೇರ ಪ್ರಸಾರ ವೀಕ್ಷಣೆಗೆ ವ್ಯವಸ್ಥೆ ಮಾಡಲಾಗಿತ್ತು. ಈ ವೇಳೆ ನೂರಾರು ಕಾಂಗ್ರೆಸ್ ಕಾರ್ಯಕರ್ತರು, ಮುಖಂಡರು ಕಾರ್ಯಕ್ರಮ ವೀಕ್ಷಿಸಿದರು. ಈ ಸಂದರ್ಭ ಮುಖಂಡರಾದ ಶಿವಣ್ಣ, ಶಶಿಪಟೇಲ್, ಮಾದೇವ, ಶಿವರಾಜು, ಸೋಮು, ಬುದನೂರು ಮಾದೇವ, ಅಫ್ರಾನ್ ಖಾನ್, ಅಕ್ರಮ್, ತನು, ಫಾರುಕ್, ರಾಜು, ಚಿಕ್ಕಣ್ಣ, ಮೂರ್ತಿ, ಚಲುವರಾಜು, ತಿಮ್ಮರಾಜು, ಶಿವರಾಜು ಇತರರಿದ್ದರು.

ಹುಣಸೂರು: ನಗರದ ಕಾಂಗ್ರೆಸ್ ಕಚೇರಿಯಲ್ಲಿ ಜಮಾಯಿಸಿದ ಕಾಂಗ್ರೆಸ್ ಮುಖಂಡರು ಹಾಗೂ ಕಾರ್ಯಕರ್ತರು ಸಂಭ್ರಮಾಚರಿಸಿದರು.

ಕೆಪಿಸಿಸಿ ಕಾರ್ಯಾಧ್ಯಕ್ಷ ವಕೀಲ ಪುಟ್ಟರಾಜ್ ಮಾತನಾಡಿ, ಈ ಬಾರಿಯ ಚುನಾವಣೆಯಲ್ಲಿ ಅಹಿಂದ ವರ್ಗಕ್ಕೆ ಜಯ ಲಭಿಸಿದ್ದು, ರಾಜ್ಯದ ಜನರು ಮಲ್ಲಿಕಾರ್ಜುನ ಖರ್ಗೆ, ಸಿದ್ದರಾಮಯ್ಯ, ಡಿ.ಕೆ. ಶಿವಕುಮಾರ್ ನಾಯಕತ್ವ ಮೆಚ್ಚಿ 135 ಸ್ಥಾನಗಳಲ್ಲಿ ಪಕ್ಷವನ್ನು ಗೆಲ್ಲಿಸುವ ಮೂಲಕ ಸ್ಪಷ್ಟ ಬಹುಮತ ನೀಡಿದ್ದಾರೆ ಎಂದರು.

ರಾಜ್ಯದ ಜನರ ಆಶಯದಂತೆ ಕಾಂಗ್ರೆಸ್ ಹೈಕಮಾಂಡ್ ಸಿದ್ದರಾಮಯ್ಯ ಅವರನ್ನು ಮುಖ್ಯಮಂತ್ರಿ ಹಾಗೂ ಡಿ.ಕೆ.ಶಿವಕುಮಾರ್ ಅವರನ್ನು ಉಪಮುಖ್ಯಮಂತ್ರಿಯಾಗಿ ಆಯ್ಕೆ ಮಾಡುವ ಮೂಲಕ ಅಹಿಂದ ವರ್ಗಕ್ಕೆ ನ್ಯಾಯ ಕಲ್ಪಿಸಿದೆ. ಈ ಕಿಲಾಡಿ ಜೋಡಿ ನಾಯಕರ ನೇತೃತ್ವದಲ್ಲಿ ಇಂದು ಸರ್ಕಾರ ರಚನೆಯಾಗಿದ್ದು, ಚುನಾವಣೆ ಸಂದರ್ಭ ನೀಡಿದ ಆಶ್ವಾಸನೆಯಂತೆ ಐದು ಗ್ಯಾರಂಟಿಗಳನ್ನು ಅನುಷ್ಠಾನಗೊಳಿಸಿ ರಾಜ್ಯವನ್ನು ಅಭಿವೃದ್ಧಿ ಪಥದತ್ತ ಕೊಂಡೊಯ್ಯಲಿದ್ದಾರೆ ಎಂದರು.

ಜಿಲ್ಲಾ ಕಾಂಗ್ರೆಸ್ ಉಪಾಧ್ಯಕ್ಷ ಎಸ್.ಜಯರಾಮ್ ಮಾತನಾಡಿ, ಈ ಹಿಂದೆ ಮುಖ್ಯಮಂತ್ರಿಯಾಗಿದ್ದ ಸಿದ್ದರಾಮಯ್ಯನವರು ರಾಜ್ಯದ ಬಡವರು, ದೀನ ದಲಿತರಿಗಾಗಿ ಅನೇಕ ಯೋಜನೆಗಳನ್ನು ಜಾರಿಗೊಳಿಸಿದ್ದರು. ಇದೀಗ 2ನೇ ಬಾರಿಗೆ ಮುಖ್ಯಮಂತ್ರಿಯಾಗಿರುವ ಸಿದ್ದರಾಮಯ್ಯನವರು ಐದು ಗ್ಯಾರಂಟಿಗಳ ಜೊತೆಗೆ ಇನ್ನಿತರ ಹಲವು ಅಭಿವೃದ್ಧಿ ಯೋಜನೆಗಳನ್ನು ಅನುಷ್ಠಾನಗೊಳಿಸಲಿದ್ದಾರೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಕಾರ್ಯಕ್ರಮದಲ್ಲಿ ಹುಣಸೂರು ಬ್ಲಾಕ್ ಕಾರ್ಯಾಧ್ಯಕ್ಷ ಬಸವರಾಜಪ್ಪ, ನಗರಸಭಾ ಮಾಜಿ ಅಧ್ಯಕ್ಷೆ ಸೌರಭ, ನಗರಸಭಾ ಸದಸ್ಯರಾದ ಶ್ವೇತ, ಪ್ರಿಯಾಂಕಾ, ಯುವ ಮುಖಂಡರಾದ ಸಂತೋಷ್, ವೆನ್ನಿ, ಮಂಜು, ಸರ್ವರ್ ಪಾಷ, ಕೇಬಲ್ ನಾಗರಾಜ್ ಸೇರಿದಂತೆ ಇನ್ನಿತರರಿದ್ದರು.



ಸಿದ್ದರಾಮಯ್ಯನವರು 2ನೇ ಬಾರಿಗೆ ರಾಜ್ಯದ ಮುಖ್ಯಮಂತ್ರಿಯಾಗಿ ಪ್ರಮಾಣವಚನ ಸ್ವೀಕರಿಸಿದ ಹಿನ್ನೆಲೆಯಲ್ಲಿ ನಂಜನಗೂಡು ತಾಲೂಕಿನ ಹೆಡಿಯಾಲದಲ್ಲಿ ಕಾಂಗ್ರೆಸ್ ಕಾರ್ಯಕರ್ತರು ಮಜ್ಜಿಗೆ ವಿತರಿಸುವ ಮೂಲಕ ಸಂಭ್ರಮಾಚರಣೆ ಮಾಡಿದರು. ಈ ವೇಳೆ ವರ್ತಕರ ಸಂಘದ ಅಧ್ಯಕ್ಷ ಸಲಿಮತ್ ಅಲಿ, ಸ್ವಾಮಿ, ಪುಟ್ಟೇಗೌಡ, ಮಹೇಶ್, ಚಿಕ್ಕಮಾಲೇಗೌಡ, ಗಣೇಶ, ರಾಮು, ರಾಜು, ಸಿದ್ದು, ಗುರುಸಿದ್ದೇಗೌಡ ಇತರರಿದ್ದರು.

ಬೆಟ್ಟದಪುರದಲ್ಲಿ ಮಕ್ಕಳ ವಿಶೇಷ ಗ್ರಂಥಾಲಯ ಶಿಬಿರ



ಬೆಟ್ಟದಪುರ, ಮೇ 20– ಇಲ್ಲಿನ ಗ್ರಾಪಂನಲ್ಲಿ ಮಕ್ಕಳ ವಿಶೇಷ ಗ್ರಂಥಾಲಯ ಶಿಬಿರವನ್ನು ಅಧ್ಯಕ್ಷೆ ಮಂಜುಳ ಉದ್ಘಾಟಿಸಿದರು.

ಬಳಿಕ ಮಾತನಾಡಿದ ಅವರು, ಬೇಸಿಗೆಯಲ್ಲಿ ಮಕ್ಕಳು ಹೆಚ್ಚಿನ ಜ್ಞಾನ ಪಡೆಯಲಿ ಎಂಬ ಉದ್ದೇಶದಿಂದ ಗ್ರಂಥಾಲಯ ಇಲಾಖೆ ಪ್ರತಿ ಗ್ರಾಪಂಗಳಲ್ಲೂ ಮಕ್ಕಳ ವಿಶೇಷ ಗ್ರಂಥಾಲಯ ಕಾರ್ಯಕ್ರಮ ಹಮ್ಮಿಕೊಂಡಿದೆ. ಇದರಿಂದ ಮಕ್ಕಳ ಜ್ಞಾನ ಮತ್ತು ಕಲಿಕೆಗೆ ಪೂರಕವಾದ ವಾತಾವರಣ ನೀಡಲಾಗುತ್ತಿದೆ. ಪೋಷಕರು ಇದರ ಸದುಪಯೋಗ ಪಡಿಸಿಕೊಳ್ಳಬೇಕು ಎಂದರು.

ಪಿಡಿಓ ದಿವಾಕರ್ ಮಾತನಾಡಿ, ಮಕ್ಕಳ ಜ್ಞಾನಾಭಿವೃದ್ಧಿಗೆ ಗ್ರಂಥಾಲಯ ಅವಶ್ಯಕ. ಆದ್ದರಿಂದ ವಿದ್ಯಾರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಗ್ರಂಥಾಲಯಕ್ಕೆ ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಪುಸ್ತಕಗಳನ್ನು ಓದುವ ಮೂಲಕ ಜ್ಞಾನ ಸಂಪಾದಿಸಬೇಕು ಎಂದರು.

ಗ್ರಂಥಾಲಯ ಮೇಲ್ವಿಚಾರಕ ಮೈಲಾರಿಗೌಡ ಮಾತನಾಡಿ, ಗ್ರಂಥಾಲಯ ನಿತ್ಯ ಬೆಳಗ್ಗೆ 8ರಿಂದ ಸಂಜೆ 4 ರವರೆಗೆ ತೆರೆದಿರುತ್ತದೆ. ವಿದ್ಯಾರ್ಥಿಗಳು ತಮಗೆ ಬೇಕಾದ ಪುಸ್ತಕಗಳನ್ನು ಪಡೆಯುವ ಮೂಲಕ ಗ್ರಂಥಾಲಯವನ್ನು ಸದ್ಬಳಕೆ ಮಾಡಿಕೊಳ್ಳಬೇಕು ಎಂದರು. ಈ ವೇಳೆ ಗ್ರಾಪಂ ಉಪಾಧ್ಯಕ್ಷೆ ಸೌಮ್ಯ ಸಂತೋಷ್, ಸದಸ್ಯರಾದ ಶ್ವೇತ, ಸುಮಲತಾ, ಲಕ್ಷ್ಮಿ, ಶಿಲ್ಪ, ವೀಣಾ, ಗಿರಿಗೌಡ, ರಾಜು, ಈಶ್ವರ, ಮುಖಂಡರಾದ ಮಲ್ಲೇಶ್, ಪಂಚಾಯಿತಿ ನೌಕರರಾದ ಶ್ರೀನಿಧಿ, ಅಣ್ಣೇಗೌಡ, ದೇವರಾಜು. ಮುರುಗೇಶ್ ಹಾಗೂ ಸಾರ್ವಜನಿಕರು ಹಾಜರಿದ್ದರು.

ಮೇ 23ರಂದು ಕಾರ್ಯಾಗಾರ

ಹುಣಸೂರು, ಮೇ 20– ಆದಿವಾಸಿ ಬುಡಕಟ್ಟು ಸಮುದಾಯಗಳ ತಾಯಿ ಭಾಷೆಗಳ ಕುರಿತು ಚರ್ಚಿಸಲು ಮೇ 23ರಂದು ನಗರದ ಡೀಡ್ ಕಚೇರಿ ಆವರಣದಲ್ಲಿ ರಾಜ್ಯ ಬುಡಕಟ್ಟು ಸಂಶೋಧನಾ ಸಂಸ್ಥೆ, ಬುಡಕಟ್ಟು ಕೃಷಿಕರ ಸಂಘ ಹಾಗೂ ಡೀಡ್ ಜಂಟಿಯಾಗಿ ಕಾರ್ಯಾಗಾರ ಆಯೋಜಿಸಲಾಗಿದೆ.

ಕಾರ್ಯಾಗಾರದಲ್ಲಿ ಜೇನು ಕುರುಬ, ಬೆಟ್ಟ ಕುರುಬ, ಇರುಳಿಗರ, ಪಂಜರಿ ಹಾಗೂ ಪಣಿಯರವರ ತಾಯಿ ಭಾಷೆಗಳ ಕುರಿತು ಚರ್ಚಿಸಲಾಗುವುದು. ಸಂಶೋಧನಾ ಕೇಂದ್ರದ ನಿರ್ದೇಶಕರಾದ ಡಾ.ಶ್ರೀನಿವಾಸ್ ಹಾಗೂ ಕೆಲವು ಸಂಪನ್ಮೂಲ ವ್ಯಕ್ತಿಗಳು ಮಾರ್ಗದರ್ಶನ ನೀಡುವರು. ಅಲ್ಲದೇ ಸಂಶೋಧನಾ ಕೇಂದ್ರ ಹಾಗೂ ಡೀಡ್ ತಯಾರಿಸಿರುವ ಎರಡು ಜೇನುನುಡಿ ಪುಸ್ತಕಗಳನ್ನು ಚರ್ಚೆಗೆ ಒಳಪಡಿಸಲಾಗುವುದು. ಉಳಿದ ಆದಿವಾಸಿ ಬುಡಕಟ್ಟು ಜನರ ಭಾಷೆ ಅಧ್ಯಯನಕ್ಕೆ ರೂಪುರೇಷೆ ತಯಾರಿಸಲಾಗುವುದು. ಕಾರ್ಯಾಗಾರದಲ್ಲಿ 5 ಭಾಷೆಗಳನ್ನು ಮಾತನಾಡುವ ಪ್ರತಿನಿಧಿಗಳು ಭಾಗವಹಿಸಲಿದ್ದು, ಮೂಲನಿವಾಸಿ ಬುಡಕಟ್ಟುಗಳ ಅಭಿವೃದ್ಧಿಗೆ ಇರುವ ಯೋಜನೆಗಳ ಕುರಿತು ಮೈಸೂರು ಮತ್ತು ಕೊಡಗು ಜಿಲ್ಲೆಯ ಪ್ರತಿನಿಧಿಗಳೊಂದಿಗೆ ಚರ್ಚಿಸಲಾಗುವುದು ಎಂದು ಡೀಡ್ ನಿರ್ದೇಶಕ ಡಾ. ಎಸ್.ಶ್ರೀಕಾಂತ್, ಸಂಘದ ಅಧ್ಯಕ್ಷ ಪಿ. ಕೆ.ರಾಮು ತಿಳಿಸಿದ್ದಾರೆ.

ಮುಖ್ಯಮಂತ್ರಿಯಾಗಿ ಸಿದ್ದರಾಮಯ್ಯ ಪ್ರಮಾಣ ವಚನ ಸ್ವೀಕಾರ ಹಿನ್ನೆಲೆ ಸಂಭ್ರಮಾಚರಣೆ

ಹೆಳವರಹುಂಡಿಯಲ್ಲಿ ಸಿದ್ದು ಕಟೌಟ್‌ಗೆ ಹಾಲಿನ ಅಭಿಷೇಕ



ತಿ.ನರಸೀಪುರ, ಮೇ 20– ರಾಜ್ಯದ ಮುಖ್ಯಮಂತ್ರಿಯಾಗಿ ಸಿದ್ದರಾಮಯ್ಯ ಪ್ರಮಾಣ ವಚನ ಸ್ವೀಕರಿಸಿದ ಹಿನ್ನೆಲೆಯಲ್ಲಿ ತಾಲೂಕಿನ ಹೆಳವರಹುಂಡಿ ಗ್ರಾಮಸ್ಥರು ಸಿದ್ದರಾಮಯ್ಯ ಕಟೌಟ್‌ಗೆ ಹಾಲಿನ ಅಭಿಷೇಕ ಮಾಡಿ, ಪಟಾಕಿ ಸಿಡಿಸಿ ಸಂಭ್ರಮಿಸಿದರು.

ತಾಲೂಕು ಕುರುಬರ ಸಂಘದ ನಿರ್ದೇಶಕ ಎಂ.ಕೆ.ಸಹದೇವ್ ನೇತೃತ್ವದಲ್ಲಿ ಹೆಳವರಹುಂಡಿ ಗ್ರಾಮದ ವೃತ್ತದಲ್ಲಿ ಜಮಾವಣೆಗೊಂಡ ಗ್ರಾಮಸ್ಥರು ಸಿದ್ದರಾಮಯ್ಯ ಪರ ಘೋಷಣೆ ಕೂಗಿದರು. ಅಲ್ಲದೇ ಸಿದ್ದರಾಮಯ್ಯ ಕಟೌಟ್‌ಗೆ ಹಾಲಿನ ಅಭಿಷೇಕ ಮಾಡಿ ಪಟಾಕಿ ಸಿಡಿಸುವುದರ ಜೊತೆಗೆ ಅನ್ನಸಂತರ್ಪಣೆ ಮಾಡಿ ಸಂಭ್ರಮಿಸಿದರು.

> ಚುನಾವಣೆಯಲ್ಲಿ ಸಿದ್ದರಾಮಯ್ಯನವರು ಅಭೂತಪೂರ್ವ ಗೆಲುವು ಸಾಧಿಸಲು ಕ್ಷೇತ್ರದ ಎಲ್ಲಾ ಸಮುದಾಯದವರ ಕೊಡುಗೆ ಅಪಾರ. ಕೇವಲ ಕುರುಬರ ಮತದಿಂದ ಸಿದ್ದರಾಮಯ್ಯ ಗೆಲುವು ಸಾಧಿಸಿದ್ದಾರೆ ಎಂದು ಭಾವಿಸುವಂತಿಲ್ಲ. ಈ ಗೆಲುವಿನ ಯಶಸ್ಸು ಎಲ್ಲ ಜಾತಿ, ಸಮುದಾಯಗಳಿಗೆ ಸಲ್ಲಬೇಕು. ಸಿದ್ದರಾಮಯ್ಯ ಕ್ಷೇತ್ರದಲ್ಲಿ ಯಾವುದೇ ಅಭಿವೃದ್ಧಿ ಮಾಡಿಲ್ಲ ಎನ್ನುವವರಿಗೆ ಈ ಬಾರಿ ಅಭಿವೃದ್ಧಿ ಎಂದರೇನು ಎಂಬುದನ್ನು ಮುಖ್ಯಮಂತ್ರಿಯಾಗಿ ತೋರಿಸಿ ಕೊಡಲಿದ್ದಾರೆ.
>
> \- **ಸುರೇಶ್**, ಸೇವಾಶ್ರಯ ಫೌಂಡೇಶನ್ ಉಪಾಧ್ಯಕ್ಷ.

ಕಾಂಗ್ರೆಸ್ ವಿದ್ಯಾರ್ಥಿ ಘಟಕದ ಅಧ್ಯಕ್ಷ ಕಿಶೋರ್ ಮಾತನಾಡಿ, ಹಿಂದುಳಿದ ವರ್ಗಗಳ ಹರಿಕಾರ ಸಿದ್ದರಾಮಯ್ಯ ಅವರು ಎರಡನೇ ಬಾರಿಗೆ ರಾಜ್ಯದ ಮುಖ್ಯಮಂತ್ರಿಯಾಗಿ ಪ್ರಮಾಣವಚನ ಸ್ವೀಕರಿಸಿರುವುದು ಸಂತಸದ ವಿಷಯ. ರಾಜ್ಯದ ಜನತೆಯ ಆಶಯಕ್ಕೆ ಪೂರಕವಾಗಿ ಅವರು ಅಧಿಕಾರ ನಡೆಸಲಿದ್ದಾರೆ. ಚುನಾವಣಾ ಪೂರ್ವದಲ್ಲಿ ಜನತೆಗೆ ನೀಡಿದ್ದ ಗ್ಯಾರಂಟಿಗಳನ್ನು ಈಡೇರಿಸುವ ಮೂಲಕ ರಾಜ್ಯವನ್ನು ಕಲ್ಯಾಣ ಕರ್ನಾಟಕ ಮಾಡಲಿದ್ದಾರೆ ಎಂದರು.

ಸಿಗಂದೂರಲ್ಲಿ ವಿಶೇಷ ಪೂಜೆ

ತಿ.ನರಸೀಪುರ: ರಾಜ್ಯದ ಮುಖ್ಯಮಂತ್ರಿಯಾಗಿ 2ನೇ ಬಾರಿಗೆ ಸಿದ್ದರಾಮಯ್ಯ ಹಾಗೂ ಉಪ ಮುಖ್ಯಮಂತ್ರಿಯಾಗಿ ಡಿ.ಕೆ.ಶಿವಕುಮಾರ್ ಪ್ರಮಾಣವಚನ ಸ್ವೀಕರಿಸಿದ ಹಿನ್ನೆಲೆಯಲ್ಲಿ ವರುಣ ಕ್ಷೇತ್ರದ ಕಾಂಗ್ರೆಸ್ ಮುಖಂಡರು ಶ್ರೀಸಿಗಂದೂರು ಚೌಡೇಶ್ವರಿ ದೇವಾಲಯದಲ್ಲಿ ವಿಶೇಷ ಪೂಜೆ ಸಲ್ಲಿಸಿದರು. ವರುಣ ಕ್ಷೇತ್ರದ ಭೈರಾಪುರ ಗ್ರಾಪಂ ಮಾಜಿ ಉಪಾಧ್ಯಕ್ಷ ಪುಟ್ಟು ನೇತೃತ್ವದಲ್ಲಿ ತೆರಳಿದ ಕಾರ್ಯಕರ್ತರು, ಸಿದ್ದರಾಮಯ್ಯ ಹಾಗೂ ಡಿ.ಕೆ.ಶಿವಕುಮಾರ್ ಹೆಸರಿನಲ್ಲಿ ವಿಶೇಷ ಪೂಜೆ ಸಲ್ಲಿಸಿದರು. ಅಲ್ಲದೇ ಇವರಿಬ್ಬರಿಗೂ ಚೌಡೇಶ್ವರಿ ತಾಯಿ ಆಯಸ್ಸು, ಆರೋಗ್ಯ ನೀಡಿ ಸರ್ಕಾರವನ್ನು ಉತ್ತಮವಾಗಿ ನಡೆಸುವ ಶಕ್ತಿ ಕರುಣಿಸಲಿ ಎಂದು ಪ್ರಾರ್ಥಿಸಿದರು. ಈ ವೇಳೆ ಉಕ್ಕಲಗೆರೆ ಗೌರಿಶಂಕರ್, ಮಹೇಶ್, ಶಶಿಧರ್, ಮನು ಸೇರಿದಂತೆ ಇನ್ನಿತರರಿದ್ದರು.

ಸಿದ್ದರಾಮಯ್ಯ ನೇತೃತ್ವದಲ್ಲಿ ಕಾಂಗ್ರೆಸ್ ಪಕ್ಷ ಸ್ಪಷ್ಟ ಬಹುಮತದೊಂದಿಗೆ ಅಧಿಕಾರದ ಚುಕ್ಕಾಣಿ ಹಿಡಿದಿದೆ. ಈ ಹಿಂದೆ ಸಿದ್ದರಾಮಯ್ಯನವರಿಗೆ ಆಡಳಿತ ನಡೆಸಿದ ಅನುಭವವಿದ್ದು, ಈ ಬಾರಿಯೂ ರಾಜ್ಯದ ಜನತೆಗೆ ಅನೇಕ ಭಾಗ್ಯಗಳನ್ನು ನೀಡುವ ಜೊತೆಗೆ 5 ವರ್ಷ ಆಡಳಿತ ನಡೆಸಲಿ ಹಾಗೂ ಮುಂದೆ ಅವರು ದೇಶದ ಪ್ರಧಾನಿಯಾಗಿ ಜನರ ಸೇವೆ ಮಾಡಲಿ ಎಂದು ದೇವರಲ್ಲಿ ಪ್ರಾರ್ಥನೆ ಸಲ್ಲಿಸುತ್ತೇನೆ ಎಂದರು.

ತಾಲೂಕು ಕುರುಬರ ಸಂಘದ ನಿರ್ದೇಶಕ ಎಂ.ಕೆ.ಸಹದೇವ್ ಮಾತನಾಡಿ, ಸಿದ್ದರಾಮಯ್ಯನವರು ರಾಜ್ಯ ಕಂಡ ಅತ್ಯುತ್ತಮ ಸಂಸದೀಯ ಪಟುವಾಗಿದ್ದು ಕ್ಷೇತ್ರದ ಜನತೆ ಅವರಿಗೆ ಈ ಬಾರಿ ಹೆಚ್ಚಿನ ಮತ ನೀಡುವ ಮೂಲಕ ಅವರು ಮುಖ್ಯಮಂತ್ರಿಯಾಗುವ ಸದವಕಾಶ ಕಲ್ಪಿಸಿದ್ದಾರೆ. ಸಿದ್ದರಾಮಯ್ಯನವರು ಕೊಟ್ಟ ಮಾತಿನಂತೆ ಜನರಿಗೆ ನೀಡಿದ್ದ ಗ್ಯಾರಂಟಿಗಳನ್ನು ಈಡೇರಿಸುವ ಭರವಸೆ ನೀಡುವ ಮೂಲಕ ತಮ್ಮ ಮಾತಿಗೆ ಬದ್ಧರಾಗಿ ನಡೆದುಕೊಂಡಿದ್ದಾರೆ. ಇಂತಹ ಉತ್ತಮ ರಾಜಕಾರಣಿ ಸೇವೆ ಕೇವಲ ರಾಜ್ಯಕ್ಕಷ್ಟೇ ಸೀಮಿತವಾಗಬಾರದು. ಮುಂದೆ ಅವರು ಕೇಂದ್ರ ಸರ್ಕಾರದದಲ್ಲಿ ಉನ್ನತ ಸ್ಥಾನಗಳಿಸಿ ದೇಶ ಸೇವೆ ಮಾಡುವಂತಾಗಬೇಕು. ರಾಜ್ಯದ ಜನತೆ ಈ ಬಾರಿ ಬಿಜೆಪಿ ಸರ್ಕಾರವನ್ನು ಕಿತ್ತೊಗೆದಂತೆ ಕೇಂದ್ರದಲ್ಲಿಯೂ ಭ್ರಷ್ಟ ಸರ್ಕಾರ ಕಿತ್ತೊಗೆಯಬೇಕಿದೆ ಎಂದರು.

ಈ ವೇಳೆ ವರುಣ ಯುವ ಕಾಂಗ್ರೆಸ್ ಅಧ್ಯಕ್ಷ ಅಮಾಸೆಗೌಡ, ಮುಖಂಡರಾದ ಪುಟ್ಟಸ್ವಾಮಿ, ಕೆ.ಗಣೇಶ್, ಬಸವಣ್ಣ, ರಮೇಶ್, ನಾಗರಾಜು, ಸಿದ್ದರಾಜು, ರೇವಣ್ಣ ಚಿಕ್ಕಗಂಡು, ರಾಮು, ಗೋವಿಂದ, ರಾಯಣ್ಣ, ಮನು ಸೇರಿದಂತೆ ಯುವ ಗರ್ಜನೆ ಯುವಕ ಮಿತ್ರರು ಇದ್ದರು.

ಪುಟ್ಟಶೆಟ್ಟಿ ನಿಧನ



ಹುಣಸೂರು, ಮೇ 20– ತಾಲೂಕಿನ ಕಟ್ಟೆಮಳಲವಾಡಿ ಗ್ರಾಮದ ನಿವಾಸಿ ಪುಟ್ಟಶೆಟ್ಟಿ (80) ಗುರುವಾರ ಸಂಜೆ ನಿಧನರಾದರು. ಮೃತರು ಪತ್ನಿ ದೇವಮ್ಮ, ಪುತ್ರ ರಮೇಶ್, ಸೊಸೆ, ನಾಲ್ವರು ಪುತ್ರಿಯರು, ಅಳಿಯಂದಿರು, ಮೊಮ್ಮಕ್ಕಳು ಸೇರಿದಂತೆ ಅಪಾರ ಬಂಧುಗಳನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಶುಕ್ರವಾರ ಮೃತರ ಜಮೀನಿನಲ್ಲಿ ನೆರವೇರಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಸಣ್ಣಮ್ಮ



ಹುಣಸೂರು, ಮೇ 20– ನಗರದ ಮಹಿಳಾ ಸರ್ಕಾರಿ ಕಾಲೇಜಿನ ಉಪನ್ಯಾಸಕ ಡಾ.ಭಾಸ್ಕರ್ ಮಾತೃಶ್ರೀ ಹಾಗೂ ಕಟ್ಟೆಮಳಲವಾಡಿ ಗ್ರಾಮದ ಮಾಜಿ ಚೇರ್ಮನ್ ಶಂಕರಪ್ಪ ಅವರ ಪತ್ನಿ ಸಣ್ಣಮ್ಮ(80) ಶನಿವಾರ ಮಧ್ಯಾಹ್ನ ನಿಧನರಾದರು. ಮೃತರು ಆರು ಪುತ್ರರು, ಮೂವರು ಪುತ್ರಿಯರು ಸೇರಿದಂತೆ ಅಪಾರ ಬಂಧುಗಳನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಭಾನುವಾರ ಮೃತರ ಜಮೀನಿನಲ್ಲಿ ನೆರವೇರಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಶಿವರಾಜಪ್ಪ



ನಂಜನಗೂಡು, ಮೇ 20– ತಾಲೂಕಿನ ಅಹಲ್ಯ ಗ್ರಾಮದ ನಿವಾಸಿ ಶಿವರಾಜಪ್ಪ(65) ಶುಕ್ರವಾರ ರಾತ್ರಿ ನಿಧನರಾದರು. ಮೃತರು ಪತ್ನಿ, ಇಬ್ಬರು ಪುತ್ರರು, ಇಬ್ಬರು ಪುತ್ರಿಯರು ಸೇರಿದಂತೆ ಅಪಾರ ಬಂಧುಗಳನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಸ್ವಗ್ರಾಮದ ಮೃತರ ಜಮೀನಿನಲ್ಲಿ ಶನಿವಾರ ನೆರವೇರಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ನಂಜುಂಡಪ್ಪ



ಹನಗೋಡು, ಮೇ 20– ಗ್ರಾಮದ ನಿವಾಸಿ ನಂಜುಂಡಪ್ಪ (55) ಶನಿವಾರ ಬೆಳಗ್ಗೆ ನಿಧನರಾದರು. ಮೃತರು ಪತ್ನಿ ಸೇರಿದಂತೆ ಓರ್ವ ಪುತ್ರ, ಪುತ್ರಿ ಸೇರಿದಂತೆ ಅಪಾರ ಬಂಧುಗಳನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಸಂಜೆ ಮೃತರ ಜಮೀನಿನಲ್ಲಿ ನೆರವೇರಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.


ಎಲ್. ಚೌಡಪ್ಪ ರವರಿಗೆ
ಹುಟ್ಟು ಹಬ್ಬದ ಶುಭಾಶಯಗಳು
VISMAYA
8050302424